ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 143 ಸಂಚಿಕೆ- 143 | PAGE-8 ಪುಟ-8 | ಬುಧವಾರ 16.07.2025 | RS.2/- ಬೆಲೆ 2/-

## ಭೂಮಿಗೆ ಮರಳಿದ ಶುಕ್ಲಾ





ಮಲ್ಲಮ್ಮ ನುಡಿ ವಾರ್ತೆ ನ್ಯೂಯಾರ್ಕ್:ಜು.15: ಯಶಸ್ವಿ ಬಾಹ್ಯಾಕಾಶಯಾನಮುಕ್ತಾಯಗೊಳಿಸಿದ ಭಾರತದ ಗಗನಯಾತ್ರಿ ಶುಭಾಂಶು ಶುಕ್ಲ ಅವರಿದ್ದ ತಂಡ ಇಂದು ಡ್ರ್ಯಾಗನ್ ನೌಕೆಯ ಮೂಲಕ ಯಶಸ್ವಿಯಾಗಿ ಭೂಮಿಗೆ ಮರಳಿದ್ದಾರೆ.

"ನಾವು ಮನೆಗೆ ಮರಳಿದ್ದೇವೆ" ಆಕ್ಸಿಯಮ್-4 ಮಿಷನ್ ಕಮಾಂಡರ್ ಪೆಗ್ಗಿ ವಿಟ್ಸನ್, ಜುಲೈ 15 ರಂದು ಪೆಸಿಫಿಕ್ ಮಹಾಸಾಗರದ ಸ್ಯಾನ್ ಡಿಯಾಗೋಬಳಿಯಕ್ಯಾಲಿಫೋರ್ನಿಯಾ ಕರಾವಳಿಯಲ್ಲಿ ಡ್ರ್ಯಾಗನ್ ಎಂದು ಕರೆಯಲ್ಪಡುವ ಬಾಹ್ಯಾಕಾಶ ನೌಕೆ ಇಳಿದ ಸ್ವಲ್ಪ ಸಮಯದ ನಂತರ, ಮಧ್ಯಾಹ್ನ 3.02 ಕ್ಕೆ ಆಕ್ಸಿಯಮ್ ಸ್ಪೇಸ್‌ನ ಕಮಾಂಡ್ ಕಂಟ್ರೋಲ್ ಸೆಂಟರ್‌ಗೆ ತಿಳಿಸಿದ ಸಂದೇಶ ಇದಾಗಿದೆ.

ಪೆಗ್ಗಿ ವಿಟ್ಸನ್ ಸಂದೇಶಕ್ಕೆ ಕಮಾಂಡ್ ಕೇಂದ್ರ "ಮನೆಗೆ ಸ್ವಾಗತ" ಎಂದು ಉತ್ತರಿಸಿದೆ. ಇದಕ್ಕೆ ಪೆಗ್ಗಿ ಉತ್ತರಿಸುತ್ತಾ, "ಮಹಾ ಸವಾರಿ ಮತ್ತು ಸುರಕ್ಷಿತ ಪ್ರಯಾಣಕ್ಕಾಗಿ ಧನ್ಯವಾದಗಳು." ಗ್ರೇಸ್‌ನಲ್ಲಿರುವ ಸಿಬ್ಬಂದಿ ಆರೋಗ್ಯವಾಗಿದ್ದಾರೆ ಎಂದು ತಿಳಿಸಿದ್ದಾರೆ.

ಆಕ್ಸಿಯಮ್-4ವಾಣಿಜ್ಯಬಾಹ್ಯಾಕಾಶ ಕಾರ್ಯಾಚರಣೆಯ ಭಾಗವಾಗಿ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಕಳೆದ 21 ದಿನಗಳ ನಂತರ, ಮಿಷನ್ ಪೈಲಟ್ ಆಗಿದ್ದ ಗ್ರೂಪ್ ಕ್ಯಾಪ್ಟನ್ ಮತ್ತು ಮಿಷನ್ ಪೈಲಟ್ ಶುಭಾಂಶು ಶುಕ್ಲಾ ಅವರು ಮಂಜಿನ ಆಕಾಶದಲ್ಲಿ ಸುರಕ್ಷಿತ ಲ್ಯಾಂಡಿಂಗ್ ಮಾಡಿದರು.

ಸ್ಪ್ಲಾಶ್ ಡೌನ್ ಘೋಷಿಸಿದ ಕೂಡಲೇ, ನೆಟಿಜನ್‌ಗಳು ಮತ್ತು ವಿಜ್ಞಾನ ಉತ್ಸಾಹಿಗಳು ಸಾಮಾಜಿಕ ಮಾಧ್ಯಮದಲ್ಲಿ ನಾಲ್ಕು ಸದಸ್ಯರ ತಂಡವು ಭೂಮಿಗೆ ಸುರಕ್ಷಿತವಾಗಿ ಮರಳಿದ್ದಕ್ಕಾಗಿ ಅಭಿನಂದಿಸಿದರು. ಆಕ್ಸಿಯಮ್-4 ಬಾಹ್ಯಾಕಾಶ ಯಾನ ಜೂನ್ 25 ರಂದು ಪ್ರಾರಂಭವಾಯಿತು ಮತ್ತು ಜೂನ್ 26 ರಂದು ಖಖಖ ನಲ್ಲಿ ಕೈಯಿಂದ ಡಾಕ್ ಮಾಡಲ್ಪಟ್ಟಿತು. ಸಿಬ್ಬಂದಿ ಜುಲೈ 14 ರಂದು ಅನ್‌ಡಾಕ್ ಮಾಡಿದ್ದರು.

ಸ್ಪ್ಲಾಶ್ ಡೌನ್ ಆದ ಕೂಡಲೇ ಐದು ದೋಣಿಗಳು ಗಗನಯಾತ್ರಿಗಳು ಮತ್ತು ಬಾಹ್ಯಾಕಾಶ ನೌಕೆಯ ಸುರಕ್ಷಿತ ನಿರ್ಗಮನವನ್ನು ಖಚಿತಪಡಿಸಿಕೊಳ್ಳಲು ಬಾಹ್ಯಾಕಾಶ ನೌಕೆಗೆ ಧಾವಿಸಿದವು. ಕಮಾಂಡ್ ಸೆಂಟರ್ ಮತ್ತು ಪ್ರಧಾನ ಕಚೇರಿಯಲ್ಲಿರುವ ಎಲ್ಲಾ ವಿಜ್ಞಾನಿಗಳು ಮತ್ತು ತಜ್ಞರು ಸ್ಪ್ಲಾಶ್ ಡೌನ್ ಮಾಡುವ ಮೊದಲು 6-7 ನಿಮಿಷಗಳ ಕಾಲ ತಮ್ಮ ಬೆರಳುಗಳನ್ನು ಅಡ್ಡಲಾಗಿ ಇಟ್ಟುಕೊಂಡಿದ್ದರು, ಏಕೆಂದರೆ ಅದು ಬ್ಲ್ಯಾಕ್-ಔಟ್ ಅವಧಿಯಾಗಿತ್ತು, ಈ ಸಮಯದಲ್ಲಿ ಸ್ಪ್ಲಾಶ್ ಡೌನ್ ಪ್ರಾರಂಭವಾಗುವ ಮೊದಲು ಶಾಖದ ಗುರಾಣಿಗಳು ಹೆಚ್ಚಿನ ತಾಪಮಾನದಲ್ಲಿ ಉರಿಯುತ್ತಿದ್ದವು. ಬ್ಲ್ಯಾಕ್-ಔಟ್ ಅವಧಿ ಸ್ಪ್ಲಾಶ್ ಡೌನ್ ಪ್ರಾರಂಭವಾಗುವ ಮೊದಲು 2.18 ನಿಮಿಷಗಳಾಗಿತ್ತು.ಸ್ಪ್ಲಾಶ್ ಡೌನ್ ಮಾಡುವ ಮೊದಲು ಬಾಹ್ಯಾಕಾಶ ನೌಕೆಯ ಅಂತಿಮ ವೇಗವನ್ನು ಗಂಟೆಗೆ 350 ಮೈಲುಗಳಿಂದ ಗಂಟೆಗೆ 15 ಮೈಲುಗಳಿಗೆ ಇಳಿಸಲಾಯಿತು. ಸ್ಪ್ಲಾಶ್ ಡೌನ್ ಮಾಡುವ ಮೊದಲು ಎರಡು ಡ್ರೋಜ್ ಚ್ಯೂಟ್‌ಗಳು 2.55 ನಿಮಿಷಗಳ ಮೊದಲು ತೆರೆದವು, ನಂತರ ಸ್ಪ್ಲಾಶ್ ಡೌನ್ ಮಾಡುವ ಮೊದಲು 2.30 ನಿಮಿಷಗಳ ಮೊದಲು ನಾಲ್ಕು ಮುಖ್ಯ ಪ್ಯಾರಾಚೂಟ್‌ಗಳನ್ನು ತೆರೆಯಲಾಯಿತು.ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣವನ್ನು ಹತ್ತಿದ ಮೊದಲ ಭಾರತೀಯ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ, ಬಾಹ್ಯಾಕಾಶ ನೌಕೆಯಿಂದ ನಿರ್ಗಮಿಸುವಾಗ ಕೈ ಬೀಸಿದ್ದಾರೆ. 18 ದಿನಗಳ ಕಾರ್ಯಾಚರಣೆ-ಯ ಸಮಯದಲ್ಲಿ ಅವರು ಸೂಕ್ಷ್ಮ ಗುರುತ್ವಾಕರ್ಷಣೆಯ ಪ್ರಯೋಗಗಳ ಶ್ರೇಣಿಯನ್ನು ನಡೆಸಿದರು.

## ಮಾನನಷ್ಟ ಮೊಕದ್ದಮೆ ರಾಹುಲ್ ಗಾಂಧಿಗೆ ಜಾಮೀನು



ಮಲ್ಲಮ್ಮ ನುಡಿ ವಾರ್ತೆ ಲಖನೌ:ಜು.15: ಭಾರತೀಯ ಸೈನಿಕರ ಟೀಕೆ ಹಿನ್ನೆಲೆಯಲ್ಲಿ ದಾಖಲಾಗಿದ್ದ ಮಾನನಷ್ಟ ಮೊಕದ್ದಮೆಯಲ್ಲಿ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರಿಗೆ ಲಖನೌ ನ್ಯಾಯಾಲಯ ಜಾಮೀನು ಮಂಜೂರು ಮಾಡಿದೆ. ರಾಹುಲ್ ಗಾಂಧಿ ಖುದ್ದು ನ್ಯಾಯಾಲಯಕ್ಕೆ ಹಾಜರಾದ ನಂತರ ಜಾಮೀನು ಮಂಜೂರು ಮಾಡಲಾಗಿದೆ.

2022 ರಲ್ಲಿ ಅವರ ಭಾರತ್ ಜೋಡೋ ಯಾತ್ರೆ ವೇಳೆ ಭಾರತೀಯ ಸೈನಿಕರ ವಿರುದ್ಧ ಮಾಡಿದ ಮಾನಹಾನಿಕರ ಹೇಳಿಕೆಗಳಿಗೆ ಸಂಬಂಧಿಸಿದ ಪ್ರಕರಣ ಇದಾಗಿದೆ ಎಂದು ರಾಹುಲ್ ಪರ ವಕೀಲ ಪ್ರಾಂಶು ಅಗರ್ವಾಲ್ ಹೇಳಿದ್ದಾರೆ. ನ್ಯಾಯಾಲಯದ ನಿರ್ದೇಶನದಂತೆ ರಾಹುಲ್ ಗಾಂಧಿ ಅವರು ಜಾಮೀನು ಬಾಂಡ್ ಮತ್ತು ಶ್ಯೂರಿಟಿಗಳನ್ನು ಒದಗಿಸಿದ ನಂತರ ಜಾಮೀನು ನೀಡಲಾಯಿತು ಎಂದು ಅವರು ತಿಳಿಸಿದರು.ವಕೀಲರಿಂದ ತುಂಬಿದ

(2ನೇ ಪುಟ ನೋಡಿ)

## ನರ್ಸ್ ಗಳ ನೋಂದಣಿಗಾಗಿ ವಿಶೇಷ ಡಿಜಿಲಾಕರ್ ಉದ್ಘಾಟಿಸಿದ ಸಿಎಂ ಸಿದ್ದರಾಮಯ್ಯ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.15: ದೇಶದಲ್ಲೇ ಮೊದಲ ಬಾರಿಗೆ ಶುಶ್ರೂಷಕರ ನೊಂದಣಿಗಾಗಿ ಕರ್ನಾಟಕ ರಾಜ್ಯ ನರ್ಸಿಂಗ್ ಕೌನ್ಸಿಲ್ ಅಭಿವೃದ್ಧಿಪಡಿಸಿದ ವಿಶೇಷ ಡಿಜಿಲಾಕರ್ ಆಧಾರಿತ ತಂತ್ರಜ್ಞಾನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ಉದ್ಘಾಟನೆ ಮಾಡಿದರು.

ವಿಶೇಷ ಡಿಜಿಲಾಕರ್ ಉದ್ಘಾಟಿಸಿ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ದೇಶದಲ್ಲಿ ಮೊದಲ ಬಾರಿಗೆ ಪರಿಚಯಿಸಲಾದ ಈ ತಂತ್ರಜ್ಞಾನ ಆಧಾರ್ ಆಧಾರಿತ ಡಿಜಿಲಾಕರ್, ಇ-ಕೆವೈಸಿ ಮೂಲಕ ನೋಂದಣಿ ಪ್ರಮಾಣಪತ್ರಗಳನ್ನು ನೀಡಲು ಅನುಕೂಲವಾಗುತ್ತದೆ ಎಂದು ಹೇಳಿದರು.ಈ ವ್ಯವಸ್ಥೆಯನ್ನು ಯುಐಡಿಎಐ, ಸಿ-ಇಜಿ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ(ಆರ್‌ಜಿಯುಎಚ್‌ಎಸ್) ಮತ್ತು ಕರ್ನಾಟಕ ರಾಜ್ಯ ನರ್ಸಿಂಗ್ ಪರೀಕ್ಷಾಮಂಡಳಿಯ ಸಹಯೋಗದೊಂದಿಗೆ ಅಭಿವೃದ್ಧಿಪಡಿಸಲಾಗಿದೆ.ಈ ತಂತ್ರಜ್ಞಾನದ ನೆರವಿನಿಂದ ಆಧಾರ್ ಇ-ಕೆವೈಸಿ ಯಿಂದ ಶುಶ್ರೂಷಕರ ವೈಯಕ್ತಿಕ ಡಾಟಾ, ವಿಳಾಸ, ಫೋಟೋ, ಹಾಗೂ ಇತರೆ ಮಾಹಿತಿಗಳನ್ನು ಆಧಾರ್ ಸರ್ವರ್ ನಿಂದ ನೇರವಾಗಿ ಕರ್ನಾಟಕ ಶುಶ್ರೂಷ ಪರಿಷತ್ ಪಡೆದುಕೊಳ್ಳಬಹುದಾಗಿದೆ. ಈ ಹಿಂದೆ ರಾಜ್ಯದ ಬೇರೆ ಬೇರೆ ಜಿಲ್ಲೆಗಳಿಂದ ನೋಂದಣಿಗಾಗಿ ಕರ್ನಾಟಕ ರಾಜ್ಯ ಶುಶ್ರೂಷ ಪರಿಷತ್ತಿನ ಬೆಂಗಳೂರಿನ ಕೇಂದ್ರ ಕಚೇರಿಗೆ ಬರಬೇಕಾಗಿತ್ತು.

## ಸಕಲ ಸರ್ಕಾರಿ ಗೌರವದೊಂದಿಗೆ ಸರೋಜಾದೇವಿ ಅಂತ್ಯಕ್ರಿಯೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.15: ಸೋಮವಾರ ನಿಧನರಾದ ಕನ್ನಡ ಚಿತ್ರರಂಗದ ಹಿರಿಯ ನಟಿ ಬಿ.ಸರೋಜಾದೇವಿ ಅವರು ಮಂಗಳವಾರ ತಮ್ಮ ಹುಟ್ಟೂರು ಚನ್ನಪಟ್ಟಣದ ದಶವಾರದ ಮಣ್ಣಲ್ಲಿ ಮಣ್ಣಾಗಿದ್ದು, ಅಭಿನಯ ಸರಸ್ವತಿ ಇನ್ನೂ ನೆನಪು ಮಾತ್ರ.

ಇಂದು ಮಧ್ಯಾಹ್ನ ಸಕಲ ಸರ್ಕಾರಿ ಗೌರವದೊಂದಿಗೆ, ಒಕ್ಕಲಿಗ ಸಂಪ್ರದಾಯದಂತೆ ಸರೋಜಾದೇವಿ ಅವರ ಅಂತ್ಯಕ್ರಿಯೆ ನೆರವೇರಿತು. ದಶವಾರದಲ್ಲಿ ಅವರ ತಾಯಿಯ ಸಮಾಧಿ ಪಕ್ಕವೇ ಅಂತ್ಯ ಸಂಸ್ಕಾರ ನಡೆದಿದೆ.ಸರೋಜಾದೇವಿ ಅವರ ಪುತ್ರ ಗೌತಮ್ ಅವರು ಅಂತಿಮ ವಿಧಿ ವಿಧಾನಗಳನ್ನು ಪೂರೈಸಿದರು. ಇದಕ್ಕೂ ಮುನ್ನ ಪೊಲೀಸರು ಕುಶಾಲ ತೋಪು ಸಿಡಿಸುವ ಮೂಲಕ ಗೌರವ ಸಲ್ಲಿಸಿದರು. ಈ ಸಂದರ್ಭದಲ್ಲಿ ಸರೋಜಾದೇವಿ ಅವರ ಕುಟುಂಬಸ್ಥರು, ಚಿತ್ರರಂಗದ ಗಣ್ಯರು ಹಾಗೂ ಅಭಿಮಾನಿಗಳು ಭಾಗವಹಿಸಿದ್ದರು.ಅಂತ್ಯಸಂಸ್ಕಾರಕ್ಕೂ ಮುನ್ನ ಅವರ ಪಾರ್ಥಿವ ಶರೀರವನ್ನು ಬೆಂಗಳೂರಿನಿಂದ ಮೆರವಣಿಗೆ ಮೂಲಕ ತರಲಾಯಿತು. ಬಳಿಕ ಪಲ್ಲಕ್ಕಿಯಲ್ಲಿಟ್ಟು ಅವರ ಪಾರ್ಥಿವ ಶರೀರವನ್ನು ತಂದು ಅಂತ್ಯಸಂಸ್ಕಾರ ಮಾಡಲಾಯಿತು.1955 ರಲ್ಲಿ ಮಹಾಕವಿಕಾಳಿದಾಸ ಚಿತ್ರದ ಮೂಲಕ

(2ನೇ ಪುಟ ನೋಡಿ)

## ಹೃದಯ ಸಂಬಂಧಿ ರೋಗ ಲಕ್ಷಣಗಳಿದ್ರೆ ಮಾತ್ರ ಆಸ್ಪತ್ರೆಗೆ ಹೋಗಿ, ಆತಂಕ ಬೇಡ : ಶರಣ ಪ್ರಕಾಶ ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.15: ರಾಜ್ಯದಲ್ಲಿ ಈಗ ಹೆಚ್ಚಾಗುತ್ತಿರುವ ಹೃದಯಾಘಾತ ಪ್ರಕರಣಗಳ ಕುರಿತು ಜನರು ಆತಂಕ ಪಡುವ ಅಗತ್ಯವಿಲ್ಲ. ಸರಾಸರಿ ಹೃದಯಾಘಾತದ ಪ್ರಕರಣಗಳು ಕಳೆದ ವರ್ಷದಷ್ಟೇ ಇದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ ಪಾಟೀಲ್ ಅವರು ತಿಳಿಸಿದರು.

ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರೊಂದಿಗೆ ವಿಕಾಸಸೌಧದಲ್ಲಿ ಜಂಟಿ ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಚಿವರು, ಸರ್ಕಾರ ಈ ವಿಷಯದಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳುತ್ತಿದೆ. ಜನರು ಆತಂಕಪಡಬಾರದು. ಹಾಸನದಲ್ಲಿ ಹೃದಯಾಘಾತ ಪ್ರಕರಣ ಹೆಚ್ಚುತ್ತಿವೆ ಎನ್ನುವ ಸುದ್ದಿ ಕೇಳಿ ಜಯದೇವ ಆಸ್ಪತ್ರೆ ಸೇರಿದಂತೆ ಅನೇಕ ಆಸ್ಪತ್ರೆಗಳಲ್ಲಿ ರೋಗಿಗಳ ಸಂಖ್ಯೆ ಮತ್ತು ಮುಂಜಾಗ್ರತೆ ಕ್ರಮ ತೆಗೆದುಕೊಳ್ಳುವವರ ಸಂಖ್ಯೆಯೂ ಗಣನೀಯವಾಗಿ ಏರಿಕೆಯಾಗಿದೆ. ಇದರಿಂದ ವಿಚಿತ್ರ ಸನ್ನಿವೇಶ ಎದುರಾಗುತ್ತಿದೆ ಎಂದು ತಿಳಿಸಿದರು.

ಕೋವಿಡ್ ಲಸಿಕೆಗೂ ಹಾಸನದಲ್ಲಿ ಸಂಭವಿಸಿದ ಹೃದಯಾಘಾತ ಪ್ರಕರಣಗಳಿಗೂ ಯಾವುದೇ

(2ನೇ ಪುಟ ನೋಡಿ)

## ಸ್ವಾಮೀಜಿ-ಕಾಶಪ್ಪನವರ ನಡುವೆ ತಿಕ್ಕಾಟ ಪಂಚಮಸಾಲಿ ಪೀಠಕ್ಕೆ ಬೀಗ!

ಮಲ್ಲಮ್ಮನುಡಿವಾರ್ತೆ ಬಾಗಲಕೋಟೆ,ಜು.15- ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ಹಾಗೂ ಹುನಗುಂದ ಶಾಸಕ ಹಾಗೂ ಪಂಚಮಸಾಲಿ ಟ್ರಸ್ಟ್ ರಾಷ್ಟ್ರೀಯ ಅಧ್ಯಕ್ಷರೂ ಆಗಿರುವ ವಿಜಯಾನಂದ ಕಾಶಪ್ಪನವರ ಮಧ್ಯೆ ಮತ್ತೆ ಗುದ್ದಾಟ ಆರಂಭವಾಗಿದ್ದು, ಈಗ ಜಿಲ್ಲೆಯ ಕೂಡಲಸಂಗಮದಲ್ಲಿರುವ ಪಂಚಮಸಾಲಿ ಪೀಠದ ಮಠಕ್ಕೆ ಬೀಗ ಹಾಕಲಾಗಿದೆ. ಶಾಸಕ ಕಾಶಪ್ಪನವರ ಬೆಂಬಲಿಗರು ಬೀಗ ಹಾಕಿದ್ದಾರೆಂದು ಹೇಳಲಾಗಿದೆ. ಕಳೆದ ಒಂದೂವರೆ ವರ್ಷದಿಂದ ಶ್ರೀಗಳು ಮಠಕ್ಕೆ ಬಂದಿಲ್ಲ. ಹೀಗಾಗಿ ಅಲ್ಲಿ ಅಕ್ರಮ ಚಟುವಟಿಕೆಗಳು ನಡೆಯುವುದನ್ನು ತಪ್ಪಿಸಲು ಮಠಕ್ಕೆ ಬೀಗ ಹಾಕಲಾಗಿದೆ ಎಂದು ಶಾಸಕ ಕಾಶಪ್ಪನವರ ಹೇಳಿದ್ದು, ಪುಂಡರ ಚಟುವಟಿಕೆ ತಡೆಯಲು ಈ ಕ್ರಮ ಅನಿವಾರ್ಯವಾಗಿತ್ತು. ಹೀಗಾಗಿ ನಾನು ನನ್ನ ಕರ್ತವ್ಯ ನಿರ್ವಹಿಸಿದ್ದೇನೆ. ಈಗ ಮಠದ ಆವರಣದಲ್ಲಿ ಸಿಸಿ ಕ್ಯಾಮರಾ ಅಳವಡಿಸಲಾಗಿದೆ ಎಂದು ಹೇಳಿದ್ದಾರೆ. ಬೀಗ ಹಾಕಿರುವ ಬಗ್ಗೆ ಶ್ರೀಗಳು ಹೇಳಿಕೆ ನೀಡಿದ್ದು, ತಾವು ಪಂಚಮಸಾಲಿ ಸಮುದಾಯಕ್ಕೆ ಮೀಸಲಾತಿ

ಕೊಡಿಸುವುದಕ್ಕಾಗಿ ಸಮಾಜ ಸಂಘಟನೆಗಾಗಿ ರಾಜ್ಯಾದ್ಯಂತ ಪ್ರವಾಸ ಕೈಗೊಂಡಿರುವ ಹಿನ್ನೆಲೆಯಲ್ಲಿ ಮಠದಲ್ಲಿರಲು ಸಾಧ್ಯವಾಗಿಲ್ಲ. ಆದರೆ ಯಾವುದೇ ಅಕ್ರಮ ಚಟುವಟಿಕೆಗಳು ಅಲ್ಲಿ ನಡೆಯುತ್ತಿಲ್ಲ. ಮಠಕ್ಕೆ ಬೀಗ ಹಾಕಿರುವುದು ಉದ್ದೇಶಪೂರ್ವಕವಾಗಿದೆ ಎಂದಿದ್ದಾರೆ. ಇದರಿಂದಾಗಿ ಈಗ ಬಸವಜಯ ಮೃತ್ಯುಂಜಯ ಸ್ವಾಮೀಜಿ ಮತ್ತು ವಿಜಯಾನಂದ ಕಾಶಪ್ಪನವರ ನಡುವಿನ ಗುದ್ದಾಟ ಮತ್ತಷ್ಟು ತೀವ್ರಗೊಳ್ಳುವ ಸಾಧ್ಯತೆಯಿದೆ. ಸ್ವಾಮೀಜಿಯನ್ನು ಪೀಠದಿಂದ ಕೆಳಗಿಸುವ ಪ್ರಯತ್ನವನ್ನು ಕಾಶಪ್ಪನವರ ಮಾಡುತ್ತಿದ್ದಾರೆಯೇ

## ಕೇಂದ್ರದ ವಿದೇಶಿ ತೊಗರಿ ಆಮದು ಒಪ್ಪಂದಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಅಸಮಾಧಾನ



ಮಲ್ಲಮ್ಮನುಡಿ ವಾರ್ತೆ ಕಲಬುರಗಿ: ಜು.15: ರಾಜ್ಯದಲ್ಲಿ ಉತ್ಪನ್ನವಾಗುತ್ತಿರುವ ತೊಗರಿಯನ್ನು ನಿರ್ಲಕ್ಷಿಸಿ ವಿದೇಶದಿಂದ ಆಮದು ಮಾಡಿಕೊಳ್ಳುವ ಕೇಂದ್ರದ ಒಪ್ಪಂದಕ್ಕೆ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯಿತಿ ರಾಜ್, ಮಾಹಿತಿ ತಂತ್ರಜ್ಞಾನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಅವರು, ದೇಶದಲ್ಲಿಯೇ ಕರ್ನಾಟಕ ಅತಿಹೆಚ್ಚು ತೊಗರಿ ಉತ್ಪಾದಿಸುವ ರಾಜ್ಯವಾಗಿದೆ. ರಾಜ್ಯದ ಉತ್ಪಾದನೆಯಲ್ಲಿ ಶೇಕಡಾ 40 ಪ್ರಮಾಣದ ತೊಗರಿ ಕಲಬುರ್ಗಿ ಜಿಲ್ಲೆಯಲ್ಲಿ ಒಂದರಲ್ಲೇ ಬೆಳೆಯುತ್ತಿದ್ದು ತನ್ನ ಉತ್ಕೃಷ್ಟ ಗುಣಮಟ್ಟದಿಂದಾಗಿ ಭೌಗೋಳಿಕ ಸೂಚಕ ಟ್ಯಾಗ್ ಹೊಂದಿರುವುದು ಗಮನಾರ್ಹ ಎಂದು ತಿಳಿಸಿದ್ದಾರೆ.

2024-2025ರ ಸಾಲಿನಲ್ಲಿ ಭಾರತ 35 ಲಕ್ಷ ಮೆಟ್ರಿಕ್ ಟನ್ ತೊಗರಿ ಉತ್ಪಾದಿಸಿದೆ. ಆದರೆ, ಈ ಉತ್ಪಾದನೆಯಲ್ಲಿ ಕೇಂದ್ರದ ಮೋದಿ ಸರ್ಕಾರ ಕೇವಲ ಶೇಕಡಾ 10ರಷ್ಟು ಮಾತ್ರ ಸಂಗ್ರಹಿಸಿದೆ. ಇದು ಕರ್ನಾಟಕದ ರೈತರು ತಾವು ಬೆಳೆದ 10 ಲಕ್ಷ ಕ್ವಿಂಟಾಲ್ ತೊಗರಿಯನ್ನು ನಿಗದಿಪಡಿಸಿದ 7,550ರೂ.ಗಳು ಕನಿಷ್ಠ ಬೆಂಬಲ ಬೆಲೆಗಿಂತ ಕಡಿಮೆ ಬೆಲೆಗೆ ಅಂದರೆ 6,000ರೂ.ಗಳಿಗೆ ಒತ್ತಾಯಪೂರ್ವಕವಾಗಿ ಮಾರಾಟ ಮಾಡುವಂತಾಗಿತ್ತು. ಇದರಿಂದಾಗಿ ನಮ್ಮ ರೈತರು 1,550 ಕೋಟಿ ರೂ.ಗಳಷ್ಟು ನಷ್ಟ ಅನುಭವಿಸುವಿಸುವಂತಾಗಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ.

ಈ ವರ್ಷದ ಕನಿಷ್ಠ ಬೆಂಬಲ ಬೆಲೆ 8,000 ರೂ.ಗಳು ನಿಗದಿಯಾಗಿದೆ. ಆದರೆ ತೊಗರಿ ಬೆಲೆ 6,250ರೂ.ಗಳಿಗೆ ಕುಸಿದಿದೆ. ಇದು ಕಳೆದ ಎರಡು ವರ್ಷದ ದರಗಳ ಅರ್ಧದಷ್ಟಾಗಿದೆ. ಇದಕ್ಕೆ ಕೇಂದ್ರ ಸರ್ಕಾರದ ತೊಗರಿ ಆಮದು ನಿರ್ಧಾರ ಕಾರಣವಾಗಿದೆ. ನಮ್ಮ ರೈತರು ಬೆಳೆದ ಉತ್ಕೃಷ್ಟ ಗುಣಮಟ್ಟದ ತೊಗರಿ ಬದಲಿಗೆ ಕಡಿಮೆ ಗುಣಮಟ್ಟದ ತೊಗರಿ ಆಮದಿಗೆ ಕೇಂದ್ರ ಮುಂದಾಗಿದೆ. ಮೇ 2021ರಿಂದ ತೊಗರಿ ಆಮದು ಸುಂಕ ಮುಕ್ತವಾಗಿದ್ದು, ಮಾರ್ಚ್

(2ನೇ ಪುಟ ನೋಡಿ)

## ಕರ್ನಾಟಕದ ಭಕ್ತರ ಅನುಕೂಲಕ್ಕಾಗಿ ಮಂತ್ರಾಲಯದಲ್ಲಿ ಸುವ್ಯವಸ್ಥಿತ ವಸತಿ ಗೃಹ ನಿರ್ಮಾಣಕ್ಕೆ ಕ್ರಮ: ಸಚಿವ ರೆಡ್ಡಿ



ರಾಯಚೂರ ಜು 15 : ಕರ್ನಾಟಕ ರಾಜ್ಯದಿಂದಲೇ ಹೆಚ್ಚಿನ ಸಂಖ್ಯೆಯಲ್ಲಿ ಬರುವ ಭಕ್ತರ ಅನುಕೂಲಕ್ಕಾಗಿ ಮಂತ್ರಾಲಯದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಸತಿ ಗೃಹಗಳ ನಿರ್ಮಾಣಕ್ಕೆ ಕ್ರಮವಹಿಸುವುದಾಗಿ ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಹೇಳಿದರು.

ಜುಲೈ 15ರಂದು ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಮಂತ್ರಾಲಯಕ್ಕೆ ಭೇಟಿ ನೀಡಿ ಶ್ರೀ ರಾಘವೇಂದ್ರ ಸ್ವಾಮಿ ಅವರ ದರ್ಶನದ ಪಡೆದು, ಮಂತ್ರಾಲಯದ ಕರ್ನಾಟಕ ಛತ್ರದಲ್ಲಿ ಧಾರ್ಮಿಕ ದತ್ತಿ ಇಲಾಖೆಯಿಂದ ನಿರ್ಮಾಣ ಮಾಡಿರುವ ನೂತನ ಹಾಗೂ ಹಳೆ ಕಟ್ಟಡಗಳ ಪರಿಶೀಲನೆ ನಡೆಸಿ ಕರ್ನಾಟಕ ರಾಜ್ಯ ವಸತಿ ಗೃಹ ಕಟ್ಟಡದ ಸಭಾಂಗಣದಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಮಂತ್ರಾಲಯಕ್ಕೆ ಪ್ರತಿ ದಿನ ಅಂ-ದಾಜು 200 ಬಸ್ಸಗಳು ರಾಜ್ಯದ ಬೇರೆ ಬೇರೆ ಭಾಗಗಳಿಂದ ಬರುತ್ತವೆ. ರೈಲಿನ ಮೂಲಕವು ಜನರು ಮಂತ್ರಾಲಯಕ್ಕೆ ಬರುತ್ತಾರೆ. ಆಂಧ್ರಕ್ಕೆ ಹೋಲಿಸಿದರೆ ಶೇ.60ರಷ್ಟು ಜನರು ಕರ್ನಾಟಕ ರಾಜ್ಯದಿಂದಲೇ ಮಂತ್ರಾಲಯಕ್ಕೆ ಆಗಮಿಸುತ್ತಾರೆ. ಈ ಬಗ್ಗೆ ಮಂತ್ರಾಲಯದ ಸ್ವಾಮೀಜಿ ಅವರೊಂದಿಗೆ ಚರ್ಚಿಸಿದಾಗ, ಕರ್ನಾಟಕದಿಂದ ಬರುವ ಭಕ್ತರ ಅನುಕೂಲಕ್ಕಾಗಿ ಮಂತ್ರಾಲಯದಲ್ಲಿ ವಸತಿ ಗೃಹಗಳ ನಿರ್ಮಾಣಕ್ಕೆ ಸೂಕ್ತವಾದ ಜಾಗದ ವ್ಯವಸ್ಥೆ ಮಾಡಿಕೊಡುವುದಾಗಿ ಸ್ವಾಮೀಜಿ ಅವರು ಮಾತುಕೊಟ್ಟಿದ್ದಾರೆ ಎಂದು ಸಚಿವರು ತಿಳಿಸಿದರು.

ಮಂತ್ರಾಲಯದಲ್ಲಿ ಈಗಿರುವ ಕರ್ನಾಟಕ ರಾಜ್ಯ ವಸತಿ ಗೃಹ ಕಟ್ಟಡದ ಕಳಪೆ ಕಾಮಗಾರಿಯ ಬಗ್ಗೆ ಲೋಕಾಯುಕ್ತಕ್ಕೆ ದೂರು ಸಲ್ಲಿಕೆಯಾಗಿದೆ. ಕಳಪೆ ಕಾಮಗಾರಿ ನಡೆದಿದೆ ಎಂದು ಲೋಕಾಯುಕ್ತ

(2ನೇ ಪುಟ ನೋಡಿ)

## ಭೂಮಿಗೆ ವಾಪಸ್ ಆದ ಶುಭಾಂಶು ಶುಕ್ಲಾಗೆ ಪ್ರಧಾನಿ ಮೋದಿ ಸ್ವಾಗತ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜು.15: ಐತಿಹಾಸಿಕ ಬಾಹ್ಯಾಕಾಶ ಯಾನ ಪೂರೈಸಿ ಭೂಮಿಗೆ ವಾಪಸ್ ಆದ ಗಗನಯಾತ್ರಿ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಸ್ವಾಗತ ಕೋರಿದ್ದಾರೆ.ಶುಕ್ಲಾ ಅವರ ಪ್ರಯಾಣವು ಶತಕೋಟಿ ಕನಸುಗಳಿಗೆ ಸ್ಫೂರ್ತಿ. ಇದು ಭಾರತದ ಮಾನವ ಬಾಹ್ಯಾಕಾಶ ಹಾರಾಟದ ಮಿಷನ್ ಗಗನಯಾನಕ್ಕೆ ಒಂದು ಮೈಲಿಗಲ್ಲು ಎಂದು ಮೋದಿ ಬಣ್ಣಿಸಿದ್ದಾರೆ. ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರು ತಮ್ಮ ಐತಿಹಾಸಿಕ ಬಾಹ್ಯಾಕಾಶ ಕಾರ್ಯಾಚರಣೆಯಿಂದ ಭೂಮಿಗೆ ಮರಳುತ್ತಿರುವುದನ್ನು ಸ್ವಾಗತಿಸಲು ನಾನು ರಾಷ್ಟ್ರದೊಂದಿಗೆ ಸೇರುತ್ತೇನೆ. ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಭೇಟಿ ನೀಡಿದ ಭಾರತದ ಮೊದಲ ಗಗನಯಾತ್ರಿಯಾಗಿ, ಅವರು ತಮ್ಮ ಸಮರ್ಪಣೆ, ಧೈರ್ಯ ಮತ್ತು ಪ್ರವರ್ತಕ ಮನೋಭಾವದ ಮೂಲಕ ಶತಕೋಟಿ ಕನಸುಗಳಿಗೆ ಸ್ಫೂರ್ತಿ ನೀಡಿದ್ದಾರೆ. ಇದು ನಮ್ಮದೇ ಆದ ಮಾನವ ಬಾಹ್ಯಾಕಾಶ ಹಾರಾಟ ಮಿಷನ್-ಗಗನಯಾನಕ್ಕೆ ಮತ್ತೊಂದು ಮೈಲಿಗಲ್ಲು ಎಂದು ಪ್ರಧಾನಿ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ.

## ರೈತರ ಚಿಂತೆ ಹೆಚ್ಚಿಸಿದ ಮಳೆ ಕೊರತೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 15 : ಬೆಳೆಗೆ ಅಗತ್ಯವಿರುವ ಸಂದರ್ಭದಲ್ಲಿ ಮಳೆ ಕೈಕೊಟ್ಟಿರುವುದು ರೈತರ ಚಿಂತೆಗೆ ಕಾರಣವಾಗಿದೆ.

ಮೇ ತಿಂಗಳಲ್ಲಿ ಭರಪೂರ ಮಳೆಯಾಗಿತ್ತು. ಈ ಸಲ ಉತ್ತಮ ಮುಂಗಾರು ಮಳೆ ಆಗಲಿದೆ ಎಂದು ರೈತರು ನಿರೀಕ್ಷಿಸಿದ್ದರು. ಆದರೆ, ಜೂನ್ ಮತ್ತು ಜುಲೈ ತಿಂಗಳಲ್ಲಿ ಸಮರ್ಪಕವಾಗಿ ಮಳೆಯಾಗದ ಕಾರಣ ಸಹಜವಾಗಿಯೇ ರೈತರ ಚಿಂತೆ ಹೆಚ್ಚಿಸಿದೆ.

ಮೇ ತಿಂಗಳಲ್ಲಿ ವಾಡಿಕೆಗಿಂತ ಶೇ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

### ವಸತಿ ಗೃಹ ನಿರ್ಮಾಣಕ್ಕೆ ಕ್ರಮ: ಸಚಿವ ರಾಮಲಿಂಗಾರೆಡ್ಡಿ

ರಿಂದ ಸಾಬೀತಾದಲ್ಲಿ ಸಂಬಂಧಿಸಿದ ಗುತ್ತಿಗೆದಾರರಿಂದಲೇ ಕಟ್ಟಡದ ದುರಸ್ತಿ ಮಾಡಿಸಲಾಗುವುದು. ಇಲ್ಲವಾದಲ್ಲಿ ಕಟ್ಟಡದಲ್ಲಿನ ನ್ಯೂನ್ಯತೆಗಳ ಬಗ್ಗೆ ಪರಿಶೀಲಿಸಿ ಮಾಸ್ಟರ್ ಪ್ಲಾನ್ ರೂಪಿಸಿ ಕಟ್ಟಡವನ್ನು ಸರಿಪಡಿಸಲಾಗುವುದು ಎಂದು ಸಚಿವರು ಹೇಳಿದರು.

ಆನಲೈನ್ ವ್ಯವಸ್ಥೆಗೆ ಕ್ರಮ: ಧಾರ್ಮಿಕ ದತ್ತಿ ಇಲಾಖೆಯಿಂದ ಮಂತ್ರಾಲಯದಲ್ಲಿ ನಿರ್ಮಾಣ ಮಾಡಿರುವ ಕರ್ನಾಟಕ ರಾಜ್ಯದ ವಸತಿ ಗೃಹದಲ್ಲಿ ಒಟ್ಟು 50 ಕೋಣೆಗಳಿವೆ. ಇವುಗಳನ್ನು ಕರ್ನಾಟಕದಿಂದ ಬರುವ ಭಕ್ತರಿಗೆ ಮೀಸಲಿರಿಸಿದೆ. ತಲಾ ನಾಲ್ಕು ಜನರು 12 ಗಂಟೆ ಸಮಯ ವಾಸ್ತವ್ಯ ಮಾಡಲು 500 ರೂಪಾಯಿ ದರ ನಿಗದಿಪಡಿಸಲಾಗಿದೆ. 12 ಗಂಟೆ ಮೀರಿದಾಗ 1000 ರೂ. ದರ ನಿಗದಿಪಡಿಸಲಾಗುತ್ತದೆ. ಒಟ್ಟು 50 ರೂಮುಗಳ ಪೈಕಿ 30 ರೂಮುಗಳನ್ನು ಆನಲೈನ್ ಮೂಲಕ ಹಾಗೂ ಇನ್ನುಳಿದ 20 ರೂಮುಗಳನ್ನು ನೇರವಾಗಿ ಹಣ ಪಾವತಿಸಿ ಬುಕ್ಕಿಂಗ್ ಮಾಡುವ ವ್ಯವಸ್ಥೆಗೆ ಕ್ರಮ ವಹಿಸುವುದಾಗಿ ಸಚಿವರು ತಿಳಿಸಿದರು.

ಟೂರಿಸಂ ಇಲಾಖೆಗೆ ಉಸ್ತುವಾರಿ: ಕಲ್ಯಾಣ ಮಂಟಪ, ಛತ್ರ, ವಸತಿ ಗೃಹಗಳ ನಿರ್ಮಾಣ ಪ್ರಕರಣವು ನ್ಯಾಯಾಲಯದ ಅಂಗಳದಲ್ಲಿರುವುದರಿಂದ ಕಟ್ಟಡದ ದುರಸ್ತಿಗೆ ತೊಡಕಾಗಿ ಪರಿಣಮಿಸಿದೆ. ಮಂತ್ರಾಲಯ, ಶ್ರೀಶೈಲಂ, ತಿರುಪತಿ ಸೇರಿದಂತೆ ನಾನಾ ಕಡೆಗಳಲ್ಲಿ ವಿವಾದದಿಂದ ಕೂಡಿರುವ ಜಾಗದ ಸಮಸ್ಯೆಯನ್ನು ಬೇಗನೆ ಇತ್ಯರ್ಥಪಡಿಸಬೇಕು ಎಂದು ಖುದ್ದು ಆಂಧ್ರಪ್ರದೇಶದ ಮುಖ್ಯಮಂತ್ರಿಗಳು ಆಯಾ ದತ್ತಿ ಸಂಸ್ಥೆಗಳಿಗೆ ಪತ್ರ ಬರೆದಿದ್ದಾರೆ ಎಂದು ತಿಳಿಸಿದ ಸಚಿವರು, ಉತ್ತಮ ದರ್ಜೆಯ ನಿರ್ವಹಣೆಗಾಗಿ ಮಂತ್ರಾಲಯದಲ್ಲಿರುವ ಕರ್ನಾಟಕ ವಸತಿ ಗೃಹಗಳ ಕಟ್ಟಡದ ನಿರ್ಹಹಣೆಯ ಉಸ್ತುವಾರಿಯನ್ನು ಪ್ರವಾಸೋದ್ಯಮ ಇಲಾಖೆಗೆ ವಹಿಸುವ ಬಗ್ಗೆ ಪ್ರವಾಸೋದ್ಯಮ ಸಚಿವರಾದ ಹೆಚ್ ಕೆ ಪಾಟೀಲ ಅವರೊಂದಿಗೆ ಮಾತನಾಡುವುದಾಗಿ ಸಚಿವರು ತಿಳಿಸಿದರು. ಈ ವೇಳೆ ಪ್ರವಾಸೋದ್ಯಮ ಇಲಾಖೆಯ ಆಯುಕ್ತರಾದ ವೆಂಕಟೇಶ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ಕಿಶೋರ್ ಕುಮಾರ ಪಾಟೀಲ, ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕರಾದ ಕೃಷ್ಣ ಶಾವಂತಗೇರಿ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿ ಎಂ.ಎಸ್.ಚಂದ್ರಶೇಖರ, ಕರ್ನಾಟಕ ವಸತಿ ಗೃಹ ಕಟ್ಟಡದ ಅಧಿಕಾರಿ ಆಂಜನೇಯ ಸೇರಿದಂತೆ ಇನ್ನೀತರರು ಇದ್ದರು.

## ಚಿಂತೆ ಹೆಚ್ಚಿಸಿದ ಮಳೆ ಕೊರತೆ

256ರಷ್ಟು ಹೆಚ್ಚುವರಿ ಮಳೆಯಾಗಿತ್ತು. ಹೆಚ್ಚಿನವರು ಜೂನ್ ಆರಂಭದಲ್ಲೇ ಬಿತ್ತನೆ ಕಾರ್ಯ ಶುರು ಮಾಡಿದ್ದರು. ಆದರೆ, ಜೂನ್, ಜುಲೈನಲ್ಲಿ ಮಳೆ ಸಂಪೂರ್ಣ ಕೈಕೊಟ್ಟಿದೆ. ಎರಡು ತಿಂಗಳಲ್ಲಿ ಕ್ರಮವಾಗಿ ಶೇ 49ರಷ್ಟು ಮಳೆ ಕೊರತೆಯಾಗಿದೆ. ಆಗೊಮ್ಮೆ, ಈಗೊಮ್ಮೆ ಎಂಬಂತೆ ಎರಡು ಹನಿಗಳು ಬಿದ್ದು ಮಳೆ ಮಾಯವಾಗುತ್ತಿದೆ. 'ಹೀಗಾದರೆ ಮುಂದೆ ಹೇಗಪ್ಪಾ?' ಎಂದು ರೈತರು ಆಕಾಶ ನೋಡುತ್ತ ಅವರೇ ಪ್ರಶ್ನೆ ಮಾಡಿಕೊಳ್ಳುವಂತಹ ಪರಿಸ್ಥಿತಿ ಸೃಷ್ಟಿಯಾಗಿದೆ. 'ಮಳೆ ಬೇಕಾದಾಗ ಸುರಿಯುತ್ತಿಲ್ಲ. ಬೇಡವಾದಾಗ ಬರುತ್ತಿದೆ. ಕಾಲ ಬದಲಾಗುತ್ತಿದೆ ಅಂತಾರಲ್ಲ ಇದೇ ಇರಬೇಕು ನೋಡಿ. ಮೇ ತಿಂಗಳಲ್ಲಿ ಬಿಸಿಲು ಹೆಚ್ಚಿದ್ದರೆ ನೆಲ ಕಾದು, ಅದರಲ್ಲಿ ಸತ್ವ ಹೆಚ್ಚಾಗುತ್ತದೆ. ಅದರಲ್ಲಿ ಬಿತ್ತನೆ ಮಾಡಿದರೆ ಉತ್ತಮ ಫಸಲು ಬರುತ್ತದೆ. ಈ ಸಲ ಈ ತರಹ ಆಗಿಲ್ಲ. ಎರಡು ತಿಂಗಳಿಂದ ಮಳೆಯೂ ಇಲ್ಲ. ಮುಂದೆ ಮಳೆ ಆಗದಿದ್ದರೆ ಬಹಳ ಕಷ್ಟವಾಗುತ್ತದೆ' ಎಂದು ಮನ್ನಾಏಖ್ಖೆಳ್ಳಿಯ ರೈತ ಪ್ರಶಾಂತ್ ತಿಳಿಸಿದ್ದಾರೆ. 'ಜೂನ್‌ನಲ್ಲಿ ಕೊರತೆ ಮಳೆ ಆಗಿದ್ದರಿಂದ ಸಮಸ್ಯೆ ತಲೆದೋರಿತ್ತು. ಆದರೆ, ಜೂನ್ ತಿಂಗಳ ಕೊನೆಯ ಒಂದೆರೆಡು ದಿನಗಳಲ್ಲಿ ಮಳೆ ಬಿದ್ದಿದ್ದರಿಂದ ಬೆಳೆಗಳು ಚೇತರಿಸಿಕೊಂಡಿವೆ. ಆಗಾಗ ಮಳೆ ಬಂದು ಹೋಗುತ್ತಿರುವುದರಿಂದ ಸದ್ಯ ಚಿಂತೆ ಪಡುವ ಅಗತ್ಯವಿಲ್ಲ. ಆದರೆ, ಮುಂದೆ ಮಳೆ ಬೇಕಾಗುತ್ತದೆ' ಎನ್ನುತ್ತಾರೆ ಜಂಟಿ ಕೃಷಿ ನಿರ್ದೇಶಕಿ ದೇವಿಕಾ ಆರ್.ಸೋಯಾ ಹೆಚ್ಚು:

ಈ ಹಿಂದಿನಂತೆ ಈ ವರ್ಷವೂ ಸೋಯಾಬಿನ್ ಹೆಚ್ಚಿನ ಪ್ರದೇಶದಲ್ಲಿ ಬಿತ್ತನೆ ಮಾಡಲಾಗಿದೆ. 2.32 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಸೋಯಾ ಬೆಳೆಸಲಾಗಿದೆ. ನಂತರದ ಸ್ಥಾನದಲ್ಲಿ ತೊಗರಿ ಇದೆ. 1.36 ಲಕ್ಷ ಹೆಕ್ಟೇರ್‌ನಲ್ಲಿ ತೊಗರಿ, 24 ಸಾವಿರ ಹೆಕ್ಟೇರ್‌ನಲ್ಲಿ ಹೆಸರು, 17 ಸಾವಿರ ಹೆಕ್ಟೇರ್‌ನಲ್ಲಿ ಉದ್ದು, 11 ಸಾವಿರ ಹೆಕ್ಟೇರ್‌ನಲ್ಲಿ ಕಬ್ಬು ಬೆಳೆಸಲಾಗಿದೆ. 'ಸೋಯಾಬೀನ್‌ನಿಂದ ಉಪ ಉತ್ಪನ್ನಗಳನ್ನು ಹೆಚ್ಚಿನ ಪ್ರಮಾಣದಲ್ಲಿ ತಯಾರಿಸುತ್ತಿರುವುದರಿಂದ ಅದಕ್ಕೆ ಬೇಡಿಕೆ ಹೆಚ್ಚಿದೆ. ನಿರ್ವಹಣೆಯೂ ಅಷ್ಟಕಷ್ಟೇ. ಆದಕಾರಣ ರೈತರು ಅದಕ್ಕೆ ಹೆಚ್ಚಾಗಿ ಒಲವು ತೋರಿಸುತ್ತಿದ್ದಾರೆ' ಎನ್ನುತ್ತಾರೆ ಕೃಷಿ ಇಲಾಖೆಯ ಅಧಿಕಾರಿಗಳು.

ದೇವಿಕಾ ಆರ್. ಜಂಟಿ ಕೃಷಿ ನಿರ್ದೇಶಕಿ ಬೀದರ್. ಬೀದರ್ ಜಿಲ್ಲೆಯಲ್ಲಿ ನಿರೀಕ್ಷೆಗೆ ತಕ್ಕಂತೆ ಜೂನ್ ಜುಲೈ ತಿಂಗಳಲ್ಲಿ ಮಳೆಯಾಗಿಲ್ಲ. ಮುಂಬರುವ ದಿನಗಳಲ್ಲಿ ಉತ್ತಮ ಮಳೆಯ ನಿರೀಕ್ಷೆ ಇದೆ. ರೈತರು ಆತಂಕ ಪಡಬೇಕಿಲ್ಲ

### ಹೋಗಿ, ಆತಂಕ ಬೇಡ : ಶರಣ ಪ್ರಕಾಶ ಪಾಟೀಲ್

ಸಂಬಂಧವಿಲ್ಲ. ವ್ಯಾಕ್ಸಿನ್ ಬಗ್ಗೆ ಅನುಮಾನ ಬೇಡ. ಹಾಸನ ಜಿಲ್ಲೆಯಲ್ಲಿ ಮಾತ್ರ ಪ್ರಕರಣ ಬೇರೆ ಅನ್ನೋದು ತಪ್ಪು. ಹೃದಯಾಘಾತದ ಆತಂಕ ಕೈಬಿಟ್ಟು ಉತ್ತಮ ಜೀವನಶೈಲಿ, ನಿದ್ರೆ ಮತ್ತು ದೈಹಿಕ ವ್ಯಾಯಾಮ ಮಾಡುವುದು ಅಗತ್ಯ. ಹೃದಯಾಘಾತದ ರೋಗ ಲಕ್ಷಣಗಳು ಇದ್ದರೆ ಮಾತ್ರ ಆಸ್ಪತ್ರೆಗೆ ಹೋಗಿ ತಪಾಸಣೆ ಮಾಡಿಸಿಕೊಳ್ಳಿ. ಸುಖಾಸುಮ್ಮನೆ ಹೋಗಬೇಡಿ ಎಂದು ಕಿವಿಮಾತು ಹೇಳಿದರು.

ಹಾಸನ ಪ್ರಕರಣ ಕುರಿತು ಅಧ್ಯಯನ:ಹಾಸನ ಪ್ರಕರಣದಲ್ಲಿ 24 ಮಂದಿ ಮೃತರ ಕುರಿತು ಅಧ್ಯಯನ ನಡೆಸಲಾಗುತ್ತಿದೆ. 20 ಪ್ರಕರಣಗಳಲ್ಲಿ 10 ಹಾರ್ಟ್ ಅಟ್ಯಾಕ್ ಆಗಿದೆ. ಇತರೆ ಕಾರಣಗಳಿಂದ ಸಾವು ಸಂಭವಿಸಿವೆ ಎನ್ನುವುದು ಪ್ರಾಥಮಿಕ ವರದಿಗಳಿಂದ ತಿಳಿದುಬಂದಿದೆ. ಜಯದೇವ ಆಸ್ಪತ್ರೆಯಲ್ಲಿ ಹೃದ್ರೋಗ ತಜ್ಞ ಡಾ ಕೆ.ಎಸ್. ರವೀಂದ್ರನಾಥ್ ಅವರ ನೇತೃತ್ವದಲ್ಲಿ ಅನಾಲಿಸಿಸ್ ಆಗಿದ್ದು, ಹೃದಯಾಘಾತ ಸಂಬಂಧ ಸಾವು ಹೆಚ್ಚಾಗಿಲ್ಲ. ಈ ಹಿಂದೆಯೂ ಆಗುತ್ತಿತ್ತು, ಈಗಲೂ ಆಗುತ್ತಿದೆ ಎಂದು ವಿವರಿಸಿದರು.

ಕೋವಿಡ್ ನಂತರ ಜನರ ಜೀವನ ಶೈಲಿ ಬದಲು:ಕೋವಿಡ್ ನಂತರದ ಜೀವನ ಶೈಲಿಯಿಂದ ಡಯಾಬಿಟಿಸ್, ಬಿಪಿ ಹೆಚ್ಚಾಗಿದೆ. ಆಹಾರ ಪದ್ಧತಿ ಬದಲಾಗಿದೆ, ಒತ್ತಡ ಜಾಸ್ತಿ ಆಗಿದೆ. ಈ ಮಧ್ಯೆ ಯುವಕರಲ್ಲಿ ಯಾಕೆ ಸಾವು ಆಗ್ತಿದೆ ಎಂದು ಅಧ್ಯಯನ ಮಾಡುತ್ತಿದ್ದೇವೆ. ಜನವರಿಯಲ್ಲಿ 178 ಜನರು ಅಡ್ಮಿಟ್ ಆಗಿದ್ದರು, 11 ಜನ ಮೃತಪಟ್ಟಿದ್ದಾರೆ. ಫೆಬ್ರವರಿಯಲ್ಲಿ 181 ಜನರ ಪೈಕಿ 10 ಜನ, ಮಾರ್ಚ್‌ನಲ್ಲಿ 200 ಜನರಲ್ಲಿ 9 ಜನ ಹಾಗೂ ಬೆಂಗಳೂರಲ್ಲಿ 2,165ರು ಆಸ್ಪತ್ರೆಯಲ್ಲಿ ದಾಖಲಾಗಿದ್ದು, ಈ ಪೈಕಿ 101 ಜನ ಮೃತಪಟ್ಟಿದ್ದಾರೆ. ವರ್ಷಕ್ಕೆ ಒಂದು ಬಾರಿ ಹೃದಯ ತಪಾಸಣೆ ಮಾಡಿಸಿದರೆ ಸಾಕು. ಆತಂಕದಿಂದ ಆಸ್ಪತ್ರೆಗೆ ಹೋಗೋದು ಬೇಡ ಎಂದು ಮಾಹಿತಿ ನೀಡಿದರು.ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಾತನಾಡಿ, ಮಕ್ಕಳಲ್ಲಿ ಸ್ಕ್ರೀನಿಂಗ್ ಮಾಡುವ ಅಗತ್ಯವಿಲ್ಲ. ಜನರಿಗೆ ಜಯದೇವ ಆಸ್ಪತ್ರೆಯಿಂದ ಅರಿವು ಮೂಡಿಸುವ ಕಾರ್ಯಕ್ರಮ ಆಯೋಜಿಸುತ್ತೇವೆ. ರಸ್ತೆ ಬದಿ ಆಹಾರ ಮತ್ತು ಆಹಾರ ತಯಾರಿಸುವ ವಿಧಾನದ ಬಗ್ಗೆ ಕಟ್ಟುನಿಟ್ಟಿನ ಕ್ರಮವಹಿಸುತ್ತಿದ್ದೇವೆ. ಈ ಹಿಂದಿನ ಆಹಾರ ಪದ್ಧತಿ ಮುಂದುವರಿಸಿ, ಯೋಗ ಅಭ್ಯಾಸ ಮಾಡಿದರೆ ತುಂಬಾ ಉತ್ತಮ ಎಂದರು.

## ಸಚಿವ ಪ್ರಿಯಾಂಕ್ ಖರ್ಗೆ ಅಸಮಾಧಾನ

2026ರವರೆಗೆ ಈ ವಿನಾಯಿತಿ ವಿಸ್ತರಿಸಲಾಗಿದೆ. 2024–2025ನೆ ಸಾಲಿನಲ್ಲಿ 13 ಲಕ್ಷ ಮೆಟ್ರಿಕ್ ಟನ್‌ಗೂ ಹೆಚ್ಚು ವಿದೇಶಿ ತೊಗರಿ ಆಮದು ಮಾಡಿಕೊಳ್ಳಲಾಯಿತು. ಇದಲ್ಲದೇ ಮೊಜಾಂಬಿಯಾ ದೇಶದಿಂದ ಇನ್ನೂ 2 ಲಕ್ಷ ಮೆಟ್ರಿಕ್ ಟನ್ ತೊಗರಿ ಆಮದು ಮಾಡಿಕೊಳ್ಳಲು ಒಪ್ಪಂದಕ್ಕೆ ಕೇಂದ್ರ ಸಹಿಹಾಕಿದ್ದು ಇದು ಆಘಾತಕಾ–ರಿಯಾಗಿದೆ ಎಂದು ಅವರು ತೀವ್ರ ಆತಂಕ ವ್ಯಕ್ತಪಡಿಸಿದ್ದಾರೆ.ಕರ್ನಾಟಕ ರಾಜ್ಯ ಉತ್ಪಾದನಾ ವೆಚ್ಚ 11,032ರೂ.ಗಳು ಸೇರಿದಂತೆ 16,548ರೂ.ಗಳು ಕನಿಷ್ಠ ಬೆಂಬಲ ಬೆಲೆಯ ಬೇಡಿಕೆಯನ್ನು ಸರ್ಕಾರದ ಮುಂದಿಟ್ಟಿತ್ತು. ಆದರೆ ಕೇಂದ್ರ 8,000ರೂ.ಗಳಿಗೆ ನಿಗದಿಪಡಿಸಿರುವ ಕುರಿತು ಕೇಂದ್ರದ ಕೃಷಿ ವೆಚ್ಚಗಳು ಹಾಗೂ ಬೆಲೆಗಳ ಆಯೋಗ ತನ್ನ ವರದಿಯಲ್ಲಿ ಒಪ್ಪಿಕೊಂಡಿದೆ. ರೈತರ ಆದಾಯವನ್ನು ದ್ವಿಗುಣಗೊಳಿಸುವ ಮೂಲಕ ಆತ್ಮ ನಿರ್ಭರ ಭಾರತ್ ನಿರ್ಮಾಣ ಮಾಡುವುದಾಗಿ ಹೇಳಿ ಭರವಸೆ ನೀಡಿದ್ದ ಬಿಜೆಪಿ ದಶಕದ ಕೇಂದ್ರದಲ್ಲಿ ಹಿಂದೆ ಅಧಿಕಾರಕ್ಕೆ ಬಂದಿದೆ. ಆದರೆ ಇಂದು ಸರ್ಕಾರದ ಕೃಷಿ ಆರ್ಥಿಕತೆಯ ನಿರ್ಲಕ್ಷ್ಯ ಹಾಗೂ ತಪ್ಪು ನಿರ್ವಹಣೆಯಿಂದಾಗಿ ಆ ಭರವಸೆಗಳು ಮಣ್ಣುಪಾಲಾಗಿವೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.ಏತನ್ಮಧ್ಯೆ, ಕರ್ನಾಟಕದ ಬಿಜೆಪಿಯ ಕೇಂದ್ರ ಸಚಿವರು ತಾವು ಪ್ರತಿನಿಧಿಸುವ ರಾಜ್ಯದ ಹಿತಾಸಕ್ತಿಗಳ ಪರವಾಗಿ ನಿಲ್ಲುವ ಬದಲು ದ್ವೇಷವನ್ನು ಹರಡುವುದರ ಮೇಲೆ ಹೆಚ್ಚು ಗಮನಹರಿಸಿದ್ದಾರೆ ಎಂದು ಸಚಿವ ಖರ್ಗೆ ಅವರು ಹರಿಹಾಯ್ದಿದ್ದಾರೆ.

## ರಾಹುಲ್ ಗಾಂಧಿಗೆ ಜಾಮೀನು

ನ್ಯಾಯಾಲಯದಲ್ಲಿ ರಾಹುಲ್ ಗಾಂಧಿ ಹಾಜರಾದರು. ಅವರನ್ನು ನ್ಯಾಯಾಧೀಶರ ಚೆಂಬರ್ ಗೆ ಕರೆದೊಯ್ಯಲಾಯಿತು, ಅಲ್ಲಿ ಬಾಂಡ್ ಮತ್ತು ಶ್ಯೂರಿಟಿ ಸಲ್ಲಿಸುವ ಔಪಚಾರಿಕ ಪ್ರಕ್ರಿಯೆಗಳು

ನಡೆದವು.ಮಾನನಷ್ಟ ಮೊಕದ್ದಮೆಯನ್ನು ನ್ಯಾಯಾಲಯವು ವಿಚಾರಣೆಗೆ ತೆಗೆದುಕೊಂಡ ನಂತರ ವಿಚಾರಣೆಗೆ ಹಾಜರಾಗಲು ರಾಹುಲ್ ಗಾಂಧಿಗೆ ಸಮನ್ಸ್ ನೀಡಲಾಗಿತ್ತು. ಜಾಮೀನು ಕೋರಿ ಅವರು ಈ ಹಿಂದೆ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು ಆದರೆ ಯಶಸ್ವಿಯಾಗಿರಲಿಲ್ಲ. ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ಅಜಯ್ ರೈ ಮತ್ತು ಉಸ್ತುವಾರಿ ಅವಿನಾಶ್ ಪಾಂಡೆ ಅವರೊಂದಿಗೆ ಅವರು ನ್ಯಾಯಾಲಯಕ್ಕೆ ಬಂದರು. ಹೀಗಾಗಿ ನ್ಯಾಯಾಲಯದ ಆವರಣ ಮತ್ತು ಸುತ್ತಮುತ್ತ ಭದ್ರತೆ ಹೆಚ್ಚಿಸಲಾಗಿತ್ತು.ಬಾರ್ಡರ್ ರೋಡ್ಸ್ ಆರ್ಗನೈಸೇಶನ್‌ನ ನಿವೃತ್ತ ನಿರ್ದೇಶಕ ಉದಯ್ ಶಂಕರ್ ಶ್ರೀವಾಸ್ತವ ಅವರು ರಾಹುಲ್ ವಿರುದ್ಧ ಮಾನನಷ್ಟ ದೂರು ದಾಖಲಿಸಿದ್ದಾರೆ.ಡಿಸೆಂಬರ್ 16, 2022 ರಂದು, ಭಾರತ್ ಜೋಡೋ ಯಾತ್ರೆಯ ಸಂದರ್ಭದಲ್ಲಿ ವಿವಿಧ ಮಾಧ್ಯಮ ಸಿಬ್ಬಂದಿ ಮತ್ತು ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದ್ದ ಗಾಂಧಿ, ಡಿಸೆಂಬರ್ 9, 2022 ರಂದು ಅರುಣಾಚಲ ಪ್ರದೇಶದ ಗಡಿಯಲ್ಲಿ ಭಾರತೀಯ ಸೇನೆ ಮತ್ತು ಚೀನಾ ಸೇನೆಯ ನಡುವಿನ ಘರ್ಷಣೆಯನ್ನು ಪ್ರಸ್ತಾಪಿಸಿದ್ದರು.ಭಾರತೀಯ ಸೈನಿಕರನ್ನು ಚೀನಾ ಸೈನಿಕರು ಥಳಿಸಿದ ಆರೋಪದ ಬಗ್ಗೆ ಗಾಂಧಿ ನೀಡಿದ ಹೇಳಿಕೆಯಿಂದ ತಮ್ಮ ಭಾವನೆಗಳಿಗೆ ಧಕ್ಕೆಯಾಗಿದೆ ಎಂದು ದೂರುದಾರರು ಆರೋಪಿಸಿದ್ದರು. ಮಾನನಷ್ಟ ಆರೋಪಕ್ಕೆ ಸಂಬಂಧಿಸಿದಂತೆ ಫೆಬ್ರವರಿ 11 ರಂದು, ವಿಶೇಷ ನ್ಯಾಯಾಲಯವು ಗಾಂಧಿಯವರಿಗೆ ಸಮನ್ಸ್ ನೀಡಿತ್ತು.

## ಸರೋಜಾದೇವಿ ಅಂತ್ಯಕ್ರಿಯೆ

ಚಿತ್ರರಂಗ ಪ್ರವೇಶಿಸಿದ್ದ ಸರೋಜಾದೇವಿ ಅವರು ಅಭಿನಯದ ಮೊದಲ ಚಿತ್ರವೇ ರಾಷ್ಟ್ರ ಪ್ರಶಸ್ತಿಗೆ ಭಾಜನವಾಗಿತ್ತು. 1955 ರಲ್ಲಿ ಸರೋಜ ದೇವಿ ಶ್ರೀ ರಾಮ ಪೂಜ ಎಂಬ ಚಿತ್ರದಲ್ಲಿ ಕಾಣಿಸಿಕೊಂಡಿದ್ದರು. ಭಾರತೀಯ ಚಿತ್ರರಂಗದಲ್ಲಿ ಮಿಂಚಿದ್ದ ಸರೋಜ ದೇವಿ ಅವರು ಕನ್ನಡ, ತಮಿಳು, ತೆಲುಗು ಮತ್ತು ಹಿಂದಿ ಚಿತ್ರಗಳಲ್ಲಿ ನಟಿಸಿ ಸೈ ಅನಿಸಿಕೊಂಡಿದ್ದರು.

## ಜಿಲ್ಲಾಡಳಿತದಿಂದ ಶಿವಶರಣ ಹಡಪದ ಅಪ್ಪಣ್ಣ ಜಯಂತಿ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು, ಜು 15 : ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿರಂಗಮಂದಿರದಲ್ಲಿ ಜುಲೈ 15ರಂದು ಶಿವಶರಣ ಹಡಪದ ಅಪ್ಪಣ್ಣ ಅವರ ಜಯಂತ್ಯುತ್ಸವ ನಡೆಯಿತು.

ಜಯಂತ್ಯುತ್ಸವ ನಿಮಿತ್ತ ಬೆಳಗ್ಗೆ ಬಸವೇಶ್ವರ ವೃತ್ತದಿಂದ ಆರಂಭಗೊಂಡ ಶ್ರೀ ಶಿವಶರಣ ಹಡಪದ ಅಪ್ಪಣ್ಣ ಅವರ ಭಾವಚಿತ್ರದ ಮೆರವಣಿಗೆಗೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಚಾಲನೆ ನೀಡಿದರು. ಮೆರವಣಿಗೆಯು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ರಂಗಮಂದಿರಕ್ಕೆ ಬಂದು ಸೇರಿತು. ಸಮಾಜದ ಮುಖಂಡರು,ಅಧಿಕಾರಿಗಳುಮತ್ತು ನಾಗರಿಕರುರಂಗಮಂದಿರದವರೆಗೆ ಮೆರವಣಿಗೆಯಲ್ಲಿ ಸಾಲಾಗಿ ಸಾಗಿ ಮೆರವಣಿಗೆಯ ಕಳೆ ಹೆಚ್ಚಿಸಿದರು.

ರಂಗಮಂದಿರದಲ್ಲಿ ನಡೆದ ವೇದಿಕೆಯ ಕಾರ್ಯಕ್ರಮಕ್ಕೆ ಮಹಾನಗರ ಪಾಲಿಕೆಯ ಉಪಾಧ್ಯಕ್ಷರು ಆಗಿರುವ ಪ್ರಭಾರ ಅಧ್ಯಕ್ಷರಾದ ಜೆ.ಸಾಜಿದ್ ಸಮೀರ್ ಅವರು ದೀಪ ಬೆಳಗಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು

ಕಾರ್ಯಕ್ರಮದಲ್ಲಿ ಹಟ್ಟಿ ಸರ್ಕಾರಿ ಪಿಯು ಕಾಲೇಜಿನ ಪ್ರಾಚಾರ್ಯರಾದ ಕಮಲಾಬಾಯಿ ಅವರು ಶ್ರೀ ಶಿವಶರಣ ಹಡಪದ ಅಪ್ಪಣ್ಣ ಅವರ ಬಗ್ಗೆ ವಿಶೇಷ ಉಪನ್ಯಾಸ ನೀಡಿ, ಅಪ್ಪಣ್ಣನವರು ಜಾತಿ ಹಾಗೂ ಅಸಮಾನತೆಯ ವಿರುದ್ಧ ಹೋರಾಡಿದ ಮಹಾನ್ ಶರಣರಾಗಿದ್ದಾರೆ. ಸಮಾಜದಲ್ಲಿನ ದುರ್ಬಲರು, ಹಿಂದುಳಿದವರು, ಬಡವರ ಬದುಕಿನ ಬಗ್ಗೆ ತಿಳಿದು ಅವರ ಹಕ್ಕುಗಳಿಗಾಗಿ ಹೋರಾಡಲು ಅಪ್ಪಣ್ಣನವರು ತಮ್ಮ ಜೀವನವನ್ನು ಸಮರ್ಪಿಸಿಕೊಂಡರು ಎಂದು ತಿಳಿಸಿದರು.

ಅಪ್ಪಣ್ಣನವರು ಕೇವಲ ದೇವರ ಪೂಜೆ ಮಾಡುವ ವ್ಯಕ್ತಿಯಾಗದೇ ಕಾಯಕತತ್ವ, ಸಮಾನತೆಯ ದೃಷ್ಟಿಕೋಣ, ಮಾನವತೆಯ ಬಗ್ಗೆ ಸ್ಪಷ್ಟ ಚಿಂತನೆ ಹೊಂದಿದ್ದ ವ್ಯಕ್ತಿತ್ವವುಳ್ಳವರಾಗಿದ್ದರು. ಅಪ್ಪಣ್ಣನವರು ಹೊಂದಿದ್ದ ಸಾಮಾಜಿಕ ಕಾಳಜಿಯ ವ್ಯಕ್ತಿತ್ವವು, ಅವರ ಕಾಯಕತತ್ವವು ನಮಗೆ ಆದರ್ಶಪ್ರಾಯವಾಗಿದೆ ಎಂದರು. ನಮ್ಮ ಸಮಾಜದಲ್ಲಿ ಈಗಲೂ ಜಾತಿ, ಮತ, ಭಾಷೆಯ ಹೆಸರಿನಲ್ಲಿ ನಡೆಯುವ ಬೇಧ–ಭಾವದ ಬಗ್ಗೆ ಯುವಕರು ಅರಿಯಬೇಕು. ಜಾಗೃತರಾಗಬೇಕು. ಕೆಟ್ಟದಾದ ವ್ಯಸನಗಳಿಗೆ ಯಾರು ಸಹ ಬಲಿಯಾಗಬಾರದು ಎಂದು ತಿಳಿಸಿದರು. ಸಾಧಕರಿಗೆ ಸನ್ಮಾನ: ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಉತ್ತಮವಾಗಿ ವಿದ್ಯಾಭ್ಯಾಸ ಮಾಡಿ ಯಶ ಸಾಧಿಸಿದ ಹಡಪದ ಅಪ್ಪಣ್ಣ ಸಮಾಜದ ವಿದ್ಯಾರ್ಥಿಗಳಿಗೆ, ಸರ್ಕಾರಿ ಸೇವೆಯಲ್ಲಿದ್ದು ನಿವೃತ್ತರಾದವರಿಗೆ ಸನ್ಮಾನಿಸಿ ಹಾಗೂ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಪರಶುರಾಮ್, ಹಡಪದ ಅಪ್ಪಣ್ಣ ಸಮಾಜದ ಗದ್ದೆಪ್ಪ ಎಂ, ಮಹಾಬಲೇಶ್ವರಪ್ಪ, ಕರಿಬಸವ ಗಟ್ಟಿಬಿಚ್ಚಾಲೆ, ನಾಗರಾಜ್ ಸರ್ಜಾಪುರ, ಧನಂಜಯ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಿಂಡಿ–ಕೇಟ್ ಸದಸ್ಯರಾದ ಶಿವಣ್ಣ, ಮುಖಂಡರಾದ ಮರಿಸ್ವಾಮಿ ಗಟ್ಟಿಬಿಚ್ಚಾಳಿ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

ಸಮಾರಂಭದಲ್ಲಿ ಸಮಾಜದ ಹಿರಿಯರು, ಮಹಿಳೆಯರು, ಯುವಕರು ಹಾಗೂ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಕಾರ್ಯಕ್ರಮದ ಮೆರಗು ಹೆಚ್ಚಿಸಿದರು.

### ಬಿಸಿಯೂಟ ಸೇವಿಸಿ 68 ವಿದ್ಯಾರ್ಥಿಗಳು ಅಸ್ವಸ್ಥ: ವಿವಿಧ ಆಸ್ಪತ್ರೆಗಳಲ್ಲಿ ದಾಖಲು

ಕಲಬುರಗಿ:ಜು.15:ಮಧ್ಯಾಹ್ನದ ಬಿಸಿಯೂಟ ಸೇವಿಸಿ ಸುಮಾರು 68 ವಿದ್ಯಾರ್ಥಿಗಳು ತೀವ್ರ ಅಸ್ವಸ್ಥಗೊಂಡಿದ್ದು, ತಾಲ್ಲೂಕು ಹಾಗೂ ಜಿಲ್ಲೆಯ ವಿವಿಧ ಆಸ್ಪತ್ರೆಗಳಲ್ಲಿ ದಾಖಲಾದ ಘಟನೆ ಜೇವರ್ಗಿ ತಾಲ್ಲೂಕಿನ ಮಾರಡಗಿ ಎಸ್.ಎ., ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಮಂಗಳವಾರ ಸಂಜೆ ವರದಿಯಾಗಿದೆ.ಮಾಡಗಿ ಎಚ್–ಎಂ. ಶಾಲೆಯಲ್ಲಿ ಒಂದರಿಂದ ಐದನೇ ತರಗತಿಯವರೆಗಿನ ಮಕ್ಕಳು ವ್ಯಾಸಂಗ ಮಾಡುತ್ತಿದ್ದು, ಒಟ್ಟು 117 ವಿದ್ಯಾರ್ಥಿಗಳು ಶಾಲೆಯಲ್ಲಿ ಪ್ರವೇಶ ಪಡೆದಿದ್ದಾರೆ. ಮಧ್ಯಾಹ್ನ ಸುಮಾರು 68 ಜನ ವಿದ್ಯಾರ್ಥಿಗಳು ಊಟ ಮಾಡಿದ್ದಾರೆ. ಶಾಲೆ ಬಿಟ್ಟು ಮನೆಗೆ ಮರಳಿದಾಗ ಎಲ್ಲ 68 ವಿದ್ಯಾರ್ಥಿಗಳು ವಾಂತಿ ಮಾಡಿಕೊಳ್ಳುವ ಮೂಲಕ ತೀವ್ರ ಅಸ್ವಸ್ಥಗೊಂಡರು. ತಮ್ಮ ಮಕ್ಕಳ ಪರಿಸ್ಥಿತಿ ಕಂಡು ಗಾಬರಿ ಹಾಗೂ ಆತಂಕಕ್ಕೆ ಒಳಗಾದ ಪಾಲಕರು ತಕ್ಷಣವೇ ಶಿಕ್ಷಕರನ್ನು ಹಾಗೂ ಮುಖ್ಯ ಗುರುಗಳನ್ನು ಸಂಪರ್ಕಿಸಿದರು. ಶಾಲೆ ಅವಧಿ ಮುಗಿಸಿ ಎಲ್ಲ ಶಿಕ್ಷಕರು ಹಾಗೂ ಮುಖ್ಯ ಗುರುಗಳು ಶಾಲೆಗೆ ಬೀಗ ಜಡಿದು ತಮ್ಮ ತಮ್ಮ ಸ್ಥಳಗಳಿಗೆ ಹೋಗಿದ್ದರು. ಬಿಸಿಯೂಟ ಸೇವಿಸಿ ಅಸ್ವಸ್ಥಗೊಂಡ ವಿದ್ಯಾರ್ಥಿಗಳ ಪಾಲಕರು ದೂರವಾಣಿ ಕರೆ ಮೂಲಕ ಮುಖ್ಯ ಗುರುಗಳು ಹಾಗೂ ಶಿಕ್ಷಕರನ್ನು ಮರಳಿ ಗ್ರಾಮಕ್ಕೆ ಕರೆಸಿದರು.

## ಶಾಲಾಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.15: ತಾಲೂಕಿನ ಹಜನಾಳ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ 2025–26ನೆಯ ಸಾಲಿನ ಪೋಷಕರ ಸಭೆಯಲ್ಲಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ(ಎಸ್‌ಡಿಎಂಸಿ)ಗೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ನೂತನ ಅಧ್ಯಕ್ಷರಾಗಿ ಕೃಷ್ಣಕಾಂತ ಸಕ್ರೆಪ್ಪನೋರ ಮತ್ತು ಉಪಾಧ್ಯಕ್ಷರಾಗಿ ಬಸಮ್ಮ ನಾಮದೇವ ಆಯ್ಕೆಯಾಗಿದ್ದಾರೆ ಎಂದು ಶಾಲೆ ಮುಖ್ಯಗುರು ಗುಂಡಯ್ಯಸ್ವಾಮಿ ತಿಳಿಸಿದ್ದಾರೆ.

ಶಾಲೆಯಲ್ಲಿ ಎಲ್ಲರ ಸಹಮತದೊಂದಿಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನ ಆಯ್ಕೆ ಮಾಡಲಾಯಿತು. ಈ ಸಂದರ್ಭದಲ್ಲಿ ಸನ್ಮಾನ ಸ್ವೀಕರಿಸಿದ ನೂತನ ಅಧ್ಯಕ್ಷ ಕೃಷ್ಣಕಾಂತ ಸಕ್ರೆಪ್ಪನೊರ ಮಾತನಾಡಿ, ಎಲ್ಲರ ಸಹಕಾರದೊಂದಿಗೆ ಶಾಲಾಭಿವೃದ್ಧಿಗೆ ಪ್ರಾಮಾಣಿಕವಾಗಿ ಪ್ರಯತ್ನ ಮಡಲಾಗುವುದು ಎಂದರು.

ಈ ಸಂರ್ದಭದಲ್ಲಿ ನಿಟ್ಟೂರ(ಬಿ) ಗ್ರಾಮ ಪಂಚಾಯತಿ ಅಧ್ಯಕ್ಷ ಅನಿಲಕುಮಾರ ಸಕ್ರೆಪ್ಪನೊರ, ಸದಸ್ಯರಾದ ಧನರಾಜ ಸಕ್ರೆಪ್ಪನೋರ, ವೆಂಕಟಡೋಗಾಳೆ, ಚಂದ್ರಕಾಂತ ಪೊಲೀಸಪಾಟೀಲ, ಶಿಕ್ಷಕರಾದ ಶಾಂತಕುಮಾರ, ಯಾಶ್ಮಿನಬಾನು, ಕರುಣಮ್ಮಾ, ಸದಸ್ಯರಾದ ರಾಜಕುಮಾರ ಧನಗರ, ನವನಾಥ ಬೇಲೂರೆ, ರವಿ, ಓಂಕಾರ, ಅನುಸಯ್ಯ, ಸುನೀತಾ, ಪವಿತ್ರಾ ಸೇರಿದಂತೆ ಹಲವರು ಇದ್ದರು.

## ಶಕ್ತಿ ಯೋಜನೆ ದೇಶಕ್ಕೆ ಮಾದರಿ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.15: ರಾಜ್ಯ ಸರಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆ ಇಡೀ ದೇಶಕ್ಕೆ ಮಾದರಿ ಯೋಜನೆಯಾಗಿದೆ ಎಂದು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ತಾಲೂಕು ಉಪಾಧ್ಯಕ್ಷ ಶೇಖ ಅಬ್ದುಲ್ ನಸೀರ್ ಹೇಳಿದರು. ಪಟ್ಟಣದ ಬಸ್ ನಿಲ್ದಾಣದಲ್ಲಿ ಸೋಮವಾರ ನಡೆದ ಶಕ್ತಿ ಯೋಜನೆಯ ಸಂಭ್ರಮಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಶಕ್ತಿ ಯೋಜನೆ ಇಡೀ ದೇಶಕ್ಕೆ ಮಾದರಿ. ಯೋಜನೆ ರಾಜ್ಯದ ಹೆಣ್ಣುಮಕ್ಕಳ ಬದುಕಿಗೆ ಶಕ್ತಿ ತುಂಬಿದೆ. ಸ್ವಾವಲಂಬಿ ಬದುಕಿನೆಡೆಗೆ ಪಯಣಿಸಬೇಕು ಎಂಬ ಉದ್ದೇಶದಿಂದ ಈ ಯೋಜನೆಯನ್ನು ಜಾರಿ ಮಾಡಲಾಗಿದೆ. ರಾಜ್ಯದ ಧಾರ್ಮಿಕ ಕೇಂದ್ರಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಭೇಟಿ ನೀಡುವ ಮೂಲಕ ಯೋಜನೆಯನ್ನು ಸ್ಮರಣೀಯವಾಗಿಸಿದ್ದಾರೆ ಎಂದರು.

ಶಕ್ತಿ ಯೋಜನೆಯನ್ನು ಜಾರಿಗೊಳಿಸಿ 2 ವರ್ಷಗಳು ಪೂರ್ಣಗೊಂಡಿದ್ದು, 500 ಕೋಟಿಗೂ ಹೆಚ್ಚು ಮಹಿಳೆಯರು ರಾಜ್ಯದ ಸರಕಾರಿ ಸ್ವಾಮ್ಯದ ಬಸ್ ಗಳಲ್ಲಿ ಉಚಿತವಾಗಿ ಪ್ರಯಾಣಿಸಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಸದಸ್ಯರಾದ ವಿಲಾಸ ಪಾಟೀಲ್, ಸಂಗಮೇಶ ವಾಲೆ, ಧನರಾಜ ಪಾಟೀಲ್, ಓಂಕಾರ ರಾಮಶಟ್ಟೆ, ಸತೀಶ ಮಾಳಗೆ, ಶ್ರೀನಿವಾಸ್ ಮೇತ್ರೆ,

ಬೀದರ ವಿಭಾಗದ ಲೆಕ್ಕಾಧಿಕಾರಿ ಧುಳಪ್ಪಾ ಮೂಡಬಿಕರ್ ಸೇರಿದಂತೆ ಸಂಜಕುಮಾರ

ಚಿದ್ರೆ ಬಸ್ ಚಾಲಕ, ನಿರ್ವಾಹಕರು ಇದ್ದರು. ಬಸ್ ಘಟಕ ವ್ಯವಸ್ಥಾಪಕ ಭದ್ರಾಪ್ಪ ಹುಡಗೆ ಸ್ವಾಗತಿಸಿ, ನಿರೂಪಿಸಿದರು.

## ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ ಯೋಜನೆ ಎಲ್ಲಾ ಪತ್ರಕರ್ತರಿಗೂ ವಿಸ್ತರಿಸಲು ಕೆಯುಡಬ್ಲೂಜೆ ಆಗ್ರಹ

ಬೆಂಗಳೂರು:ಜು.15:ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ ಯೋಜನೆಯಲ್ಲಿನ ಕಠಿಣ ಷರತ್ತಗಳನ್ನು ಸರಳೀಕರಣ ಮಾಡಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲೂಜೆ) ಮುಖ್ಯಮಂತ್ರಿಗಳನ್ನು ಒತ್ತಾಯಿಸಿದೆ.

ಮಾಧ್ಯಮ ಮಾನ್ಯತೆ ಪಡೆದ ಪತ್ರಕರ್ತರು ಮತ್ತು ಅವರ ಕುಟುಂಬಕ್ಕೆ ಈ ಯೋಜನೆಯನ್ನು ಸೀಮಿತ ಮಾಡಿರುವುದರಿಂದ ಬಹಳ ಜನ ಪತ್ರಕರ್ತರು ಯೋಜನೆಯಿಂದ ವಂಚಿತರಾಗುತ್ತಾರೆ. ಆದುದರಿಂದ ವಾರ್ತಾ ಇಲಾಖೆಯಲ್ಲಿ ಮಾಧ್ಯಮ ಪಟ್ಟಿಯಲ್ಲಿರುವ ಪತ್ರಿಕೆಗಳು ಮತ್ತು ಸುದ್ದಿ ಮಾಧ್ಯಮಗಳಲ್ಲಿ ಕೆಲಸ ಮಾಡುವ ಎಲ್ಲಾ ಪತ್ರಕರ್ತರಿಗೂ ಯೋಜನೆಯನ್ನು ವಿಸ್ತಾರ ಮಾಡಬೇಕು ಎಂದು ಕೆಯುಡಬ್ಲೂಜೆ ಆಗ್ರಹಿಸಿದೆ. ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ ಯೋಜನೆಯನ್ನು ಪತ್ರಿಕಾ ದಿನಾಚರಣೆ ಸಂದರ್ಭದಲ್ಲಿಯೇ ಜಾರಿಗೆ ನೀಡಿರುವುದು ಸ್ವಾಗತಾರ್ಹವಾಗಿದ್ದು, ಅದಕ್ಕಾಗಿ ಅಭಿನಂದಿಸುವುದಾಗಿ ತಿಳಿಸಿರುವ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಯೋಜನೆ ಎಲ್ಲಾ ಪತ್ರಕರ್ತರಿಗೂ ಸಿಗುವಂತೆ ಮಾಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಲ್ಲಿಸಿರುವ ಮನವಿಯಲ್ಲಿ ವಿನಂತಿಸಿದ್ದಾರೆ.

ತುಮಕೂರಿನಲ್ಲಿ ನಡೆದ 39ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಪತ್ರಕರ್ತರಿಗೆ ಉಚಿತ ಆರೋಗ್ಯ ಯೋಜನೆಯನ್ನು ಜಾರಿಗೆ ತರಬೇಕು ಎನ್ನುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲೂಜೆ) ಹಕ್ಕೊತ್ತಾಯಕ್ಕೆ ಸ್ಪಂಧಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅದೇ ವೇದಿಕೆಯಲ್ಲಿ ಯೋಜನೆ ಜಾರಿಗೆ ತರುವುದಾಗಿ ಘೋಷಿಸಿದ್ದು ಅಷ್ಟೇ ಅಲ್ಲ, ಬಜೆಟ್‌ನಲ್ಲಿಯೂ ಪ್ರಕಟಿಸಿ ನುಡಿದಂತೆ ನಡೆದಿದ್ದರು. ಈ ನಿಟ್ಟಿನಲ್ಲಿ ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರ ಪಾತ್ರವೂ ಪ್ರಾಮುಖ್ಯವಾಗಿತ್ತು ಎನ್ನುವುದನ್ನು ಕೆಯುಡಬ್ಲೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಸ್ಮರಿಸಿದ್ದಾರೆ.

# ಆಲ್ ಇಂಡಿಯಾ ಕಿಸಾನ್ ಸಭೆಯ ತುರ್ತು ಸಭೆ.

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ಇಂದು ಅಲ್ ಇಂಡಿಯಾ ಕಿಸಾನ್ ಸಭಾ ವತಿಯಿಂದ ತುರ್ತು ಸಭೆ ನಡೆಸಲಾಯಿತ್ತು. ರೈತರು ನಿರಂತರವಾಗಿ ಹಲವಾರು ಸಮಸ್ಯಗಳಿಂದತತ್ತರಿಸಿಹೋಗಿದ್ದು, ಪ್ರಸಕ್ತ ಸಾಲಿನಲ್ಲಿ ಸರಿಯಾದ ಪ್ರಮಾಣದಲ್ಲಿ ಮಳೆಯಾಗದೇ ಎರಡೇರಡು ಸಲ ಬಿತ್ತನೆ ಮಾಡಿ ಕೈ ಸುಟ್ಟುಕೊಂಡ ರೈತರು, ಕಂಗಾಲಾಗಿದ್ದಾರೆ. ಕೈಯಲ್ಲಿದ್ದ ಒಂದಿಷ್ಟು ಹಣ ಭೂಮಿಗೆ ಚೆಲ್ಲಿ ಮಳೆರಾಯನಿಗಾಗಿ ಕೈ ಕಟ್ಟಿ ಕುಳಿತ್ತಿರುವ ಸಮಯದಲ್ಲಿ, ಬೆಳೆ ಸಾಲ ಕೊಟ್ಟ ಬ್ಯಾಂಕ ಅಧಿಕಾರಿಗಳು ಪದೆ ಪದೆ ರೈತರ ಮನೆಗೆ ಹೋಗಿ ಕಿರಕುಳ ನೀಡಿ ಅವರ ಮಾನ ಹರಾಜು ಮಾಡುತ್ತಿದ್ದಾರೆ. ತುರ್ತಾಗಿ ಸಾಲ ಮರುಪಾವತಿ ಮಾಡದೆ ಹೋದರೆ ನ್ಯಾಯಾಲಕ್ಕೆ ಎಳೆಯುವುದಾಗಿ ಹೆದರಿಸಿ ರೈತರನ್ನು ಪರೋಕ್ಷವಾಗಿ ಆತ್ಮಹತ್ಯಗೆ ಪ್ರಚೋದಿಸುವಂತಹ ಸನ್ನಿವೇಶ ಸೃಷ್ಟಿಸುತ್ತಿದ್ದಾರೆ. ದಿನಾಂಕ 12-07-2025 ರಂದು ಲೋಕ ಅದಾಲತ್ ಹೆಸರಿನಲ್ಲಿ ರೈತರನ್ನು ನ್ಯಾಯಾಲಯಕ್ಕೆ ಕರೆಸಿ ಅವರನ್ನು ನ್ಯಾಯಾ ಧೀಶರ ಸಮುಖದಲ್ಲಿ ಹಾಜರುಪಡಿಸಿ ಅವರ ಅಹವಾಲನ್ನು ಕೇಳದೆ ಬ್ಯಾಂಕ ಅಧಿಕಾರಿಗಳೆ ನ್ಯಾಯಾಧೀಶರಂತೆ ವರ್ತಿಸಿ, ತಾವೇ ನಿರ್ಧರಿಸಿಕೊಂಡಷ್ಟು ಹಣ ತುಂಬುವಂತೆ ಪೀಡಿಸು ತಿರುವುದರ ವಿರುದ್ಧ ಸಿಡಿದೆದ್ದ ರೈತರು, "ಆಲ್ ಇಂಡಿಯಾ ಕಿಸಾನ ಸಭಾ" ತಾಲುಕು ಅಧ್ಯಕ್ಷರಾದ ಶ್ರೀ ಸೂರ್ಯಕಾಂತರಾವ್ ಮದಕಟ್ಟಿ ಇವರ ಅಧ್ಯಕ್ಷತೆಯಲ್ಲಿ ತುರ್ತು ಸಭೆ ಸೇರಿದರು. ಆಂಧ್ರ ಸರ್ಕಾರವು ಜಾರಿಗೊಳಿಸಿದ ರೀತಿಯಲ್ಲಿ ಕರ್ನಾಟಕ ಸರ್ಕಾರವು ಪ್ರತಿ ವರ್ಷ ಎಕರೆಗೆ ಐದು ಸಾವಿರ ರೂಪಾಯಿ ಸಹಾಯ ಧನ ನೀಡಬೇಕು. 2015 ರಿಂದ 2020ರ ವರೆಗೆ ಬೆಳೆ ಸಾಲ ಪಡೆದ ರೈತರ ಸಾಲ ಮನ್ನಾ ಮಾಡಬೇಕು. ಪ್ರಸಕ್ತ ವರ್ಷ ತಕ್ಷಣ ಬೆಳೆ ಸಮಿಕ್ಷೇ ನಡೆಸಿ ಬರಗಾಲ ಬೀದರ ಜಿಲ್ಲೆ ಬರಗಾಲ ಘೋಷಣೆ ಮಾಡಿ ಪರಿಹಾರ ಒದಗಿಸಬೇಕು. ಬೀದರ ಸಹಕಾರ ಸಕ್ಕರೆ ಕಾರ್ಖಾನೆ ( ಬಿ ,ಎಸ್. ಎಸ್. ಕೆ) ಪುನರಾರಂಭಿಸಿ ಕಬ್ಬ ಬೆಳೆಗಾರರ ಸಮಸ್ಯ ಪರಿಹರಿಸಬೇಕು. ಬೆಂಬಲ ಬೆಲೆ ನಿರ್ಧರಿಸಲು ಕಾನೂನು ರೂಪಿಸಲು ಶಿಫಾರಸ್ಸು ಮಾಡಬೇಕು. ಬೆಲೆ ನಿರ್ಧಾರ ಕಮಿಟಿಯಲ್ಲಿ ಅರ್ಧದಷ್ಟು ರೈತ ಪ್ರತಿನಿಧಿಗಳು ಭಾಗವಹಿಸುವಂತ್ತಿರಬೇಕು ಎಂಬಿತ್ಯಾದಿ ಬೇಡಿಕೆಗಳು ಮುಂದಿಟ್ಟುಕೊಂಡು ಮಾನ್ಯ ತಹಸಿಲ್ದಾರ ಅವರ ಮುಖಾಂತರ ರಾಜ್ಯದ ಮುಖ್ಯ ಮಂತ್ರಿ ಗಳಿಗೆ ಮನವಿ ಪತ್ರ ಸಲ್ಲಿಸಿರುತ್ತಾರೆ. ಈ ಸಂದರ್ಭದಲ್ಲಿ ಆಲ್ ಇಂಡಿಯಾ ಕಿಸಾನ ಸಭೆಯ ರಾಜ್ಯ ಉಪಾಧ್ಯಕ್ಷ ಬಾಬುರಾವ್ ಹೊನ್ನಾ .ಆ.ಇಂ.ಕೀ ಸ. ಜಿಲ್ಲಾ ಅಧ್ಯಕ್ಷ ನಜೀರ ಅಹಮದ್. ಬಸವಕಲ್ಯಾಣ ತಾಲುಕಾ ಅಧ್ಯಕ್ಷ ಸೂರ್ಯಕಾಂತ ಮದಕಟ್ಟಿ, ಸಹ ಕಾರ್ಯದರ್ಶಿ ರಾಮಯ್ಯಸ್ವಾಮಿ. ಇಬ್ರಾಹಿಮ್ ಸಾಬ ವಕೀಲರು. ರವಿಂದ್ರ ನಲ್ಲಕಂಟೆ ವಕೀಲರು, ಮಹಿಳಾ ಹಕ್ಕು ಒಕ್ಕೂಟದ ಸಿಂಧುತಾಯಿ ಮಾನೆ. ಮಲ್ಲಮ್ಮಾ ಮುಡಬಿ. ಸಂತೋಷಿ ಮುಡಬಿ. ಸುಧಾಮ, ಮೋತಿರಾಂ ಮಿರಖಲ್ ಮತ್ತು ಸಾವನಕುಮಾರ ಎಸ್ ಕೆ. ಇದ್ದರು.

# ಕನ್ನಡ ಸೇನೆ ಕರ್ನಾಟಕ ಸಂಘಟನೆಗೆ ನೂರಅಲಿ ನೇಮಕ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ:- ಕನ್ನಡ ಸೇನೆ ಕರ್ನಾಟಕ ಸಂಘಟನೆಯನ್ನು ಬಲಿಷ್ಠ ಪಡಿಸುವ ನಿಟ್ಟಿನಲ್ಲಿ ಕನ್ನಡ ನಾಡು, ನುಡಿ, ನೆಲ, ಜಲಕ್ಕಾಗಿ ಹಗಲಿರುಳು ಶ್ರಮಿಸಬೇಕೆಂದು ಕನ್ನಡ ಸೇನೆ ಕರ್ನಾಟಕ ಸಂಘಟನೆಗೆ ತಾಲೂಕಿನ ನಿರ್ಣಾ ವಲಯ ಮಟ್ಟದ ಅಧ್ಯಕ್ಷರಾಗಿ ನೂರಅಲಿ ದರ್ವೇಶ್ ರವರನ್ನು ನೇಮಕ ಮಾಡಲಾಗಿದೆ ಎಂದು ಕನ್ನಡ ಸೇನೆ ಕರ್ನಾಟಕ ಸಂಘಟನೆ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾಣಿಕಪ್ಪಾ ಸಂಗನಬಟ್ಟೆ ಅವರ ಸೇವಾ ನಿವೃತ್ತಿ ಬೀಳ್ಕೊಡು ಸಮಾರಂಭ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: - ಜು 15 ತಾಲೂಕಿನ ಗೌರ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯಲ್ಲಿ ಮಾಣಿಕ್ಕಪ್ಪ ಸಂಗನಬಟ್ಟೆ ಅವರ ಸೇವಾ ನಿವೃತ್ತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ತಿಪುರಾಂತಿನ ಪೂಜ್ಯ ಶ್ರೀ ಡಾ.ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ದಿವ್ಯಸಾನಿಧ್ಯವಹಿಸಿ ಮಾತನಾಡಿ ಖಾಸಗಿ ಶಾಲೆಗಿಂತ ಮೀರಿ ಬೆಳೆದ ಸರಕಾರಿ ಶಾಲೆ ಯಾವುದಾದರೂ ಇದ್ದರೆ ಅದು ಗೌರ ಸರ್ಕಾರಿ ಪ್ರೌಡ ಶಾಲೆ ಇದೆ ಎಂದು ಹರ್ಷ ವ್ಯಕ್ತಪಡಿಸಿದರು. ಇಂತ ಪರಿಸರ ಮಾದರಿಯ ಶಾಲೆಯಲ್ಲಿ ಉತ್ತಮ ಶಿಕ್ಷಣ ಪಡೆಯುವದು ನಿಮ್ಮ ಭಾಗ್ಯ ಎಂದು ಮಕ್ಕಳಿಗೆ ಕಿವಿ ಮಾತು ಹೇಳಿದರು.

ಇದಕ್ಕೂ ಮುಂಚೆ ಶಾಲೆಯ ಸಿ. ಸಿ. ಕಾಮರ್ ಅಳವಡಿಸಿದ ಮುಖ್ಯೋಪಾಧ್ಯಾಯರ ಕೋಣೆ ಹಾಗೂ ಕಮಿಟಿಯ ಹಾಲ್ ಸಿಬ್ಬಂದಿ ಕೋಣೆ ವಿದ್ಯಾರ್ಥಿಗಳ ವರ್ಗಗಳು ಶಾಲೆಯಲಿ ಅಧ್ಯಾತ್ಮಿಕ ರಾಜಕೀಯ ಸಾಮಾಜಿಕ ಗಣ್ಯ ಪುರುಷರ 200 ಕ್ಕೂ ಹೆಚ್ಚು ಭಾವಚಿತ್ರಗಳು ಹಾಗೂ ಮರಗಳಿಂದ ಕೂಡಿದ ಗ್ರೌಂಡು ಕಾಂಪೌಂಡು ಪೂಜ್ಯರು ವೀಕ್ಷಿಸಿದರು. ಶಾಲೆಯ ಮುಖ್ಯ ಗುರುಗಳಾದ ಸುಧಾ- ಕರ ಮಹೇಂದ್ರಕರ ಅವರು ಮಾತನಾಡಿ ಸರ್ಕಾರಿ ಶಾಲೆ ನಮ್ಮ ಶಾಲೆ ಎಂದು ತಿಳಿದು ಇಂತಹ ಕಾರ್ಯ ವೈಖರಿ ಮಾಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಹಾಗೂ ನಿವೃತ್ತ ಹೊಂದಿದ ಮಾಣಿಕಪ್ಪ ಸಂಗನಬಟ್ಟೆ ಶರಣ ದಂಪತಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಲ್ಬುರ್ಗಿ ವಾಣಿಜ್ಯ ಇಲಾಖೆಯ ಆಯುಕ್ತರಾದ ಮಹೇಶ ಪಾಟೀಲ ಉದ್ಘಾಟಿಸಿದರು. ನಾಗೇಂದ್ರ ಬಿರಾದಾರ. ಎಸ್ ಡಿ ಎಮ್ ಸಿ ಅಧ್ಯಕ್ಷರಾದ ಶಾಂತಿ ವೀರ್ ಕುಮಾರ್ ಮಾತನಾಡಿದರು. ಈ ಸಂದರ್ಭದಲ್ಲಿ ನಿವೃತ್ತ ಮುಖ್ಯ ಶಿಕ್ಷಕರು ಬಸವರಾಜ ಮಠಪತಿ, ವೀರಶೆಟ್ಟಿ ಮಲಶೆಟ್ಟಿ, ನಾಗರಾಜ ಹಾವಣ್ಣಾ ಶಿವರಾಜ ಕನಶೆಟ್ಟಿ ಇಸಿಓ, ಪುಷ್ಪರಾಜ್ ಹರಕೂಡೆ, ಶಿಕ್ಷಕರಾದ ಜಗದೀಶ್ ಬುಡಗೆ, ಸುಮಂಗಲ ಶ್ರೀದೇವಿ ಮಹಾಂತೇಶ್ ಬಗಲಿ ನಾಗಣ್ಣ ಮೈಲಾರೆ, ಧೋಂಡಿಬಾ, ಸಂತೋಷ, ಪ್ರಕಾಶ, ಲಕ್ಷ್ಮ, ರವಿ ಚವ್ಹಾಣ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಡಾ. ಸಿದ್ರಾಮ್ ವಾಘಮಾರೆ ಸುರ್ಜೆವಾಲಾ ಜಿಯವರನ್ನು ಭೇಟಿ:

# ನಾಮನಿರ್ದೇಶನ ಮಾಡಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಎಐಸಿಸಿ ಪ್ರದಾನ ಕಾರ್ಯದರ್ಶಿ ಹಾಗೂ ರಾಜ್ಯ ಕಾಂಗ್ರೆಸ್ ಪಕ್ಷದ ಉಸ್ತುವಾರಿಗಳಾದ ರಣದೀಪ್ ಸಿಂಗ್ ಸುರ್ಜೆವಾಲಾ ಜಿಯವರನ್ನು ಮಂಗಳವಾರರಂದು ಬೆಂಗಳೂರ ಕೆಪಿಸಿಸಿ ಕಚೇರಿಯಲ್ಲಿ ಹಿಂದುಳಿದ ವರ್ಗಗಳ ಹಿರಿಯ ನಾಯಕ ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡ ಡಾ.ಸಿದ್ರಾಮ್ ವಾಘಮಾರೆ ರವರು ಭೇಟಿಯಾಗಿ ವಿವಿಧ ಇಲಾಖೆಯ ಹಾಗೂ ಅಧ್ಯಕ್ಷ ಸ್ಥಾನ ನಾಮನಿರ್ದೇಶಕರಾಗಿ ಆಯ್ಕೆ ಮಾಡುವ ಕುರಿತು ಚರ್ಚೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರನ್ನು ಪರಿಗಣಿಸಿ ಪಕ್ಷಕಾಗಿ ದುಡಿದ ಕಾರ್ಯಕರ್ತರನ್ನು ಆದಷ್ಟು ಬೇಗನೆ ಆಯ್ಕೆ ಮಾಡಿ ಜನ ಸೇವೆ ಮಾಡಲು ಅವಕಾಶ ದೊರಕಿಸಿ ಕೊಡಬೇಕೆಂದು ಮನವಿ ಮಾಡಿದ್ದಾರೆ.

# ಬೋಗಸ್ ಬಿಲ್ ಮಾಡದೆ ಗುಣಮಟ್ಟದ ಕೆಲಸ ಮಾಡಿ - ಬಾಬುರಾವ್ ಚಿಂಚನಸೂರ್.



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್: ಯಾದಗಿರಿ ಭೀಮ ನದಿಯಿಂದ ಪಟ್ಟಣಕ್ಕೆ ಕುಡಿಯುವ ನೀರನ್ನು ಕಲ್ಪಿಸುವ ಸುಮಾರು 24.75 ಕೋಟಿಗಳ ಯೋಜನೆಯಾದ ಅಮೃತ 2.0 ಕುರಿತಾದ ಸಂಪೂರ್ಣ ಮಾಹಿತಿಯನ್ನು ಪಡೆದ ಗುರುಮಠಕಲ ಮತಕ್ಷೇತ್ರದ ಮಾಜಿ ಶಾಸಕರು ಹಾಗೂ ಸಪ್ತ ಖಾತೆ ಸಚಿವರು, ನಿಜ ಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ಮಂಡಳಿಯ ಅಧ್ಯಕ್ಷರು ಆದ ಬಾಬುರಾವ್ ಚಿಂಚನಸೂರ್ ಅವರು ಅಧಿಕಾರಿಗಳಿಗೆ ಗುಣಮಟ್ಟದ ಕೆಲಸ ಮಾಡಲು ಸೂಚನೆ ನೀಡಿದರು.

ಪಟ್ಟಣದ ಸರ್ಕ್ಯೂಟ್ ಹೌಸ್ ನಲ್ಲಿ ಇಂದು ಕಾರ್ಯಕರ್ತರೊಂದಿಗೆ ಸಮಾಲೋಚನೆ ಮಾಡಿ ಪಕ್ಷದ ಹಿರಿಯರಾದ ಬಾಲಪ್ಪ ನೀರೆಟಿ ಅವರ ಆರೋಗ್ಯ ವಿಚಾರಿಸಿದರು, ತದನಂತರ ಪಟ್ಟಣದ ಕುಡಿಯುವ ನೀರಿನ ಯೋಜನೆಯ ಕುರಿತಾದ ಮಾಹಿತಿಯನ್ನು ಕಾರ್ಯಪಾಲಕ ಅಭಿಯಂತರರಾದ ಅಶೋಕ್ ರಾಥೋಡ್ ಹಾಗೂ ಅಭಿಯಂತರರಾದ ರಾಜು ಹಬೀಬ್ ಅವರೊಂದಿಗೆ ಯೋಜನೆಯ ನೀಲನಕ್ಷೆಯನ್ನು ವೀಕ್ಷಿಸಿ ಹಂತ ಹಂತವಾಗಿ ಅರ- ಕೇರ ಧರಂಪುರ್ ಒಳಗೊಂಡಂತೆ ಯೋಜನೆಯ ಕಾರ್ಯ ಯಾವ ಹಂತದಲ್ಲಿದೆ ಎಂದು ಸಂಪೂರ್ಣ ಮಾಹಿತಿಯನ್ನು ಪಡೆದರು.

ಯೋಜನೆಯನ್ನು ಸಕಾಲದಲ್ಲಿ ಪೂರ್ಣಗೊಳಿಸಿ ಜನರಿಗೆ ಅನುಕೂಲ ಮಾಡಲು, ಕಾಮಗಾರಿಯಲ್ಲಿ ಯಾವುದೇ ಅವ್ಯವಹಾರ ಜರುಗದಂತೆ ಸೂಚನೆ ನೀಡಿದರು.

ಮಲ್ಲಿಕಾರ್ಜುನ್ ಖರ್ಗೆಯವರ ಗುರುಮಠಕಲ ಕ್ಷೇತ್ರದ ಅಭಿವೃದ್ಧಿಗೆ ಮಲ್ಲಿಕಾರ್ಜುನ್ ಖರ್ಗೆಯವರ ಪಾತ್ರ ಮಹತ್ವದ್ದಾಗಿದೆ, ಸದ್ಯ ಭಾಜಪ ಪಕ್ಷ ತನ್ನ ಶಕ್ತಿ ಕಳೆದುಕೊಂಡಿದ್ದು, ಮುಂದಿನ ದಿನಗಳಲ್ಲಿ ಅವರು ಪ್ರಧಾನಿಯಾಗುತ್ತಾರೆ ಎಂಬ ವಿಶ್ವಾಸ ನನಗಿದೆ ಎಂದು ಹೇಳಿದರು

ಈ ಸಂದರ್ಭದಲ್ಲಿ ಪುರಸಭೆ ಉಪಾಧ್ಯಕ್ಷರಾದ ರೇಣುಕಾ ಪಡಿಗೆ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಾ ಚಪೆಟ್ಲಾ, ಪ್ರಮುಖರಾದ ಬಸವರಾಜ ದಳಪತಿ, ಬಾಲಪ್ಪ ನೀರೆಟಿ, ಭೀಮಶಪ್ಪ ರಾಂಪೂರ, ಬಸವಂತರಾಜ ನೀರೆಟಿ, ಭಗವಂತ ರೆಡ್ಡಿ ಕೊಂಕಲ್, ಪುರಸಭೆ ಸದಸ್ಯರಾದ ಖಾಜಾ ಮೈನೋದ್ದೀನ್, ಪಾಪಿರೆಡ್ಡಿ, ಹಾಗೂ ಫೈಯಾಜ್ ಅಹಮದ್, ಮಾಣಿಕ್ ಮುಕಡಿ, ಲಿಂಗಪ್ಪ ತಾಂಡೂರಕರ್, ನರೇಶ್ ಮುದಿರಾಜ, ರವಿ ಉಪ್ಪರಗಡ್ಡ, ಜಗದೀಶ್ ಪೂಜಾರಿ, ಅಶೋಕ್ ಶನಿವಾರಂ ಇತರರು ಇದ್ದರು.

# ಜುಲೈ 16ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜುಲೈ.15-ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದಲ್ಲಿ ಬರುವ ಈ ಕೆಳಕಂಡ ಫೀಡರ್‌ಗಳ ವ್ಯಾಪ್ತಿಯಲ್ಲಿ ನಿರ್ವಹಣಾ ಕಾರ್ಯ ಕೈಗೊಳ್ಳುವ ಪ್ರಯುಕ್ತ ಇದೇ ಜುಲೈ 16ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಜೆಸ್ಕಾಂನೊಂದಿಗೆ ಸಹಕರಿಸುವಂತೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರರು(ವಿ) ಪ್ರಕಟಣೆಯಲ್ಲಿ ಕೋರಿದ್ದಾರೆ.

ದೇವಿನಗರ ಫೀಡರ್: ದೇವಿ ನಗರ, ಸಂತೋಷ ಕಾಲೋನಿ, ಖಾದ್ರಿ ಚೌಕ್, ನಬಿ ಕಾಲೋನಿ, ಚಿಂಚೋಳಿ ಲೇಔಟ್, ಜಾಫರಾಬಾದ್, ಪ್ರಭುದೇವ ನಗರ, ಮಾಳೇವಾಡಿ, ಜೆ. ಆರ್. ನಗರ, ಶೇಖ್ ನಗರ, ವಿಶ್ವರಾಧ್ಯ ಕಾಲೋನಿ, ಮಲ್ಲಿಕಾರ್ಜುನ ದೇವಸ್ಥಾನ ಹಾಗೂ ಸುತ್ತ-ಮುತ್ತಲಿನ ಪ್ರದೇಶಗಳು.

ಆಳಂದ ಕಾಲೋನಿ ಫೀಡರ್: ಚಿಂಚೋಳಿ ಲೇಔಟ್, ಚೊರ ಬಜಾರ, ಫೀಲ್ಟರ್ ಬೆಡ್ ಚೆಕ್‌ಪೋಸ್ಟ್, ಶಿವಾದಾಲ್ ಮಿಲ್, ರಾಮತೀರ್ಥ, ರಾಣೇಶಪೀರ್ ದರ್ಗಾ, ವಿಶ್ವರಾಧ್ಯ ಮಂದಿರ, ಸಿದ್ದರಾಮೇಶ್ವರ ನಗರ, ಆಯ್ಯೋಧ್ಯ ನಗರ, ಲಕ್ಷ್ಮೀ ನಗರ, ಅಹ್ಮದ ನಗರ ಪಿ.ಎಫ್. ಕಚೇರಿ, ಆಳಂದ ಕಾಲೋನಿ, ನಬಿ ಕಾಲೋನಿ, ಶೇಖ ರೋಜಾ, ಖಾದ್ರಿ ಚೌಕ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

ಎಮ್.ಎಸ್.ಕೆ. ಮಿಲ್ ಫೀಡರ್: ಮದೀನಾ ಕಾಲೋನಿ, ನ್ಯೂ ಮದೀನಾ ಕಾಲೋನಿ, ಮಿಸ್ಬಾ ನಗರ, ಇಕ್ಬಾಲ್ ಕಾಲೋನಿ, ಹುಸೇನ್ ಗಾರ್ಡನ್, ಕೃಷ್ಣ ಮಿನರಲ್ಸ್, ನ್ಯೂ ರಾಘವೇಂದ್ರ ಕಾಲೋನಿ, ಖಾನಿ ಏರಿಯಾ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

ಪಟ್ಟಣ (ಎನ್.ಜೆ.ವೈ.) ಫೀಡರ್: ಕೆರಿಬೋಸಗಾ, ಭೀಮಳ್ಳಿ, ಪಟ್ಟಣ ಗ್ರಾಮ, ಪಟ್ಟಣ ಕ್ರಾಸ್, ಹತಗುಂದಾ, ಯಳವಂತಗಿ, ಸವಳಗಿ(ಬಿ), ಸವಳಗಿ ಸ್ಟೇಷನ್, ಬೇಲೂರ್ ಇಂಡಸ್ಟ್ರಿಯಲ್ ಮತ್ತು ಬನ್ನೂರ(ಎನ್.ಜೆ.ವೈ.), ಆಳಂದ ರೋಡ್ (ರೈಲ್ವೆ ಟ್ರ್ಯಾಕ್‌ದಿಂದ ಪಟ್ಟಣ ಕ್ರಾಸ್).

ಶರಣನಗರ ಫೀಡರ್: ಸ್ವಸ್ತಿಕ್ ನಗರ, ಬಸವೇಶ್ವರ ಕಾಲೋನಿ, ಆದರ್ಶ ಕಾಲೋನಿ, ಸಂತ್ರಾಸ್‌ವಾಡಿ, ಖರ್ಗೆ ಪೆಟ್ರೋಲ್ ಬಂಕ್ ಹತ್ತಿರ, ಪ್ರಗತಿ ಕಾಲೋನಿ, ಸ್ವಾಪ್ ಆಂಡ್ ಶಾಪ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.




ಬಸವಕಲ್ಯಾಣ :- ಇಲ್ಲಿನ ಅನುಭವ ಮಂಟಪದ ಪರಿಸರದಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಪ್ರವಚನ ಸೇವಾ ಸಮಿತಿ ಅಧ್ಯಕ್ಷರಾಗಿ ಆಯ್ಕೆ ಗೊಂಡ ಶಿವಪುತ್ರಪ್ ಔಸೆ ಅವರನ್ನು ಸನ್ಮಾನಿಸಲಾಯಿತು.ಈ ಸಂದರ್ಭದಲ್ಲಿ ಭಾಲ್ಕಿಯ ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು. ಅನುಭವ ಮಂಟಪ ಸಂಚಾಲಕರಾದ ಪೂಜ್ಯ ಶ್ರೀ ಶಿವಾನಂದ ದೇವರು. ಅನಿಲ್ ಮಹಾರಾಜರು. ಸುಗುಣಾತಾಯಿ. ಇಷ್ಟಲಿಂಗ ಸ್ವಾಮಿ. ಹಾಲಮ್ಮತಾಯಿ. ರಾಜಕುಮಾರ ರಟಕಲೆ. ಕಲ್ಯಾಣರಾವ ಶಿವಣಕರ್. ಜಗನ್ನಾಥ ಪತಂಗೆ. ರವಿ ಕೊಳಕೂರ. ಆಕಾಶ ಖಂಡಾಳೆ. ನಾಗಶೆಟ್ಟಿ ಪಾಟೀಲ. ಮಲ್ಲಿಕಾರ್ಜುನ ಆಲಗೂಡೆ. ರೇವಣಸಿದ್ದ ಡೊಂಗರೆ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

## ರಾಮಲಿಂಗಾರೆಡ್ಡಿ ರವರ ಕೃಪೆಯಿಂದ ರಾಂಪೂರವಾಡಿಗೆ ಬಸ್ ಆರಂಭ

# ಬಸ್ ಬಂತು ಬಸ್ ರಾಂಪೂರವಾಡಿಗೆ:ಶಾಲೆಯ ಮಕ್ಕಳ ಹರ್ಷ




(ಮಲ್ಲುರೆಡ್ಡಿ ಹುಮನಾಬಾದ)

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ತಾಲೂಕಿನ ರಾಂಪೂರವಾಡಿ ಗ್ರಾಮಕ್ಕೆ ಸ್ವಾತಂತ್ರ್ಯ ಬಂದ ಮೇಲೆ ಪ್ರಥಮ ಬಾರಿಗೆ ಬಸ್ ಗ್ರಾಮಕ್ಕೆ ಬಂದಿದಕ್ಕೆ ಗ್ರಾಮಸ್ಥರು ಹರ್ಷಗೊಂಡು ಭವ್ಯವಾಗಿ ಸ್ವಾಗತಿಸಿಕೊಂಡಿದ್ದಾರೆ. ಈ ಗ್ರಾಮಕ್ಕೆ ಶಾಲೆಯ ಮಕ್ಕಳು ಸಾರ್ವಜನಿಕರು ಬಸವ ಕಲ್ಯಾಣ ತಾಲ್ಲೂಕಿನ ರಾಜೇಶ್ವರ ಗ್ರಾಮದಿಂದ ರಾಂಪೂರವಾಡಿ ಗ್ರಾಮಕ್ಕೆ ತೆರಳಲು ಆಟೋ ಚಾಲಕರು ರೂ.50 ರಿಂದ 100 ರೂ. ವರೆಗೆ ತೆಗೆದುಕೊಳ್ಳುವುದರಿಂದ ಶಾಲೆಯ ಮಕ್ಕಳು ಹಾಗೂ ರಾಂಪೂರವಾಡಿ ಗ್ರಾಮಸ್ಥರು ದಿನಾಲೂ 3ಕೀ.ಮಿ. ವರೆಗೆ ನಡೆದುಕೊಂಡು ಹೋಗುತ್ತಿದ್ದರು. ಆಗ ಬಸ್ ಡಿಪೋ ಮ್ಯಾನೇಜರ್ ರವರು ಚಾಲಕರಿಗೆ ಬಸ್ ತರಲು ತಿಳಿಸಿದಾಗ ರಾಂಪೂರವಾಡಿ ಗ್ರಾಮಕ್ಕೆ ಬಸ್ ತೆರಳಲು ಚಾಲಕ ರೌಡ ಹಾಕಿದ ಹಿನ್ನಲೆಯಲ್ಲಿ ಬಸ್ ಡಿಪೋ ವ್ಯವಸ್ಥಾಪಕರು, ಚಾಲಕರು ಹಾಗೂ ಡಾ.ಸಿದ್ಧಲಿಂಗಪ್ಪಾ ಪಾಟೀಲರವರು ಪರಿಸೀಲನೆ ಮಾಡಿ ಭರವಸೆ ನೀಡಿದ ಹಿನ್ನಲೆಯಲ್ಲಿ ಬಸ್ ಚಾಲನೆಗೆ ವಿಳಂಬವಾಗಿತ್ತು. ಮತ್ತೆ ಸಮಾಜ ಕಾರ್ಯಕರ್ತ ಹಾಗೂ ಆಶ್ರಯ ದೀಪ ಟ್ರಸ್ಟ್ ಅಧ್ಯಕ್ಷ ಭೀಮರೆಡ್ಡಿ ಸಿಂಧನಕೇರಾರವರು ಈ ಬಸ್ಸಿನ ಸಮಸ್ಯೆಯನ್ನು ಮೇಲಾಧಿಕಾರಿಗಳಿಗೆ ದೂರವಾಣಿ ಮುಖಾಂತರ ಸಂಪರ್ಕಿಸಿದಾಗ ಬಸ್ ರಾಂಪೂರವಾಡಿ ಗ್ರಾಮಕ್ಕೆ ತೆರಳಲು ತಿರುವು ಮಾಡುವುದಕ್ಕೆ ಆಗುತ್ತಿಲ್ಲ, ಯರಬಾಗ ಮಾರ್ಗವಾಗಿ ಬಸ್ ಸಂಚಾರ ಮಾಡಲು ಡಾಂಬರೀಕರಣ ರಸ್ತೆ ಇದೆ ಎಂದರು. ಈ ಗ್ರಾಮಕ್ಕೆ ಬಸ್ ಅನ್ನುವುದೇ ಇದ್ದಿಲ್ಲ. ನಮ್ಮ ಕಾಲುನೆಡಗೆನೇ ನಮ್ಮ ಸರ್ವಸ್ವವಾಗಿತ್ತು ಎಂದು ಗ್ರಾಮಸ್ಥರು ತಿಳಿಸಿದಾಗ ಇಲ್ಲಿಯವರೆಗೆ ಯಾರೊಬ್ಬರೂ ಬಸ್ ವ್ಯವಸ್ಥೆ ಮಾಡುವ ಕೆಲಸ ಮಾಡಲಿಲ್ಲ. ಅದರೆ ಶಾಲೆಯ ಮಕ್ಕಳೇ ಈ ಗ್ರಾಮಕ್ಕೆ ಬಸ್ ಬಂದೇ ಬರಬೇಕು ಎಂದು ಹುಮನಾಬಾದ ಆಶ್ರಯ ದೀಪ ಟ್ರಸ್ಟ್ ಅಧ್ಯಕ್ಷ ಭೀಮರೆಡ್ಡಿ ಸಿಂಧನಕೇರಾ ರವರಿಗೆ ತಿಳಿಸಿದಾಗ ಅವರು, 6 ತಿಂಗಳಲೇ ಬಸ್ ಡಿಪೋ ವ್ಯವಸ್ಥಾಪಕರಿಗೆ ಹಾಗೂ ಡಿಸಿರವರಿಗೆ ದೂರವಾಣಿ ಮುಖಾಂತರ ಮಾತನಾಡಿ, ಬಸ್ಸಿನ ವ್ಯವಸ್ಥೆ ಕಲ್ಪಿಸಿಕೊಡಿ, ಏಕೆಂದರೆ ಮಕ್ಕಳು ಶಾಲೆಗೆ ಹೋಗಿ ಏನಾದರೂ ಸಾಧಿಸಬೇಕಾದರೆ ಸಮಯಕ್ಕೆ ಸರಿಯಾಗಿ ಬಸ್ ಬಂದಿದರೆ ಮಾತ್ರ ಶಾಲೆಯ ಮಕ್ಕಳು ಡಾ-ಕ್ಟರ್, ಇಂಜಿನಿಯರ್ ಹಾಗೂ ವಿವಿಧ ಹುದ್ದೆಯಲ್ಲಿ ಸೇರಲು ಸಾಧ್ಯವಾಗುತ್ತದೆ ಸರ್ ಎಂದು ಹೇಳಿದರು. ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ರವರಿಗೆ ಈ ಸಮಸ್ಯೆ ಮನವರಿಕೆಯಾಗಿ ಕೆಎಸ್‌ಆರ್‌ಟಿಸಿ ಮೇಲಾಧಿಕಾರಿಗಳಿಗೆ ಈ ಗ್ರಾಮಕ್ಕೆ ಬಸ್ ಸಂಚಾರ ಮಾಡಲು ಆದೇಶಿಸಿದಕ್ಕೆ ಈ ಬಸ್ ಸಂಚಾರ ಆರಂಭಗೊಂಡಿದೆ. ರಾಂಪೂರವಾಡಿ ಗ್ರಾಮಕ್ಕೆ ಬಂದಿರುವುದರಿಂದ ಶಾಲೆಯ ಮಕ್ಕಳು, ಗ್ರಾಮಸ್ಥರು, ಆಶ್ರಯ ದೀಪ ಟ್ರಸ್ಟ್ ರಿ ಹುಮ್ನಾಬಾದ್ ಅಧ್ಯಕ್ಷ ಭೀಮರೆಡ್ಡಿ ಸಿಂಧನಕೇರಾ, ಉಪಾಧ್ಯಕ್ಷ ಅರವಿಂದ ಜೋಗಿರೆ, ಖಜಾಂಚಿ ಮೋಹನ್ ಸಿಂಗ್, ಸದಸ್ಯರಾದ ಉದಯಕುಮಾರ್ ವಾರದ, ಯುವರಾಜ್ ಐಹೊಳೆ ಸಂತಸ ಪಟ್ಟರು.

# ಕೋನಹಳ್ಳಿ ಗ್ರಾಮದಲ್ಲಿ ರೈತರ ಕೃಷಿ ಹೊಂಡಕ್ಕೆ ರಾಸಾಯನಿಕ ಬೆರೆಸಿದ ಕಿಡಿಗೇಡಿಗಳು - ಗ್ರಾಮಸ್ಥರಲ್ಲಿ ಭೀತಿಯ ವಾತಾವರಣ.!!!



(ಎಂ.ರಫೀಕ್ ಪಟೇಲ್)

ಮಲ್ಲಮ್ಮ ನುಡಿ ವಾರ್ತೆ

ವಡಗೇರಾ ತಾಲೂಕಿನ ಕೋನಹಳ್ಳಿ ಗ್ರಾಮದಲ್ಲಿ ವಾಮಾಚಾರಿಗಳ ಕಿಡಿಗೇಡಿ ಕೃತ್ಯಗಳು ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದ್ದು, ಸ್ಥಳೀಯ ರೈತ ಸಮುದಾಯ ಆತಂಕದ ಗೂಡಾಗಿದೆ. ಜುಲೈ 14ರಂದು ರೈತ ದುರಗಪ್ಪ ಕರಿಗುಡ್ಡನವರ ಹೊಲದ ಕೃಷಿ ಹೊಂಡಕ್ಕೆ ಕೆಲವರು ರಾಸಾಯನಿಕವನ್ನು ಬೆರೆಸಿ, ಗ್ರಾಮದ ಜನ-ಜಾನುವಾರುಗಳ ಜೀವನಾಧಾರವಾದ ನೀರನ್ನು ಕಲುಷಿತಗೊಳಿಸಿದ್ದಾರೆ. ಈ ಘಟನೆಯಿಂದ ದುರಗಪ್ಪನವರ ಜೊತೆಗೆ ಸುತ್ತಲಿನ ರೈತರು ಕಂಗೆಟ್ಟಿದ್ದಾರೆ.

ಈ ಕೃಷಿ ಹೊಂಡದ ನೀರು ಕುಡಿಯಲು ಯೋಗ್ಯವಾಗಿದ್ದು, ಗ್ರಾಮಸ್ಥರು ಮತ್ತು ಜಾನುವಾರುಗಳು ಇದರ ಮೇಲೆ ಅವಲಂಬಿತರಾಗಿದ್ದಾರೆ. ಆದರೆ, ಕಿಡಿಗೇಡಿಗಳು ರಾಸಾಯನಿಕ ಬೆರೆಸಿ ಪರಾರಿಯಾಗಿರುವುದರಿಂದ, ಈ ನೀರಿನಿಂದ ಆರೋಗ್ಯಕ್ಕೆ ಹಾನಿಯಾಗಬಹುದೆಂಬ ಭಯ ಎದುರಾಗಿದೆ. ಗ್ರಾಮದಲ್ಲಿ ಇಂತಹ ಘಟನೆಗಳು ಇದೇ ಮೊದಲೇನಲ್ಲ, ಈ ಮೊದಲೂ ಕೆಲವೊಮ್ಮೆ ಇಂತಹ ಕೃತ್ಯಗಳು ನಡೆದಿವೆ ಎಂದು ರೈತರು ಹೇಳುತ್ತಾರೆ.

ಕೋಪಗೊಂಡ ರೈತರು, ಈ ಕೃತ್ಯದ ಹಿಂದಿರುವವರನ್ನು ಪತ್ತೆಹಚ್ಚಿ, ಕಾನೂನಿನ ಕಠಿಣ ಶಿಕ್ಷೆಗೆ ಒಳಪಡಿಸಬೇಕೆಂದು ಒತ್ತಾಯಿಸುತ್ತಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ಗಂಭೀರವಾಗಿ ಈ ವಿಷಯವನ್ನು ಪರಿಗಣಿಸಿ, ನೀರಿನ ಗುಣಮಟ್ಟವನ್ನು ಪರೀಕ್ಷಿಸಿ, ತಪ್ಪಿತಸ್ಥರನ್ನು ಶಿಕ್ಷಿಸಬೇಕೆಂದು ಆಗ್ರಹಿಸಿದ್ದಾರೆ. ಒಂದು ವೇಳೆ ತಕ್ಷಣ ಕ್ರಮ ಕೈಗೊಳ್ಳದಿದ್ದರೆ, ತಾವು ತೀವ್ರ ಹೋರಾಟಕ್ಕೆ ಇಳಿಯುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಕೃಷಿ ಹೊಂಡಗಳು ರೈತರಿಗೆ ಕೇವಲ ನೀರಾವರಿಗೆ ಮಾತ್ರವಲ್ಲ, ಕುಡಿಯುವ ನೀರಿಗೂ ಮೂಲವಾಗಿವೆ. ರಾಜ್ಯ ಸರ್ಕಾರದ ಕೃಷಿ ಭಾಗ್ಯ ಯೋಜನೆಯಡಿ ಇಂತಹ ಹೊಂಡಗಳ ನಿರ್ಮಾಣಕ್ಕೆ ಒತ್ತು ನೀಡಲಾಗುತ್ತಿದೆ. ಆದರೆ, ಇಂತಹ ಕಿಡಿಗೇಡಿ ಕೃತ್ಯಗಳು ರೈತರ ಜೀವನಾಧಾರಕ್ಕೆ ದೊಡ್ಡ ಅಪಾಯವನ್ನುಂಟುಮಾಡುತ್ತಿವೆ. ಈ ಘಟನೆಯಿಂದ ಗ್ರಾಮದಲ್ಲಿ ಭಯದ ವಾತಾವರಣ ನಿರ್ಮಾಣವಾಗಿದ್ದು, ಸ್ಥಳೀಯ ಆಡಳಿತವು ಶಾಂತಿ ಮತ್ತು ಸುರಕ್ಷತೆಯನ್ನು ಕಾಪಾಡಲು ತಕ್ಷಣ ಕ್ರಮ ಕೈಗೊಳ್ಳಬೇಕಾದ ಅಗತ್ಯವಿದೆ.

# ಶಕೀಲ್ ಕಲಾಮ್ ಪಠಾಣ ಅವರ 35ನೇ ಜನ್ಮ ದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಮಹಾರಾಷ್ಟ್ರ ರಾಜ್ಯದ ನೀಲಾಂಗ ತಾಲೂಕಿನ ಸಾಜನಿ ಔರಾದ್ ಪಟ್ಟಣದ ಶಕೀಲ್ ಕಲಾಮ್ ಪಠಾಣ ಅವರ 35ನೇ ವರ್ಷದ ಜನ್ಮ ದಿನಾಚರಣೆಯನ್ನು ಪಟ್ಟಣದ ಅವರ ನಿವಾಸದಲ್ಲಿ ಕುಟುಂಬದವರೊಂದಿಗೆ ಕೇಕ್ ಕತ್ತರಿಸುವ ಮೂಲಕ ಜನ್ಮ ದಿನ ಆಚರಿಸಿಕೊಂಡರು. ಈ ಸಂದರ್ಭದಲ್ಲಿ ಖಾದರ್ ಪಟೇಲ್, ಶೇಖ್ ನದೀಮ್, ರಾಜಕುಮಾರ ಹಡಪದ, ಮಹಮ್ಮದ್ ಅತಿಕ್ ಅವರು ಶಕೀಲ್ ಕಲಾಮ್ ಪಠಾಣ ಅವರಿಗೆ 35ನೇ ವರ್ಷದ ಹುಟ್ಟು ಹಬ್ಬದ ಶುಭಾಶಯಗಳು ತಿಳಿಸುತ್ತ, ದೇವರು ಅವರಿಗೆ ಸುಖ, ಶಾಂತಿ, ನೆಮ್ಮದಿ, ಆಯುಷ್ಯ, ಆರೋಗ್ಯ, ಭಾಗ್ಯ ನೀಡಿ ಆಶೀರ್ವದಿಸಲೆಂದು ಪ್ರಾರ್ಥಿಸಿದರು.

# ಗುರುವಿಗೆ ಭಕ್ತಿ ಸಮರ್ಪಿಸಿದ ಭಕ್ತರು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 15 : ಇಲ್ಲಿಯ ನೌಬಾದನ ಜ್ಞಾನ ಶಿವಯೋಗಾಶ್ರಮದಲ್ಲಿ ಈಚೆಗೆ ನಡೆದ ಗುರು ವಂದನೆ ಹಾಗೂ ಏಕ್ ಲಾಕ್ ಪೇಡ್ ಮಾ ಕೇ ನಾಮ್ ಅಭಿಯಾನ ಪ್ರಯುಕ್ತ ಸಸಿ ವಿತರಣೆ ಕಾರ್ಯಕ್ರಮದಲ್ಲಿ ಭಕ್ತರು ಗುರುಗಳಿಗೆ ಭಕ್ತಿ ಸಮರ್ಪಣೆ ಮಾಡಿದರು.

ಕರ್ನಾಟಕ, ತೆಲಂಗಾಣ, ಆಂಧ್ರಪ್ರದೇಶ ಹಾಗೂ ಮಹಾರಾಷ್ಟ್ರದ ಅಪಾರ ಭಕ್ತರು ಶ್ರೀಶೈಲದ ಅಕ್ಕ ಮಹಾದೇವಿ ಚೈತನ್ಯ ಪೀಠದ ಅಧಿಪತಿ ಮಾತೆ ಕರುಣಾದೇವಿ ಹಾಗೂ ಜ್ಞಾನ ಶಿವಯೋಗಾಶ್ರಮದ ಅಧಿಪತಿ ಡಾ. ರಾಜಶೇಖರ ಶಿವಾಚಾರ್ಯರಿಗೆ ಶಾಲು ಹೊದಿಸಿ, ಹೂಮಾಲೆ ಹಾಕಿ ಸತ್ಕರಿಸಿ, ಪಾದ ಪೂಜೆ ಮಾಡಿ ಗೌರವಿಸಿದರು.

ಬಿಲ್ವಪತ್ರಿ ಸಸಿಗೆ ನೀರೆರೆದು ಕಾರ್ಯಕ್ರಮ ಉದ್ಘಾಟಿಸಿದ ಕರ್ನಾಟಕ ಪಶು ವೈದ್ಯಕೀಯ ವಿಶ್ವವಿದ್ಯಾಲಯದ ಸಂಶೋಧನಾ ನಿರ್ದೇಶಕ ಪ್ರೊ. ಬಿ.ವಿ. ಶಿವಪ್ರಕಾಶ್ ಮಾತನಾಡಿ, ಮಾತೆ ಕರುಣಾದೇವಿ ಅವರು ಮಾನವ ಕಲ್ಯಾಣ ಕಾರ್ಯಗಳಲ್ಲಿ ನಿರತರಾಗಿದ್ದಾರೆ. ತಮ್ಮ ತಪೋಶಕ್ತಿಯಿಂದ ಬಹಳಷ್ಟು ಭಕ್ತರ ಸಂಕಷ್ಟಗಳನ್ನು ಪರಿಹರಿಸಿದ್ದಾರೆ ಎಂದು ಹೇಳಿದರು. ವಚನ ಸಾಹಿತ್ಯ ಹಾಗೂ ಸಂಗೀತ ಕ್ಷೇತ್ರಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಅನೇಕ ಪುಸ್ತಕ ಪ್ರಕಟಿಸಿದ್ದಾರೆ. ಅಕ್ಕಮಹಾದೇವಿ ಹಾಗೂ ಶ್ರೀಶೈಲ ಮಲ್ಲಿಕಾರ್ಜುನರ ಕುರಿತು ಧ್ವನಿ ಸುರುಳಿ ಹೊರ ತಂದಿದ್ದಾರೆ ಆಧುನಿಕ ಅಕ್ಕಮಹಾದೇವಿ ಸ್ವರೂಪ ಆಗಿದ್ದಾರೆ ಎಂದು ಬಣ್ಣಿಸಿದರು.

ಮಾತೆ ಕರುಣಾದೇವಿ ಅವರ ಹೆಸರಲ್ಲಿ 1 ಲಕ್ಷ ಸಸಿ ನೆಡುವ ಬೃಹತ್ ಅಭಿಯಾನ ಹಮ್ಮಿಕೊಂಡಿರುವುದು ಪ್ರಶಂಸನೀಯ ಎಂದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಎಂ.ಡಿ. ಅಹಮ್ಮದೊದ್ದೀನ್ ಮಾತನಾಡಿ, ಡಾ. ರಾಜಶೇಖರ ಶಿವಾಚಾರ್ಯರು ಸಾಮಾಜಿಕ ಹಾಗೂ ಧಾರ್ಮಿಕ ಕ್ಷೇತ್ರಕ್ಕೆ ಬಹು ಅಮೂಲ್ಯ ಕೊಡುಗೆ ನೀಡಿದ್ದಾರೆ. ಜನರಿಗೆ ಭಕ್ತಿ ಮಾರ್ಗ ತೋರುತ್ತಿದ್ದಾರೆ. ಭಕ್ತರ ಉದ್ಧಾರ ಹಾಗೂ ಧರ್ಮ ರಕ್ಷಣೆಗೆ ತಮ್ಮ ಬದುಕು ಸಮರ್ಪಿಸಿಕೊಂಡಿದ್ದಾರೆ ಎಂದು ಬಣ್ಣಿಸಿದರು. ಪುಣ್ಯವಂತರಿಗೆ ಮಾತ್ರ ಗುರುವಿನ ದರ್ಶನ ಭಾಗ್ಯ ಸಿಗುತ್ತದೆ. ಗುರು ಕರುಣೆಗೆ ಪಾತ್ರರಾದವರು ಧನ್ಯರು ಎಂದು ತಿಳಿಸಿದರು. ಕೇಂದ್ರ ಸರ್ಕಾರದ ರಾಜ್ಯ ಅಭಿವೃದ್ಧಿ ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿ ಸದಸ್ಯ ಶಿವಯ್ಯ ಸ್ವಾಮಿ ಮಾತನಾಡಿ, ಗುರುವಿನ ಸ್ಥಾನ ಬಹಳ ದೊಡ್ಡದು. ಹೀಗಾಗಿ ದೀಕ್ಷೆ ಗುರು ಹಾಗೂ ಮನೆ ಗುರುಗಳನ್ನು ಗೌರವಿಸುವ ಸಂಪ್ರದಾಯ ವೀರಶೈವ ಪರಂಪರೆಯಲ್ಲಿ ನಡೆದುಕೊಂಡು ಬಂದಿದೆ ಎಂದು ಹೇಳಿದರು. ಭಕ್ತರ ಕಲ್ಯಾಣಕ್ಕಾಗಿ ಬದುಕು ಸವೆಸುವ ಗುರುವನ್ನು ಗೌರವಿಸುವುದು ಹಾಗೂ ಅವರಿಗೆ ಕೃತಜ್ಞತೆ ಸಲ್ಲಿಸುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯ. ಹೀಗಾಗಿ ಮಾತೆ ಕರುಣಾದೇವಿ ಹಾಗೂ ಡಾ. ರಾಜಶೇಖರ ಶಿವಾಚಾರ್ಯರಿಗೆ ಗೌರವ ಸಲ್ಲಿಸಲಾಗುತ್ತಿದೆ ಎಂದು ತಿಳಿಸಿದರು. ನಾಗೇಶ್ವರಿ ಪಂಚಾಚಾರ್ಯ ಪರಂಪರೆ ಕುರಿತು ಮಾತನಾಡಿದರು. ಗಂಗಾಧರ ಸ್ವಾಮೀಜಿ ವೇದ ಘೋಷ ನಡೆಸಿಕೊಟ್ಟರು. ನಮ್ರತಾ ಹನುಮಾನ ಚಾಲಿಸಾ ಪಠಿಸಿದರು. ಸಂಜುಕುಮಾರ ಸ್ವಾಮಿ ಉಜನಿ ಹಾಗೂ ಸಾಯಿನಾಥ ತಂಡದವರು ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ಜಿಲ್ಲಾ ವಕೀಲರ ಸಂಘದ ನೂತನ ಅಧ್ಯಕ್ಷ ಷಣ್ಮುಕಯ್ಯ ಸ್ವಾಮಿ ಮರಕುಂದಾ ಅವರನ್ನು ಸನ್ಮಾನಿಸಲಾಯಿತು.

ಸಾರ್ವಜನಿಕರಿಗೆ ಬಿಲ್ವಪತ್ರಿ ಸೇರಿದಂತೆ ವಿವಿಧ ಬಗೆಯ ಸಸಿಗಳನ್ನು ವಿತರಿಸಲಾಯಿತು.

ನಗರಸಭೆ ಸದಸ್ಯೆ ಮಹಾದೇವಿ ಹುಮನಾಬಾದೆ, ಶಿವಕುಮಾರ ಪಾಟೀಲ ಬೆಳಕೇರಾ, ರಮೇಶ ಮಾಶೆಟ್ಟಿ, ಬಸವರಾಜ ಮರೆನಪುರೆ, ಉದ್ಯಮಿ ಬಿ.ವೈ. ಬಿರಾದಾರ, ಪರಿಸರವಾದಿ ಶೈಲೇಂದ್ರ ಕಾವಡಿ, ಡಾ. ಸಂಜಯ ದೇಶಮುಖ, ಸುಭಾಷ್ ಪಾಟೀಲ, ಡಾ. ಓಂಕಾರ ಸ್ವಾಮಿ, ಸುನೀತಾ ಭಂಗೂರೆ, ಕಾಶಿನಾಥಪ್ಪ ಶಂಭು, ಪ್ರಮುಖರಾದ ವರದಯ್ಯ ಸ್ವಾಮಿ, ಮಹೇಶ ಪಾಟೀಲ, ನಾಗರಾಜ ಮಠ, ಶಿವಶಂಕರ ಬೆಳಮಗಿ, ಮಹಾಂತೇಶ ಬಿರಾದಾರ, ಭಕ್ತಿ ದಾಸೋಹಿ ಬಸವರಾಜ ಭಂಗೂರೆ, ಕಂಟೆಪ್ಪ ಭಂಗೂರೆ, ಕಾವೇರಿ ಸ್ವಾಮಿ, ಚಾಮುಂಡೇಶ್ವರಿ ಸ್ವಾಮಿ, ಸಂಗಮೇಶ ಹುಮನಾಬಾದೆ, ಮಹಾಂತೇಶ ಡೊಂಗರಗಿ, ಕುಪೇಂದ್ರಪ್ಪ ಚಿತ್ರದುರ್ಗ, ರಮೇಶ ಅರಳಿ, ಮಲ್ಲಪ್ಪ ಬಿರಾದಾರ, ಚಂದ್ರಕಾಂತ ಬಿರಾದಾರ, ಶಂಕರೆಪ್ಪ ಬೋರಾಳೆ, ಉಮಾದೇವಿ ಹಾಲಹಳ್ಳಿ, ವಿದ್ಯಾವತಿ ಬಿರಾದಾರ, ಮಹಾದೇವಿ ಸ್ವಾಮಿ ಮತ್ತಿತರರು ಉಪಸ್ಥಿತರಿದ್ದರು. ಮಹಾದೇವಪ್ಪ ಭಂಗೂರೆ ಸ್ವಾಗತಿಸಿದರು. ಬಸವರಾಜ ಹಳ್ಳಿ ನಿರೂಪಿಸಿದರು. ಪ್ರಶಾಂತ ತರನಳ್ಳಿ ವಂದಿಸಿದರು.

# ದೆಹಲಿಯಲ್ಲಿ ರಾಷ್ಟ್ರಪತಿ, ಪ್ರಧಾನಿ ಭೇಟಿಗೆ ಸಮಯ ಕೋರಿದ ಜಾನಸನ್ ಘೋಡೆ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.15: ಜಿಲ್ಲೆಯವರೇ ಆದ ಕಾಂಗ್ರೆಸ್ ಕಾರ್ಮಿಕ ವಿಭಾಗದ ರಾಜ್ಯ ಕಾರ್ಯದರ್ಶಿ ಜಾನಸನ್ ಘೋಡೆ ಜನ ಹಿತದ ವಿಷಯಗಳ ಚರ್ಚೆಗೆ ರಾಷ್ಟ್ರಪತಿ ಹಾಗೂ ಪ್ರಧಾನಿ ಭೇಟಿಗೆ ಸಮಯ ಕೋರಿದ್ದಾರೆ.

ಈ ಕುರಿತು ಅವರು ರಾಷ್ಟ್ರಪತಿ ಹಾಗೂ ಪ್ರಧಾನಮಂತ್ರಿ ಅವರಿಗೆ ಪ್ರತ್ಯೇಕ ಮನವಿ ಪತ್ರ ಸಲ್ಲಿಸಿದ್ದಾರೆ.

ಕರ್ನಾಟಕ ರಾಜ್ಯ ಹಾಗೂ ಬೀದರ್ ಜಿಲ್ಲೆಯ ಕೆಲ ಪ್ರಮುಖ ವಿಷಯಗಳನ್ನು ಮುಕ್ತವಾಗಿ ಹಂಚಿಕೊಳ್ಳಲು ಸಮಯ ಕೊಡಬೇಕು ಎಂದು ಮನವಿ ಮಾಡಿದ್ದಾರೆ.

# ವೈಜ್ಞಾನಿಕ ಪಶುಪಾಲನೆಯಿಂದ ಆರ್ಥಿಕ ಅಭಿವೃದ್ಧಿ, ಸುಸ್ಥಿರತೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.15 : ಜಿಲ್ಲೆಯ ರೈತರು ಕೃಷಿಯ ಜೊತೆಯಲ್ಲಿ ವೈಜ್ಞಾನಿಕ ಪಶುಪಾಲನೆಯಂತಹ ಉಪಕಸುಬುಗಳನ್ನು ಕೈಗೆತ್ತಿ–ಕೊಂಡರೆ ಆರ್ಥಿಕವಾಗಿ ಸಬಲರಾಗುತ್ತಾರೆ ಎಂದು ಕರ್ನಾಟಕ ಪಶುವೈದ್ಯಕೀಯ, ಪಶು ಹಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಕೆ.ಸಿ.ವೀರಣ್ಣ ತಿಳಿಸಿದರು.

ಅವರು ಮಂಗಳವಾರ ಜಾನುವಾರು ಸಂಶೋಧನೆ ಮತ್ತು ಮಾಹಿತಿ ಕೇಂದ್ರ (ದೇವಣಿ) ಕಟ್ಟಿತುಗಾಂವ ಬೀದರ ಹಾಗೂ ಪಶುವೈದ್ಯಕೀಯ ಮಹಾವಿದ್ಯಾಲಯ ಬೀದರ ಸಹಯೋಗದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತ ಬಾಂಧವರಿಗಾಗಿ/ಪಶುಪಾಲಕರಿಗಾಗಿ ಪಶುವೈದ್ಯಕೀಯ ಮಹಾವಿದ್ಯಾಲಯ ಬೀದರನಲ್ಲಿ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಬೆಂಗಳೂರು ಪ್ರಾಯೋಜಿಸಿರುವ ವೈಜ್ಞಾನಿಕ ಪಶುಪಾಲನೆಯಿಂದ ಆರ್ಥಿಕ ಅಭಿವೃದ್ಧಿ ಮತ್ತು ಸುಸ್ಥಿರತೆ ಕುರಿತು ಜುಲೈ. 15 ರಿಂದ 18 ರವರೆಗೆ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಕರ್ನಾಟಕ ರಾಜ್ಯವು ಪಶುಪಾಲನೆಗೆ ತುಂಬಾ ಪೂರಕವಾದ್ದರಿಂದ ರೈತರು ಇವುಗಳಲ್ಲಿ ತೊಡಗಿ ಹೆಚ್ಚಿನ ಆದಾಯ ಪಡೆಯಬೇಕು. ಅಷ್ಟೇ ಅಲ್ಲದೇ, ಲಭ್ಯವಿರುವ ವಿವಿಧ ತಜ್ಞರ ಸಲಹೆ ಪಡೆದು ವೈಜ್ಞಾನಿಕವಾಗಿ ಪಶುಪಾಲನೆಯನ್ನು ಕೈಗೊಳ್ಳಿರಿ ಮತ್ತು ಮೌಲ್ಯವರ್ಧನೆಯಿಂದ ಹೆಚ್ಚಿನ ಲಾಭ ಪಡೆಯಿರಿ ಎಂದು ರೈತರಿಗೆ ಸಲಹೆ ನೀಡಿದರು.

ಬೀದರ ಪಶುಸಂಗೋಪನೆ ಹಾಗೂ ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರಾದ ಡಾ. ನರಸಪ್ಪ. ಖ. ಮಾತನಾಡಿ, ರೈತರು ಆತ್ಮವಿಶ್ವಾಸ ಹಾಗೂ ಸಹನೆಯಿಂದ ಪಶುಪಾಲನೆಯಲ್ಲಿ ತೊಡಗಿಸಿಕೊಂಡರೆ ಆರ್ಥಿಕ ಅಭಿವೃದ್ಧಿ ಮತ್ತು ಸುಸ್ಥಿರತೆ ಖಂಡಿತ ಸಾಧ್ಯ. ಆದ್ದ–ರಿಂದ ರೈತರು ಇಂತಹ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು.

ತರಬೇತಿ ಕಾರ್ಯಕ್ರಮವನ್ನು ಡಾ. ಪ್ರಕಾಶಕುಮಾರ ರಾಠೋಡ, ಸಹ ಪ್ರಾಧ್ಯಾಪಕರು, ಡಾ. ವಿದ್ಯಾಸಾಗರ, ಸಹಾಯಕ ಪ್ರಾಧ್ಯಾಪಕರು ಹಾಗೂ ಡಾ. ಕೊಟ್ರೇಶ ಪ್ರಸಾದ, ಸಹಾಯಕ ಪ್ರಾಧ್ಯಾಪಕರು ರವರು ಆಯೋಜಿಸುತ್ತಿದ್ದಾರೆ. ಕಾರ್ಯಕ್ರಮದಲ್ಲಿ ಉಪಸ್ಥಿತರಿರುವ ಮಹಾವಿದ್ಯಾಲಯದ ವಿಷಯ ತಜ್ಞರು ರೈತರಿಗೆ ಹೈನುರಾಸುಗಳ ಆಯ್ಕೆ, ಕಡಿಮೆ ಖರ್ಚಿನಲ್ಲಿ ಹಸಿ ಮೇವು ಹಾಗೂ ಪಶು ಆಹಾರ ತಯಾರಿಸುವುದು, ಜಾನುವಾರುಗಳ ಆರೋಗ್ಯ ರಕ್ಷಣೆ, ಪ್ರಸೂತಿ ಹಾಗೂ ಸಂತಾನೋತ್ಪತ್ತಿಯ ಸಮಸ್ಯೆಗಳು, ಬೇಸಿಗೆಯಲ್ಲಿ ಜಾನುವಾರುಗಳ ನಿರ್ವಹಣೆ, ಹಾಲಿನ ವಿವಿಧ ಉತ್ಪನ್ನಗಳು ಹಾಗೂ ಮಾರುಕಟ್ಟೆಯಂತಹ ವಿವಿಧ ವಿಷಯಗಳ ಬಗ್ಗೆ ಮಾಹಿತಿ ನೀಡಲಿದ್ದಾರೆ. ತರಬೇತಿ ಕಾರ್ಯಕ್ರಮದಲ್ಲಿ ಒಟ್ಟು 35 ರೈತರು, ಪಶುಪಾಲಕರು ಪ್ರಯೋಜನ ಪಡೆಯುತ್ತಿದ್ದಾರೆ.

ಈ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ ಪ್ರೋಜೆಕ್ಟ್ ಇಂಜಿನಿಯರ್ ಗಂಗಾಧರಪ್ಪ ಆರ್. ವಿಶ್ವವಿದ್ಯಾಲಯದ ಸಂಶೋಧನಾ ನಿರ್ದೇಶಕರಾದ ಡಾ. ಬಿ.ವಿ.ಶಿವಪ್ರಕಾಶ, ವಿಸ್ತರಣಾ ನಿರ್ದೇಶಕರಾದ ಡಾ. ಬಸವರಾಜ ಅವಟಿ, ಮಹಾವಿದ್ಯಾಲಯದ ಪ್ರಭಾರಿ ಡೀನ್‌ರಾದ ಡಾ. ಆರ್. ಜಿ. ಬಿಜುರಕರ್, ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಸತಿ ನಿಲಯಗಳ ಮಕ್ಕಳಲ್ಲಿ ಮಾನಸಿಕ ಸ್ಥೈರ್ಯ ಹೆಚ್ಚಿಸಲು

## ಮನೋವೈದ್ಯರ ಮೂಲಕ ಪ್ರತಿ ವಾರ ಸಮಾಲೋಚನೆ ನಡೆಸಿ:ಸಿಇಒ ಡಾ.ಗಿರೀಶ್ ಬದೋಲೆ



ಬೀದರ. ಜು.15 : ಔರಾದ್ ಪಟ್ಟಣದ ಬಾಲಕಿಯರ ವಸತಿ ನಿಲಯದಲ್ಲಿ ಪದವಿ ವಿದ್ಯಾರ್ಥಿನಿಯೊಬ್ಬಳು ಆತ್ಮಹತ್ಯೆ ಘಟನೆ ಹಿನ್ನಲೆ ಜಿಲ್ಲೆಯ ವಸತಿ ನಿಲಯಗಳ ಮಕ್ಕಳಲ್ಲಿ ಮಾನಸಿಕ ಸ್ಥೈರ್ಯ ಹೆಚ್ಚಿಸುವ ದಿಸೆಯಲ್ಲಿ ಅವರೊಂದಿಗೆ ಮನೋವೈದ್ಯರ ಮೂಲಕ ಪ್ರತಿ ವಾರ ಸಮಾಲೋಚನೆ ನಡೆಸಲು ಕ್ರಮವಹಿಸುವಂತೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಗಿರೀಶ್ ಬದೋಲೆ ಅಧಿಕಾರಿಗೆ ನಿರ್ದೇಶನ ನೀಡಿದರು.

ಅವರು ಮಂಗಳವಾರ ಜಿಲ್ಲಾ ಪಂಚಾಯತ ಕಚೇರಿಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಧ್ಯಾನೇಶ್ವರ ನಿರಗುಡೆ ಮತ್ತು ಆರೋಗ್ಯ ಕಾರ್ಯಕ್ರಮ ಅಧಿಕಾರಿ ಡಾ. ಕಿರಣ ಪಾಟೀಲ ಸೇರಿದಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಜತೆಗೆ ತುರ್ತು ಸಭೆ ನಡೆಸಿ, ಅಗತ್ಯ ಸಲಹೆಗಳನ್ನು ನೀಡಿದ್ದಾರೆ.

ಜಿಲ್ಲೆಯ ಸಿಎಚ್‌ಸಿ ಮತ್ತು ಪಿಎಚ್‌ಸಿ ಕೇಂದ್ರಗಳಲ್ಲಿನ ವೈದ್ಯಾಧಿಕಾರಿಗಳು ಪ್ರತಿ ವಾರಕ್ಕೊಮ್ಮೆ ತಮ್ಮ ವ್ಯಾಪ್ತಿಯ ವಸತಿ ನಿಲಯಗಳಿಗೆ ಭೇಟಿ ನೀಡಬೇಕು. ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಬೇಕು. ಅವರ ಚಲನವಲನಗಳಲ್ಲಿ ವ್ಯತ್ಯಾಸ, ಖಿನ್ನತೆಯಂತ ವಿಷಯಗಳು ಕಂಡುಬಂದಲ್ಲಿ ವೈದ್ಯರು ಹಾಗೂ ವಾರ್ಡನ್‌ಗಳು, ತಮ್ಮ ಇಲಾಖೆಯ ಮುಖ್ಯಸ್ಥರಿಗೆ ಮಾಹಿತಿ ನೀಡಬೇಕು. ಆ ಮೂಲಕ ಮಕ್ಕಳ ಆರೋಗ್ಯದ ಸ್ಥಿರತೆ ಕಾಪಾಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಧ್ಯಾನೇಶ್ವರ ನಿರಗುಡೆ ಅವರಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳು ಮತ್ತು ವಾರ್ಡನ್‌ಗಳ ಮಾಹಿತಿಯನ್ನು ಅಧಿಕಾರಿಗಳು ಒಂದೆರಡು ದಿನದಲ್ಲಿ ನೀಡಬೇಕು. ಹಾಸ್ಟೆಲ್‌ಗಳಿಗೆ ಆಯಾ ವ್ಯಾಪ್ತಿಯ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳಿಗೆ ಜವಾಬ್ದಾರಿ ವಹಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮನೋವೈದ್ಯರಾದ ಡಾ. ಅಮಲ್ ಮತ್ತು ಡಾ. ರಾಘವೇಂದ್ರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹದಗೆಟ್ಟ ಕಾನೂನು ವ್ಯವಸ್ಥೆ:ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಆಗ್ರಹ




ಕಲಬುರಗಿ:ಜು.15: ಜಿಲ್ಲೆಯಲ್ಲಿ ಕಾನೂನು ವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದ್ದು ಜಿಲ್ಲೆಯಲ್ಲಿ ಭಯಾನಕ ವಾತಾವರಣ ನಿರ್ಮಾಣವಾಗುತ್ತಿದೆ, ಹಾಡು ಹಗಲೆ ದರೋಡೆಗಳಾಗುತ್ತಿವೆ, ಜೂಜು ಮಟಕಾ ಅಡ್ಡೆಗಳು ರಾಜಾರೋಷವಾಗಿ ನಡೆಯುತ್ತಿವೆ ಎಂದು ಭಾರತೀಯ ಜನತಾ ಪಾರ್ಟಿ ರಾಜ್ಯ ಹಿಂದುಳಿದ ವರ್ಗಗಳ ಮೋರ್ಚಾದ ರಾಜ್ಯ ಪ್ರಧಾನ ಕಾರ್ಯದರ್ಶಿ ಅವ್ವಣ್ಣಾ ಮ್ಯಾಕೇರಿ ಅವರು ತಿಳಿಸಿದ್ದಾರೆ.

ಇಂದು ನಗರದಲ್ಲಿ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು ಜಿಲ್ಲೆಯ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಸಚಿವರ ಕೈಗೊಂಬೆಯಾಗಿ ನಡೆದುಕೊಳ್ಳುತ್ತಿದ್ದಾರೆ, ಅವರು ಜಿಲ್ಲೆಯ ಗ್ರೇಸ್ ಮಾರ್ಕ್ಸ್ ಸಚಿವರಾಗಿದ್ದಾರೆ, ಅವರಿಂದ ಜಿಲ್ಲೆಯಲ್ಲಿ ಯಾವುದೇ ಕೆಲಸ ಮಾಡಲು ವಿಫಲರಾಗಿದ್ದಾರೆ, ಅಪರಾಧ ಪ್ರಕರಣಗಳಲ್ಲಿ ಅವರ ಆಪ್ತರು ಇರುವುದು ಕಂಡು ಬಂದಿದೆ, ಈಗ ಅವುಗಳು ಹೊರಗಡೆ ಬರುತ್ತಿವೆ, ಆದ್ದ–ರಿಂದ ಸಚಿವರಾದ ಪ್ರಿಯಾಂಕ್ ಖರ್ಗೆ ಅವರ ರಾಜಿನಾಮೆ ತೆಗೆದುಕೊಳ್ಳಬೇಕು ಎಂದರು.

ಲಿಂಗರಾಜ್ ಕಣ್ಣಿ ಅಲ್ಲಮಪ್ರಭು ಅವರ ಪರಮಾಪ್ತ ಜಿಲ್ಲಾ ಉಸ್ತುವಾರಿ ಸಚಿವರ ಆಪ್ತ ಆಗಿರುವ ಅವರು ಮಾದಕ ದ್ರವ್ಯ ಸಾಗಾಟದಲ್ಲಿ ತೊಡಗಿರುವುದು ಕಂಡು ಬಂದಿದ್ದು, ಅವರನ್ನ ಪೊಲೀಸರು ಬಂಧಿಸಿದ್ದಾರೆ, ಅವರಿಂದ ಜಿಲ್ಲೆಯಲ್ಲಿ ಅನೇಕ ಯುವಕರು ಡ್ರಗ್ಸ್ ಅಡಿಕ್ಟ್ ಆಗಿದ್ದಾರೆ ಎಂಬುದು ಶೋಚನೀಯ, ಜಿಲ್ಲೆಯಲ್ಲಿ ಏನು ನಡಿತಿದೆ ಎಂದು ತಿಳಿದುಕೊಳ್ಳದ ನಿಮಗೆ ನಾಚಿಕೆಯಾಗಬೇಕು ಎಂದು ಕಿಡಿಕಾರಿದರು. ಈ ಪ್ರಕರಣವನ್ನ ಸಿಬಿಐ ತನಿಖೆಗೆ ಒಪ್ಪಿಸಬೇಕು ಎಂದು ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಓಬಿಸಿ ಮೋರ್ಚಾದ ರಾಜ್ಯ ಕಾರ್ಯದರ್ಶಿ ಈರಣ್ಣಾ ಹಡಪದ, ರವೀಂದ್ರ ದೇಸಾಯಿ ಕಲ್ಲೂರ, ಸಾಯಬಣ್ಣ ಜಾಲಗಾರ, ಜಯಸಿಂಗ್ ಠಾ–ಕೂರ್ ಅವರು ಹಾಜರಿದ್ದರು.

# ಗುರುವಿನ ಪಾತ್ರ ಅತಿ ಮಹತ್ವದ್ದು: ಭಾವುರಾವ ಹೇಡೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜು.15: ಸಮಾಜದಲ್ಲಿ ಆದಿ ಅನಾದಿ ಕಾಲದಿಂದ ಗುರುವಿನ ಸ್ಥಾನ ಅತಿ ಮಹತ್ವದ್ದು ಎಂದು ಹಿರಿಯ ಪತ್ರಕರ್ತ ಭಾವುರಾವ ಹೇಡೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ತಾಲೂಕಿನ ಡೋಣಗಾಂವ ಗ್ರಾಮದ ಹಾವಗಿಸ್ವಾಮಿ ಪ್ರೌಢಶಾಲೆಯಲ್ಲಿ ಇತೀಚಿಗೆ ಆಯೋಜಿಸಿದ್ದ ಗುರು ಪೊರ್ಣಿಮಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿ, ಆದಿ ಅನಾದಿಕಾಲದಿಂದ ಗುರುವಿನ ಸ್ಥಾನ ಅತಿ ಪವಿತ್ರವಾಗಿದೆ. ಆದರಿಂದ ಗುರುವಿನ ಮಾರ್ಗದರ್ಶನ ಪಡೆದು ಉನ್ನತ ಹುದ್ದೆಗಳನ್ನು ಅಲಂಕರಿಸಬೇಕು ಎಂದು ಹೇಳಿದರು. ಹಾವಗಿಸ್ವಾಮಿ ಮಠದ ಉಮಾಕಾಂತ ಸ್ವಾಮಿಜಿ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿ, ಇತೀಚಿನ ದಿನಗಳಲ್ಲಿ ಯುವಕರು ಮತ್ತು ವಿದ್ಯಾರ್ಥಿಗಳು ಅತಿಯಾದ ಮೊಬೈಲ ಬಳಕೆಯಿಂದ ಸಾವಿರಾರು ವಿದ್ಯಾರ್ಥಿಗಳು ದೃಷ್ಟಿದೋಷ ಕುರಿತು ಮಾಹಿತಿ ಬಂದಿದೆ. ಆದರಿಂದ ಶಾಲಾ–ಕಾಲೇಜು ವಿದ್ಯಾರ್ಥಿಗಳು ಮೊಬೈಲ ನಿಂದ ಆದಷ್ಟು ದೂರವಿಟ್ಟು 10 ತರಗತಿಯಲ್ಲಿ ಪ್ರಥಮ ಶ್ರೇಣಿಯಲ್ಲಿ ಉರ್ಣಿರಾಗಿ ಹೆತ್ತ ತಾಯಿ ತಂದೆವರಿಗೂ ಮತ್ತು ಅಕ್ಷರ ಜ್ಞಾನ ಕೊಟ್ಟಿರುವ ಶಿಕ್ಷಕರಿಗೆ ಕಿರ್ತೀ ಹೆಚ್ಚಿಸಬೇಕು ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ಎಚ್. ಎಂ. ಮಾರುತಿ ಪಾಂಚಾಳ ವಹಿಸಿ ಮಾತನಾಡಿದರು.. ಹಿರಿಯ ಶಿಕ್ಷಕಿ ತೆಜೆಮ್ಮ ಬೆಲೊರೆ, ಶಿಕ್ಷಕ ಸಂಗಮೇಶ ಹೊಂಡಾಳೆ, ಶಿವಕಾಂತ ಬಿರಾದಾರ, ಗುಪ್ಪು ಪಾಟೇಲ, ಹೀನಾ, ಕಲಾವತಿ, ತಬ್ಬಸೂನ, ಮಂಗಲಾ ಮತ್ತು ವಿದ್ಯಾರ್ಥಿಗಳು ಇದ್ದರು. ಶಿಕ್ಷಕ ಗುಣವಂತ ರಾಠೋಡ ಸ್ವಾಗತಿಸಿ, ನಿರೂಪಿಸಿದರು.

## ಜುಲೈ 19 ರಂದು ವಾಕ್ ಇನ್ ಇಂಟರ್‌ವ್ಯೂವ್

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಕೊಪ್ಪಳದಲ್ಲಿ ಜುಲೈ 19 ರಂದು ವಾಕ್ ಇನ್ ಇಂಟರ್‌ವ್ಯೂವ್ ಅನ್ನು ಆಯೋಜಿಸಲಾಗಿದ್ದು, ಖಾಸಗಿ ಸಂಸ್ಥೆಗಳು ಖಾಲಿ ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಯಾವುದೇ ಶುಲ್ಕ ಇರುವುದಿಲ್ಲ ಎಲ್ಲರಿಗೂ ಉಚಿತ ಪ್ರವೇಶವಿರುತ್ತದೆ.

ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ ಹಾಗೂ ಯಾವುದೇ ಪದವಿ ಅಭ್ಯರ್ಥಿಗಳಿಗೆ ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಾಗುತ್ತದೆ. 18 ರಿಂದ 30 ವರ್ಷದೊಳಗಿನ ಅರ್ಹ ವಿದ್ಯಾರ್ಹತೆ ಹೊಂದಿದ ನಿರುದ್ಯೋಗಿ ಯುವಕ ಮತ್ತು ಯುವತಿಯರು ದೃಢೀಕರಿಸಲಾದ ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳು ಮತ್ತು ಆಧಾರ್ ಕಾರ್ಡಿನ ಪ್ರತಿ, ಬಯೋಡಾಟಾ ಹಾಗೂ ಪಾಸ್‌ಪೋರ್ಟ್ ಅಳತೆಯ 2 ಭಾವಚಿತ್ರಗಳೊಂದಿಗೆ ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಪತ್ರಿಕೆಗೆ ತಿಳಿಸಿದ್ದಾರೆ.

## "ಗೃಹ ಆರೋಗ್ಯ ಯೋಜನೆ" ಆಶಾ ಕೈಪಿಡಿ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜುಲೈ 15– ಜಿಲ್ಲೆಯಾದ್ಯಂತ ಅಸಾಂಕ್ರಾಮಿಕ ರೋಗಗಳ ಆರೋಗ್ಯ ತಪಾಸಣೆ ಮತ್ತು ನಿರ್ವಹಣೆಯನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ಯೋಜನೆಯಾಗಿದೆ.. ಈ ಯೋಜನೆಯನ್ನು ಸನ್ಮಾನ್ಯ ಮುಖ್ಯ ಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ಅವರು 2024ರ ಅಕ್ಟೋಬರ್ 24 ರಂದು ಬೆಂಗಳೂರಿನ ವಿಧಾನಸೌಧದಲ್ಲಿ ಉದ್ಘಾಟನೆಗೊಳಿಸಿದ್ದಾರೆ ಎಂದು ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಹೇಳಿದರು.

ಯಾದಗಿರಿ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜು.15ರ ಮಂಗಳವಾರ ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲೆಯಾದ್ಯಂತ "ಗೃಹ ಆರೋಗ್ಯ ಯೋಜನೆ"ಯ ವಿಸ್ತರಣೆಯನ್ನು ಹೆಮ್ಮೆಯಿಂದ ಘೋಷಿಸಲಾಗುತ್ತಿದ್ದು, ಯಾದಗಿರಿ ಜಿಲ್ಲೆಯಲ್ಲಿ ಗೃಹ ಆರೋಗ್ಯ ಕಾರ್ಯಕ್ರಮದ ಅನಾವರಣ ಉದ್ಘಾಟಿಸಿ ಹಾಗೂ ಆಶಾ ಕೈಪಿಡಿ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

30 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ವ್ಯಕ್ತಿಗಳಲ್ಲಿ 14 ಅಸಾಂಕ್ರಾಮಿಕ ರೋಗಗಳ ಆರೋಗ್ಯ ತಪಾಸಣೆ ಮತ್ತು ನಿರ್ವಹಣೆಯನ್ನು ನಡೆಸಲಾಗುವುದು. ಅಸಂಕ್ರಾಮಿಕ ರೋಗವನ್ನು ತಡೆಗಟ್ಟುವ ಮತ್ತು ಚಿಕಿತ್ಸೆಯ ನಿಟ್ಟಿನಲ್ಲಿ ಜಿಲ್ಲೆಯಲ್ಲಿ 06 ಪ್ರತ್ಯೇಕ ಎನ್.ಸಿ.ಡಿ. ಕ್ಲಿನಿಕ್ ಹಾಗೂ ಜಿಲ್ಲಾ ಆಸ್ಪತ್ರೆಯಲ್ಲಿ ಪ್ರತ್ಯೇಕ 20 ಹಾಸಿಗೆಯ ಒಳರೋಗಿ ವಿಭಾಗ ಕಾರ್ಯರೂಪದಲ್ಲಿ ಇರುತ್ತವೆ, ಉಚಿತ ಆರೋಗ್ಯ ತಪಾಸಣೆ 30 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ವ್ಯಕ್ತಿಗಳಿಗೆ ಈ ಕೆಳಗಿನ 14 ಅಸಾಂಕ್ರಾಮಿಕ ರೋಗಗಳಾದ ಮಧುಮೇಹ, ಅಧಿಕ ರಕ್ತದೊತ್ತಡ, ಬಾಯಿ ಕ್ಯಾನ್ಸರ್, ಸ್ತನ ಕ್ಯಾನ್ಸರ್, ಗರ್ಭಕಂಠದ ಕ್ಯಾನ್ಸರ್, ಡಯಾಬೆಟಿಕ್ ಫೂಟ್ ಮತ್ತು ರೆಟಿನೋಪತಿ, ಮಾನಸಿಕ ಆರೋಗ್ಯ ಅಸ್ವಸ್ಥತೆಗಳು, ನರವೈಜ್ಞಾನಿಕ ಅಸ್ವಸ್ಥತೆಗಳು, ನಿದ್ರೆಯಲ್ಲಿ ಉಸಿರುಗಟ್ಟುವಿಕೆ, ದೀರ್ಘಕಾಲದ ಮೂತ್ರಪಿಂಡದ ಕಾಯಿಲೆ, ದೀರ್ಘಕಾಲದ ಪ್ರತಿ–ರೋಧಕ ಶ್ವಾಸಕೋಶದ ಕಾಯಿಲೆ ಆಲ್ಕೋಹಾಲ್ ರಹಿತ ಕೊಬ್ಬಿನ ಪಿತ್ತಜನಕಾಂಗದ ಕಾಯಿಲೆ ಮತ್ತು ರಕ್ತಹೀನತೆಯ (19 ರಿಂದ 29 ವರ್ಷ ಒಳಗಿರನವರಿಗೆ) ಆರೋಗ್ಯ ತಪಾಸಣೆಯನ್ನು ಆಯುಷ್ಮಾನ್ ಆರೋಗ್ಯ ಮಂದಿರಗಳಲ್ಲಿ (೦೦ಬ) ಉಚಿತವಾಗಿ ನಡೆಸಲಾಗುವುದು ಎಂದು ಹೇಳಿದರು.

ಗೃಹ ಆರೋಗ್ಯ ಯೋಜನೆಯ ಉದ್ದೇಶಗಳು ಅಸಾಂಕ್ರಾಮಿಕ ರೋಗಗಳನ್ನು ಆರಂಭಿಕ ಹಂತದಲ್ಲಿ ಪತ್ತೆ ಹಚ್ಚಿ ಮತ್ತು ಜಾಗೃತಿ ಹೆಚ್ಚಿಸುವುದು. ಸಕಾಲದಲ್ಲಿ ಆರೋಗ್ಯ ತಪಾಸಣೆ ಮತ್ತು ನಿರ್ವಹಣೆಗಾಗಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು. ವಿಕೇಂದ್ರೀಕೃತ ಆರೋಗ್ಯ ಸೇವೆಗಳ ಮೂಲಕ ನಿರಂತರ ಆರೈಕೆಯನ್ನು ಖಚಿತಪಡಿಸುವುದು ಎಂದರು.

ಕಾರ್ಯಕ್ರಮದ ಘೋಷಣೆ ಮನೆ ಬಳಿಗೆ ಆರೋಗ್ಯ ಸೇವೆಗಳು ಅಸಾಂಕ್ರಾಮಿಕ ರೋಗಗಳ ಆರೋಗ್ಯ ತಪಾಸಣೆ ಮತ್ತು ನಿರ್ವಹಣೆಯನ್ನು ಕೈಗೆಟುಕುವಿಕೆ ಮತ್ತು ಆರಂಭಿಕ ಹಂತದಲ್ಲಿ ಪತ್ತೆ ಹಚ್ಚಿ ಮತ್ತು ಜಾಗೃತಿಯನ್ನು ವಹಿಸುವುದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಾರ್ವತ್ರಿಕ ಆರೋಗ್ಯ ರಕ್ಷಣೆಯನ್ನು ಸಾಧಿಸಲು ಮತ್ತು ಯಾವುದೇ ನಾಗರಿಕರು ತಡೆಗಟ್ಟುವ ಮತ್ತು ಗುಣಪಡಿಸುವ ಆರೋಗ್ಯ ಸೇವೆಗಳನ್ನು ಪ್ರವೇಶಿಸುವುದರಿಂದ ವಂಚಿತರಾಗುವುದಿಲ್ಲ ಎಂದು ಖಚಿತಪಡಿಸಿಕೊಳ್ಳಲು ಬದ್ಧವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರಾಯಚೂರು ಲೋಕಸಭಾ ಮತಕ್ಷೇತ್ರ ಸದಸ್ಯರು ಶ್ರೀ ಜಿ.ಕುಮಾರ ನಾಯಕ, ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ, ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ, ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ವೇಣುಗೋಪಾಲ ನಾಯಕ, ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಬೋಯರ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಹೇಶ ಬಿರದಾರ ಉಪಸ್ಥಿತರಿದ್ದರು.

## ಸಿಎಂ ಮಾಧ್ಯಮ ಸಲಹೆಗಾರ ಅವರಿಗೆ ಸಂಕೀನ್ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಅವರಿಗೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಮಲ್ಲಪ್ಪ ಸಂಕೀನ್ ಅವರು ಸನ್ಮಾನಿಸಿದರು. ಇಂದು (ಮಂಗಳವಾರ ಜುಲೈ 15) ಬೆಂಗಳೂರಿನ ಅವರ ಕಚೇರಿಯಲ್ಲಿ ಭೇಟಿ ಮಾಡಿದ ಸಂಕೀನ್‌ವರು, ಪುಷ್ಪಗುಚ್ಛ ನೀಡಿ ಆತ್ಮೀಯವಾಗಿ ಗೌರವಿಸಿದರು.

ರಾಜ್ಯದ ಗ್ರಾಮೀಣ ಪ್ರದೇಶದ ಪತ್ರಕರ್ತರಿಗೆ ಬಸ್ ಪಾಸ್ ಸೌಲಭ್ಯ ಮತ್ತು ಮಾಧ್ಯಮ ಮಾನ್ಯತೆ ಹೊಂದಿರುವ ರಾಜ್ಯದ ಪತ್ರಕರ್ತರು ಮತ್ತು ಹಾಗೂ ಅವಲಂಬಿತರ ವೈದ್ಯಕೀಯ ಚಿಕಿತ್ಸೆಗಾಗಿ ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ ಯೋಜನೆಯ ಅನುಷ್ಠಾನಗೊಳಿಸುವ ಮೂಲಕ ನಾಡಿನ ಪತ್ರಕರ್ತರ ಹಿತ ಕಾಪಾಡಿದ ಹಿನ್ನೆಲೆಯಲ್ಲಿ ಸಂಘದ ವತಿಯಿಂದ ಗೌರವಿಸಲಾಯಿತು. ಇದೇ ವೇಳೆ ಸಂಘದ ಜಿಲ್ಲಾಧ್ಯಕ್ಷ ಮಲ್ಲಪ್ಪ ಸಂಕೀನ್ ಅವರು ಕಳೆದ 3 ವರ್ಷಗಳಿಂದ ಸಂಘವು ನಡೆಸಿದ ಕಾರ್ಯ ಚಟುವಟಿಕೆಗಳನ್ನು ವಿವರವಾಗಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಅವರಿಗೆ ತಿಳಿಸಿದಾಗ ಸಾಧನೆ ಕೇಳಿ ಪ್ರಭಾಕರ್ ಅವರು ಮೆಚ್ಚುಗೆ ವ್ಯಕ್ತಪಡಿಸಿದರು. ರಾಜ್ಯ ಸರಕಾರದ ವತಿಯಿಂದ ಯಾದಗಿರಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ರಾಜ್ಯ ಸರಕಾರದಿಂದ ವಿಶೇಷವಾದ ಅನುದಾನ ಬಿಡುಗಡೆ ಮಾಡಿಸುವಂತೆ ಅಧ್ಯಕ್ಷ ಮಲ್ಲಪ್ಪ ಸಂಕೀನ್ ಅವರು ಮಾಡಿದ ಮನವಿಗೆ ಸ್ಪಂದಿಸಿದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಪ್ರಭಾಕರ್ ಅವರು ಸರಕಾರದೊಂದಿಗೆ ಚರ್ಚಿಸುವ ಮೂಲಕ ಅನುಕೂಲ ಮ್ಾಡಿಕೊಡಲಾಗುವುದು ಎಂದು ಭರವಸೆ ನೀಡಿದರು.

## ತಾತ್ಕಾಲಿಕ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.15–ಕಲಬುರಗಿ ಮಹಾನಗರಪಾಲಿಕೆಯ 2009–10 ಮತ್ತು 2015–16ನೇ ಸಾಲಿನ ಪಾಲಿಕೆನಿಧಿ ಪರಿಷ್ಕೃತ ಎಸ್.ಎಫ್.ಸಿ. ಕ್ರಿಯಾ ಯೋಜನೆಯಡಿ 2025–26ನೇ ಸಾಲಿಗೆ ಶೇ. 24.10ರ ಯೋಜನೆಯಡಿ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟಜಾತಿ/ಪರಿಶಿಷ್ಟಪಂಗಡ ಸಮುದಾಯ ಭವನಗಳಿಗೆ ಶವ ಪೆಟ್ಟಿಗೆ (ಫ್ರಿಜರ) ವಿತರಿಸುವ ಸಂಬಂಧ ಈಗಾಗಲೇ ಅರ್ಜಿ ಆಹ್ವಾನಿಸಿ, ಅರ್ಹ ಅರ್ಜಿದಾರರ ತಾತ್ಕಾಲಿಕ ಪಟ್ಟಿಯನ್ನು ಕಲಬುರಗಿ ಮಹಾನಗರ ಪಾಲಿಕೆಯ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸಲಾಗಿದೆ.

ಈ ತಾತ್ಕಾಲಿಕ ಅರ್ಹ ಅರ್ಜಿದಾರರ ಪಟ್ಟಿಗೆ ಆಕ್ಷೇಪಣೆಗಳು ಇದ್ದಲ್ಲಿ 2025ರ ಜುಲೈ 28 ರೊಳಗಾಗಿ ಪೂರಕ ದಾಖಲೆಗಳೊಂದಿಗೆ ಕಲಬುರಗಿ ಮಹಾನಗರ ಪಾಲಿಕೆಯ ಕಚೇರಿಯಲ್ಲಿ ಆಕ್ಷೇಪಣೆ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕಲಬುರಗಿ ಮಹಾನಗರಪಾಲಿಕೆ (ಆಡಳಿತ) ಉಪ ಆಯುಕ್ತರು ತಿಳಿಸಿದ್ದಾರೆ.

## ಹೆಚ್ಚಿನ ದರಕ್ಕೆ ರಸಗೊಬ್ಬರ ಮಾರಾಟ: ಮಳಿಗೆಗಳ ಪರವಾನಿಗೆ ರದ್ದು

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲೆಗೆ ಬೇಡಿಕೆಯ ಅನ್ವಯ ರಸಗೊಬ್ಬರಗಳು ಸರಬರಾಜಾಗುತ್ತಿದ್ದು ಕೃಷಿ ಪರಿಕರ ಮಾರಾಟ ಮಳಿಗೆಗಳು ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ ರೈತರಿಗೆ ವಿತರಿಸಲಾಗುತ್ತಿದೆ. ರಸಗೊಬ್ಬರಗಳ ವಿತರಣೆಯನ್ನು ಕೃಷಿ ಇಲಾಖೆಯಿಂದ ಉಸ್ತುವಾರಿ ಮಾಡಲಾಗುತ್ತಿದ್ದು, ಉಲ್ಲಂಘನೆಗಳು ಕಂಡುಬಂದಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ.

ಅದರಂತೆ ಯೂರಿಯಾ ರಸಗೊಬ್ಬರವನ್ನು ಹೆಚ್ಚಿನ ದರಕ್ಕೆ ಮಾರಾಟ ಮಾಡಿರುವ ಕುರಿತು ಸಹಾಯಕ ಕೃಷಿ ನಿರ್ದೇಶಕರು (ಜಾರಿದಳ) ಇವರ ಪರಿಶೀಲನೆಯಲ್ಲಿ ಕಂಡುಬಂದಿದ್ದು, ಮಾರಾಟಗಾರರಾದ ಕನಕಗಿರಿ ತಾಲ್ಲೂಕಿನ ಮುಸಲಾಪುರದ ಮೆ॥ ಸಜ್ಜಲಶ್ರೀ ಆಗ್ರೋ ಕೇಂದ್ರ ಮತ್ತು ಕೊಪ್ಪಳ ತಾಲ್ಲೂಕಿನ ಇರಕಲ್‌ಗಡಾದ ಮೆ॥ ಸ್ಪಂದನ ಆಗ್ರೋ ಟ್ರೇಡರ್ಸ್ ಇವರ ರಸಗೊಬ್ಬರ ಮಾರಾಟ ಪರವಾನಿಗೆಯನ್ನು ರಸಗೊಬ್ಬರ ನಿಯಂತ್ರಣ ಆದೇಶ 1985 ರ ಕ್ಲಾಸ್ 3, 4, 5, 8 ಮತ್ತು 35 ರ ಉಲ್ಲಂಘನೆಗಳಿಗಾಗಿ ಅಮಾನತ್ತುಗೊಳಿಸಲಾಗಿದೆ ಮತ್ತು ರಸಗೊಬ್ಬರ ನಿಯಂತ್ರಣ ಆದೇಶ 1985 ರ ಉಲ್ಲಂಘನೆಗಾಗಿ ಇವರ ರಸಗೊಬ್ಬರ ಮಾರಾಟ ಪರವಾನಿಗೆಗಳನ್ನು ರದ್ದುಗೊಳಿಸಲಾಗಿರುತ್ತದೆ.

ರೈತರು ರಸಗೊಬ್ಬರ ಖರೀದಿಸುವ ಸಮಯದಲ್ಲಿ ಮಾರಾಟಗಾರರು ಖರೀದಿ ಬಿಲ್ ಅನ್ನು ನೀಡದೇ ಇದ್ದಲ್ಲಿ ಅಥವಾ ಕೃಷಿ ಪರಿಕರಗಳನ್ನು ಹೆಚ್ಚಿನ ದರದಲ್ಲಿ ಮಾರಾಟ ಮಾಡುವುದು ಕಂಡುಬಂದಲ್ಲಿ ಅಥವಾ ಕಳಪೆ ಗುಣಮಟ್ಟದ ರಸಗೊಬ್ಬರ ಕಂಡುಬಂದಲ್ಲಿ ಕೃಷಿ ಅಧಿಕಾರಿ ಅಥವಾ ಸಹಾಯಕ ಕೃಷಿ ನಿರ್ದೇಶಕರು ಅಥವಾ ಸಹಾಯಕ ಕೃಷಿ ನಿರ್ದೇಶಕರು (ಜಾರಿದಳ), ಜಂಟಿ ಕೃಷಿ ನಿರ್ದೇಶಕರ ಕಛೇರಿ, ಕೊಪ್ಪಳ ಮೊಬೈಲ್ ಸಂಖ್ಯೆ:8277932117 ಇವರನ್ನು ಸಂಪರ್ಕಿಸಿ ಮಾಹಿತಿ ನೀಡಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

## ಪಂಚ ಸೇನಾ ಕೊಪ್ಪಳ ಜಿಲ್ಲಾ ಅಧ್ಯಕ್ಷರಾಗಿ ವಿಶ್ವನಾಥ ಮರಿಬಸಪ್ಪನವರ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೂಡಲಸಂಗಮ ಪಂಚಮಸಾಲಿ ಪೀಠದ ಶ್ರೀ ಬಸವ ಜಯಮೃತ್ಯುಂಜಯ ಮಹಾಸ್ವಾಮಿಗಳ ಮಾರ್ಗದರ್ಶನದಲ್ಲಿ ಹಾಗೂ ರಾಷ್ಟ್ರೀಯ ಅಧ್ಯಕ್ಷ ಡಾ. ಬಿ.ಎಸ್. ಪಾಟೀಲ (ನಾಗರಾಳಹುಲಿ) ಅವರ ಸಲಹೆ ಮೇರೆಗೆ ಕೊಪ್ಪಳ ಜಿಲ್ಲೆಯ ಕುಕನೂರು ತಾಲೂಕಿನ ಮಂಗಳೂರು ಗ್ರಾಮದ ವಿಶ್ವನಾಥ ಮರಿಬಸಪ್ಪನವರ ಅವರನ್ನು ಪಂಚ ಸೇನಾ ಕೊಪ್ಪಳ ಜಿಲ್ಲಾ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ. ವಿಶ್ವನಾಥ ಮರಿಬಸಪ್ಪನವರ ಅವರು ಚತುರ ಯುವ ನಾಯಕರಾಗಿದ್ದು, ಸಂಘಟನಾ ದಕ್ಷತೆಯಲ್ಲಿ ವಿಶಿಷ್ಟ ಹೆಸರುಗಳಿಸಿದ್ದಾರೆ ಕಲ್ಯಾಣ ಕರ್ನಾಟಕ ಪಂಚಮಸಾಲಿ ಸಮಾಜ ಜಿಲ್ಲೆಯ, ತಾಲೂಕು, ಗ್ರಾಮಮಟ್ಟದ, ಘಟಕಗಳ, ಯುವಕರಿಗೆ ಸಂಘಟನಾ ಚಟುವಟಿಕೆಗಳಲ್ಲಿ ಹೆಚ್ಚಿನ ಪ್ರೇರಣೆ ನೀಡುವಲ್ಲಿ ಮಹತ್ವದ ಪಾತ್ರ ವಹಿಸಲಿದ್ದಾರೆ ಎಂದು ಈ ನೇಮಕಾತಿಯನ್ನು ರಾಜ್ಯಾಧ್ಯಕ್ಷ ಶ್ರೀ ರುದ್ರಗೌಡ್ರ ವಿ. ಸೊಲಬಗೌಡ್ರ ಅವರು ಅಧಿಕೃತವಾಗಿ ಘೋಷಿಸಿದ್ದು ನೂತನ ನೇಮಕಾತಿಯ ಮೂಲಕ ಸಂಘಟನೆಯ ಬಲ ಹೆಚ್ಚು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

## ಸರ್ಕಾರಿ ಸೌಕರ್ಯಗಳನ್ನು ಹಾಗೂ ಮುಂತಾದ ಸೌಲಭ್ಯಗಳನ್ನು ಪಡೆಯಿರಿ: ತಹಶೀಲ್ದಾರ್



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ತಾಲೂಕಿನ ಎಲ್ಲಾ ಗ್ರಾಮದ ಗ್ರಾಮಸ್ಥರಿಗೆ ಕರ್ನಾಟಕ ಸರ್ಕಾರವು ಎಲ್ಲಾ ರೈತ ಭಾಂದವರಿಗೆ ಉಪಯೋಗವಾಗುವ ಸಲುವಾಗಿ ಪೌತಿ ಖಾತೆ ಅಂದೋಲನ (ಇ–ಪೌತಿ) ವನ್ನು ಜಾರಿಗೆ ತಂದಿದ್ದು, ಇದರಿಂದ ಪಹಣಿ ಪತ್ರಿಕೆಯಲ್ಲಿ ಪೌತಿ ಆದಂತಹ ಖಾತೆದಾರರ ಹೆಸರನ್ನು ತೆಗೆದು ಅವರ ವಂಶಸ್ಥರ ಹೆಸರನ್ನು ವಂಶವೃಕ್ಷ ಪ್ರಮಾಣ ಪತ್ರದ ಪ್ರಕಾರ ದಾಖಲು ಮಾಡಲು ಅವಕಾಶ ಕಲ್ಪಿಸಲಾಗಿದ್ದು ಇರುತ್ತದೆ. ಲಿಂಗಸುಗೂರು ತಾಲೂಕಿನಲ್ಲಿ ಹನ್ನೊಂದು ಸಾವಿರಕ್ಕೂ ಅಧಿಕ ಪೌತಿ ಖಾತೆದಾರರಿರುವ ಮಾಹಿತಿ ಇದ್ದು, ಇದರಿಂದಾಗಿ ಎಲ್ಲಾ ರೈತರಿಗೆ ಬ್ಯಾಂಕ್ ಸಾಲ ಪಡೆಯಲು, ಬೆಳೆ ವಿಮೆ, ತಲುಪಬೇಕಾದಂತಹ ಸರ್ಕಾರಿ ಸೌಕರ್ಯಗಳನ್ನು ಹಾಗೂ ಮುಂತಾದ ಸೌಲಭ್ಯಗಳನ್ನು ಪಡೆಯಲು ಸಹಕಾರಿಯಾಗುವುದರಿಂದ ಎಲ್ಲ ರೈತರು ನಿಮ್ಮ ಗ್ರಾಮ ಆಡಳಿತ ಅಧಿಕಾರಿಗಳನ್ನು ಸಂಪರ್ಕಿಸಿ ಪೌತಿ ಖಾತೆ ಮಾಡಿಸಿಕೊಳ್ಳಲು ತಿಳಿಸಿದೆ. ಪೌತಿ ಖಾತೆ ಮಾಡಿಸಿಕೊಳ್ಳಲು ಬೇಕಾಗಿರುವಂತಹ ದಾಖಲೆಗಳು .ಪೌತಿದಾರರ ಮರಣ ಪ್ರಮಾಣ ಪತ್ರ ವಂಶವೃಕ್ಷ ಪ್ರಮಾಣ ಪತ್ರ ಪೌತಿ ಖಾತೆ ಅರ್ಜಿ ಚಾಲ್ತಿ ಪಹಣಿ ವಂತಮಕ್ಷದಲ್ಲಿರುವ ಎಲ್ಲಾ ಸದಸ್ಯರ ಅಧಾರ ಕಾರ್ಡ ತಹಶೀಲ್ದಾರ ಪ್ರತಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 22 ರಂದು ಸೇಡಂದಲ್ಲಿ ಹರಾಜು ಪ್ರಕ್ರಿಯೆ ಮೂಲಕ ವಾಹನಗಳ ವಿಲೇವಾರಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.15–ಸೇಡಂ ವಲಯಕ್ಕೆ ಸಂಬಂಧಟಪ್ಪಂತೆ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡ ವಾಹನಗಳನ್ನು ಇದೇ ಜುಲೈ 22 ರಂದು ಬೆಳಿಗ್ಗೆ 10 ಗಂಟೆಗೆ ಸೇಡಂ ವಲಯದ ಅಬಕಾರಿ ನಿರೀಕ್ಷಕರ ಕಚೇರಿಯಲ್ಲಿ ಟೆಂಡರ್–ಕಮ್–ಹರಾಜು ಪ್ರಕ್ರಿಯೆಯ ಮೂಲಕ ವಿಲೇವಾರಿ ಮಾಡಲಾಗುತ್ತದೆ ಎಂದು ಕಲಬುರಗಿ ಅಬಕಾರಿ ಉಪ ಆಯುಕ್ತರು ಹಾಗೂ ಪ್ರಾಧಿಕೃತ ಅಧಿಕಾರಿಗಳು ತಿಳಿಸಿದ್ದಾರೆ.

ಈ ವಾಹನಗಳನ್ನು ವಿಲೇವಾರಿ ಮಾಡಲು ಚಿತ್ತಾಪುರ ಉಪವಿಭಾಗದ ಅಬಕಾರಿ ಉಪ ಅಧೀಕ್ಷಕರನ್ನು ಹರಾಜು ನಿರ್ವಹಣಾಧಿಕಾರಿಯನ್ನಾಗಿ ನೇಮಿಸಲಾಗಿದ್ದು, ಈ ಟೆಂಡರ್ ಪ್ರಕಟಣೆಯಲ್ಲಿನ ನಮೂದಿಸಿರುವ ವಾಹನಗಳ ಷರತ್ತುಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಈ ಹಿಂದೆ ಸೇಡಂ ವಲಯ ಕಚೇರಿಯಲ್ಲಿ ದಿನಾಂಕ: 16–06–2025 ರಂದು ನಿಗದಿಪಡಿಸಲಾಗಿದ್ದ ಬಹಿರಂಗ ಹರಾಜು ಪ್ರಕ್ರಿಯೆಯನ್ನು ಕಾರಣಾಂತರದಿಂದ ಮುಂದೂಡಲಾಗಿತ್ತು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರ
(ಸಹಕಾರ ಇಲಾಖೆ)

ಸಹಕಾರ ಸಂಘಗಳ ಉಪ ನಿಬಂಧಕರು (ನಿ.,441), ಸೌಹಾರ್ದ ಸಹಕಾರಿಗಳ ದಾವಾ ಪಂಚಾಯ್ತಿ, ನ್ಯಾಯಾಲಯ, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ. ಸೌಹಾರ್ದ ಸಹಕಾರ ಸೌಧ" #68, 1ನೇ ಮಹಡಿ, 17&18ನೇ ಅಡ್ಡರಸ್ತೆ ಮಧ್ಯೆ ಮಾರ್ಗೋಸಾ ರಸ್ತೆ, ಮಲ್ಲೇಶ್ವರಂ, ಬೆಂಗಳೂರು–560055.

**ವಾದಿ:**
**ಮುಖ್ಯ ಕಾರ್ಯನಿರ್ವಾಹಕರು**
**ಶ್ರೀ ಮಾಣಿಕಪ್ರಭು ಪತ್ತಿನ ಸೌಹಾರ್ದ ಸಹಕಾರಿ ನಿ.,**
ಗಾದಾ ಕಾಂಪ್ಲೆಕ್ಸ್, ತಾ.ಹುಮನಾಬಾದ ಜಿ.ಬೀದರ–585330,

**ಪ್ರತಿವಾದಿಗಳು:**
ವ್ಯಾಜ್ಯ ಸಂಖ್ಯೆ: ಡಿ.ಆರ್.ಡಿ/ಕ.ರಾ.ಸೌ.ಸಂ.ಸ.ನಿ.,/145/2024–25
ಶ್ರೀ ದತ್ತು ತಂದೆ ವೆಂಕಟರಾವ್ ಲಗಾದೆ,
ಮನೆ ಸಂ–293/03, ಓತಗಿ ಹುಮನಾಬಾದ, ಜಿ.ಬೀದರ 585330.
ಪ್ರತಿವಾದಿಗಳಿಗೆ ಪತ್ರಿಕಾ ಪ್ರಕಟಣೆ ಮೂಲಕ ನೋಟೀಸ್

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನಿಮಗೆ ತಿಳಿಯಪಡಿಸುವುದನೆಂದರೆ ಈ ಮೇಲ್ಕಂಡ ಪ್ರತಿವಾದಿಗಳ ದಾವಾ ಸಂಖ್ಯೆ: ಡಿ.ಆರ್.ಡಿ/ಕ.ರಾ.ಸೌ.ಸಂ.ಸ.ನಿ./145/2024–25 ರಂತೆ ಸಹಕಾರ ಸಂಘಗಳ ಜಂಟಿ ನಿಬಂಧಕರು (ನಿ.,441), ಸೌಹಾರ್ದ ಸಹಕಾರಿಗಳ ದಾವಾ ಪಂಚಾಯಿತಿ ನ್ಯಾಯಾಲಯದಲ್ಲಿ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ ರಲ್ಲಿ 39 ರಡಿಯಲ್ಲಿ ದಾವೆಯನ್ನು ಸಲ್ಲಿಸಿದ್ದು, ನೀವು ಪ್ರತಿವಾದಿಯಾಗಿರುತ್ತೀರಿ, ಆದುದರಿಂದ ಈ ಮೂಲಕ ನಿಮಗೆ ತಿಳಿಯಪಡಿಸುವುದನೆಂದರೆ ಈ ಮೇಲ್ಕಂಡ ನ್ಯಾಯಾಲಯದ ಮುಂದೆ ದಿನಾಂಕ:31.07.2025 ರಂದು ಬೆಳ್ಳಗ್ಗೆ 11–30 ಗಂಟೆಗೆ ಸರಿಯಾಗಿ ತಾವಾಗಲಿ, ತಮ್ಮಿಂದ ನೇಮಕಗೊಂಡ ವಕೀಲರ ಮುಖಾಂತರವಾಗಲಿ ಹಾಜರಾಗಲು ಈ ಮೂಲಕ ತಿಳಿಯಪಡಿಸುತ್ತೇವೆ. ತಪ್ಪಿದಲ್ಲಿ ನಿಮ್ಮ ಗೈರು ಹಾಜರಿಯಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ಇತ್ಯರ್ಥಪಡಿಸಲಾಗುವುದು.

ಸದರಿ ಪ್ರಕಟಣೆಯನ್ನು ದಿನಾಂಕ:15.07.2025 ರಂದು ನ್ಯಾಯಾಲಯದ ಸಹಿ ಮತ್ತು ಮೊಹರಿನೊಂದಿಗೆ ನೀಡಲಾಗಿದೆ.

**ಸಹಿ/–**
ಸಹಕಾರ ಸಂಘಗಳ ಉಪ ನಿಬಂಧಕರು (ನಿ.441)
ದಾವಾ ಪಂಚಾಯ್ತಿ ನ್ಯಾಯಾಲಯ ಕ.ರಾ.ಸೌ.ಸಂ.ಸ.ನಿ., ಬೆಂಗಳೂರು
(ನ್ಯಾಯಾಲಯದ ಆದೇಶದ ಮೇರೆಗೆ)

## "ಜನರಲ್ ಕೆ.ಎಸ್. ತಿಮ್ಮಯ್ಯ" ನಗದು ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.15.(ಕ.ವಾ.)–ಪ್ರಸಕ್ತ 2025–26ನೇ ಸಾಲಿಗೆ ಎಸ್‌ಎಸ್‌ಎಲ್‌ಸಿ ಮತ್ತು 2ನೇ ವರ್ಷದ ಪಿಯುಸಿ ಸಾರ್ವತ್ರಿಕ ಪರೀಕ್ಷೆಯಲ್ಲಿ ಗರಿಷ್ಠ ಅಂಕ ಪಡೆದ ಕರ್ನಾಟಕದ ಮೂಲನಿವಾಸಿ ಮಿಲಿಟರಿ ಪಿಂಚಣಿದಾರ, ಮಾಜಿ ಸೈನಿಕರ ಮಕ್ಕಳಿಗೆ "ಜನರಲ್ ಕೆ.ಎಸ್. ತಿಮ್ಮಯ್ಯ" ನಗದು ಪ್ರಶಸ್ತಿಯನ್ನು ನೀಡಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಈ ಕಚೇರಿ ವ್ಯಾಪ್ತಿಯಲ್ಲಿ ಬರುವ ಬೀದರ, ರಾಯಚೂರ, ಯಾದಗಿರಿ ಹಾಗೂ ಕಲಬುರಗಿ ಜಿಲ್ಲೆಗಳ ಮಾಜಿ ಸೈನಿಕರು ನಿಗದಿತ ಅರ್ಜಿ ನಮೂನೆಯನ್ನು ಕಲಬುರಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪನಿರ್ದೇಶಕರ ಕಚೇರಿಯಿಂದ ಪಡೆದು ಭರ್ತಿ ಮಾಡಿ 2025ರ ನವೆಂಬರ್ 30 ರೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

## ಗೃಹ ಆರೋಗ್ಯ ಯೋಜನೆಯಡಿ ಅಸಾಂಕ್ರಾಮಿಕ ರೋಗಗಳ ಚಿಕಿತ್ಸೆ –ಅರಿವು ಕಾರ್ಯಕ್ರಮಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಜು: 15– ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಗೃಹ ಆರೋಗ್ಯ ಯೋಜನೆಯಡಿ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಕ್ಕೆ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಇಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಚಾಲನೆ ನೀಡಿದರು.

ಈ ಕಾರ್ಯಕ್ರಮದ ಅಂಗವಾಗಿ ಆರೋಗ್ಯ ಕಾರ್ಯಕರ್ತರಿಂದ ಮನೆ ಮನೆ ಭೇಟಿ ಮೂಲಕ ಅರಿವು ಮೂಡಿಸಲಾಗುತ್ತದೆ.

ಸಾಂಕ್ರಾಮಿಕ ರೋಗಗಳ ನಿಯಂತ್ರಣ ಮತ್ತು ನಿರ್ವಹಣೆಗೆ ಗ್ರಾಮೀಣ ಪ್ರದೇಶಗಳಲ್ಲಿ 30 ವರ್ಷ ವಯೋಮಾನದ ಜನರಲ್ಲಿ 14 ಈ ಕೆಳಗಿನ ಸಾಂಕ್ರಾಮಿಕ ರೋಗಗಳ ತಪಾಸಣೆ ಹಾಗೂ ನಿರ್ವಹಣೆ ಮಾಡಲಾಗುತ್ತದೆ.

ಸಕ್ಕರೆ ಕಾಯಿಲೆ, ಅಧಿಕ ರಕ್ತದೊತ್ತಡ, ಬಾಯಿ ಕ್ಯಾನ್ಸರ್, ಸ್ತನ ಕ್ಯಾನ್ಸರ್, ಡಯಾಬಿಟಿಕ್ ರೆಟಿನೋಪತಿ, ನರ ವೈಜ್ಞಾನಿಕ ಅಸ್ವಸ್ಥತೆ ಗಳು, ಮಾನಸಿಕ ಆರೋಗ್ಯ ಅಸ್ವಸ್ಥತೆಗಳು, ನಿದ್ರೆಯಲ್ಲಿ ಉಸಿರುಗಟ್ಟುವಿಕೆ, ದೀರ್ಘ ಕಾಲದ ಮೂತ್ರ ಪಿಂಡ ದ ಕಾಯಿಲೆ, ದೀರ್ಘ ಕಾಲದ ಶ್ವಾಸಕೋಶದ ಕಾಯಿಲೆ, ಲಿವರ್ ಕಾಯಿಲೆ, ರಕ್ತಹೀನತೆ, ಗರ್ಭಕೋಶದ ಕ್ಯಾನ್ಸರ್ ಹಾಗೂ ಪಿತ್ತ ಜನಾಂಗದ ಕಾಯಿಲೆ ಒಳಗೊಂಡಿವೆ. ಸಚಿವರು ಇದೇ ಸಂದರ್ಭದಲ್ಲಿ ಗೃಹ ಆರೋಗ್ಯ ಕಾರ್ಯಕ್ರಮದ ಕೈಪಿಡಿ ಬಿಡುಗಡೆಗೊಳಿಸಿದರು.

ಈ ಸಂದರ್ಭದಲ್ಲಿ ರಾಯಚೂರು ಲೋಕಸಭಾ ಸದಸ್ಯರು ಹಾಗೂ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಮೇಲ್ವಿಚಾರಣಾ ಸಮಿತಿ ಅಧ್ಯಕ್ಷರಾದ ಜಿ.ಕುಮಾರ್ ನಾಯಕ್ ,ಗುರುಮಠಕಲ್ ಶಾಸಕ ಶರ–ಣಗೌಡ ಕಂದಕೂರ

ಸುರಪುರ ಶಾಸಕ ರಾಜಾ ವೇಣುಗೋಪಾಲ ನಾಯಕ್, ಜಿಲ್ಲಾಧಿಕಾರಿ ಹರ್ಷಲ್ ಬೋಯರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಎಸ್.ಪಿ.ಪೃಥ್ವಿಕ್ ಶಂಕರ್, ಡಿಹೆಚ್‌ಓ ಮಹೇಶ್ ಬಿರಾದಾರ್, ನಾಮನಿರ್ದೇಶಿತ ಸದಸ್ಯರು ಉಪಸ್ಥಿತರಿದ್ದರು.

## ಹುಬ್ಬಳ್ಳಿ–ರಾಮೇಶ್ವರಂ ವಿಶೇಷ ರೈಲು ರಾಮನಾಥಪುರಂವರೆಗೆ ಸಂಚಾರ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು, ಜುಲೈ 15–ದಕ್ಷಿಣ ರೈಲ್ವೆಯಲ್ಲಿನ ಕಾರ್ಯಾಚರಣೆಯ ನಿರ್ಬಂಧಗಳನ್ನು ಗಮನದಲ್ಲಿಟ್ಟುಕೊಂಡು 07355/07356 ಸಂಖ್ಯೆಯ ಎಸ್‌ಎಸ್‌ಎಸ್ ಹುಬ್ಬಳ್ಳಿ–ರಾಮೇಶ್ವರಂ–ಎಸ್‌ಎಸ್‌ಎಸ್ ಹುಬ್ಬಳ್ಳಿ ಸಾಪ್ತಾಹಿಕ ವಿಶೇಷ ಎಕ್ಸಪ್ರೆಸ್ ರೈಲಿನ ಸಂಚಾರದ ಅವಧಿಯನ್ನು ವಿಸ್ತರಿಸಲು ನಿರ್ಧರಿಸಲಾಗಿದೆ.

ಈ ವಿಶೇಷ ರೈಲು ತನ್ನ ಹಿಂದಿನ ನಿಗದಿತ ನಿಲ್ದಾಣವಾದ ರಾಮೇಶ್ವರಂ ಬದಲಿಗೆ ರಾಮನಾಥಪುರಂನಲ್ಲಿ ತನ್ನ ಪ್ರಯಾಣವನ್ನು ಕೊನೆಗೊಳಿಸಲಿದೆ ಮತ್ತು ಅಲ್ಲಿಂದಲೇ ತನ್ನ ಹಿಮ್ಮುಖ ಪ್ರಯಾಣವನ್ನು ಪ್ರಾರಂಭಿಸಲಿದೆ. ಆದಾಗ್ಯೂ, ಈ ರೈಲುಗಳು ಪ್ರಸ್ತುತ ಇರುವ ಸಂಯೋಜನೆ, ಸಮಯ ಮತ್ತು ನಿಲುಗಡೆಗಳೊಂದಿಗೆ ತಮ್ಮ ಸಂಚಾರವನ್ನು ಮುಂದುವರಿಸಲಿವೆ. ಇದರನ್ವಯ, ಈ ಹಿಂದೆ ಜುಲೈ 26ರವರೆಗೆ ಸಂಚರಿಸಬೇಕಿದ್ದ 07355 ಸಂಖ್ಯೆಯ ಎಸ್‌ಎಸ್‌ಎಸ್ ಹುಬ್ಬಳ್ಳಿ–ರಾಮೇಶ್ವರಂ ಸಾಪ್ತಾಹಿಕ ವಿಶೇಷ ಎಕ್ಸಪ್ರೆಸ್ ರೈಲು ಈಗ ಆಗಸ್ಟ್ 9 ರಿಂದ 30 ರವರೆಗೆ ನಾಲ್ಕು ಹೆಚ್ಚುವರಿ ಟ್ರಿಪ್‌ಗಳಿಗೆ ವಿಸ್ತರಿಸಲಾಗಿದೆ. ಈ ರೈಲು ಈಗ ರಾಮೇಶ್ವರಂ ಬದಲು ರಾಮನಾಥಪುರಂನಲ್ಲಿ ತನ್ನ ಸಂಚಾರವನ್ನು ಮೊಟಕುಗೊಳಿಸಲಿದೆ. ಅದೇ ರೀತಿ, ಈ ಹಿಂದೆ ಜುಲೈ 27ರವರೆಗೆ ಸಂಚರಿಸಬೇಕಿದ್ದ 07356 ಸಂಖ್ಯೆಯ ರಾಮೇಶ್ವರಂ ಎಸ್‌ಎಸ್‌ಎಸ್ ಹುಬ್ಬಳ್ಳಿ ಸಾಪ್ತಾಹಿಕ ವಿಶೇಷ ಎಕ್ಸಪ್ರೆಸ್ ರೈಲು ಈಗ ಆಗಸ್ಟ್ 10 ರಿಂದ 31ರವರೆಗೆ ನಾಲ್ಕು ಹೆಚ್ಚುವರಿ ಟ್ರಿಪ್‌ಗಳಿಗೆ ವಿಸ್ತರಿಸಲಾಗಿದೆ. ಈ ರೈಲು ಈಗ ರಾಮೇಶ್ವರಂ ಬದಲು ರಾಮನಾಥಪುರಂನಿಂದ ತನ್ನ ಸಂಚಾರವನ್ನು ಪ್ರಾರಂಭಿಸಲಿದೆ ಎಂದು ನೈರುತ್ಯ ರೈಲ್ವೆ ವಲಯದ ಅಧಿಕಾರಿಗಳು ತಿಳಿಸಿದ್ದಾರೆ.

# ನೂತನ ಸಂಶೋಧನೆಗಳಿಗೆ ಐಯುಎಸಿ ಕೇಂದ್ರ: ಪ್ರೊ.ಎಂ.ಟಿ.ಲಗಾರೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.15-ಸುರಕ್ಷತೆ ಭದ್ರತೆ ಮತ್ತು ಪರಿಸರಕ್ಕೆ ಧಕ್ಕೆಯಾಗದಂತೆ ಅತ್ಯುನ್ನತ ಮಾನದಂಡಗಳನ್ನು ಕಾಯ್ದುಕೊಂಡು ಕೌಶಲ್ಯಗಳನ್ನು ಹೆಚ್ಚಿಸಲು ಐಯುಎಸಿ (ಅಂತರ್ ವಿಶ್ವವಿದ್ಯಾಲಯವೇಗವರ್ಧಕಕೇಂದ್ರ) ಯು ನಿರಂತರವಾಗಿ ವಿನೂತನ ಸಂಶೋಧನಾ ಮಾರ್ಗಗಳಿಗೆ ಶ್ರಮಿಸುತ್ತಿದೆ ಎಂದು ಗುಲ್ಬರ್ಗ ವಿಶ್ವವಿದ್ಯಾಲಯದ ಭೌತಶಾಸ್ತ್ರ ವಿಭಾಗದ ನಿವೃತ್ತ ಪ್ರಾಧ್ಯಾಪಕರಾದ ಪ್ರೊ. ಎಂ.ಟಿ ಲಗಾರೆ ಅವರು ಹೇಳಿದರು.




ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಭೌತಶಾಸ್ತ್ರ ಅಧ್ಯಯನ ವಿಭಾಗ ಹಾಗೂ ಅಂತರ್ ವಿಶ್ವವಿದ್ಯಾಲಯ ವೇಗವರ್ಧಕ ಕೇಂದ್ರ ನವದೆಹಲಿ ಇವರ ಸಂಯುಕ್ತಾಶ್ರಯದಲ್ಲಿ ವಿವಿಯ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ "ಐಯುಎಸಿ ಪರಿಚಯ ಕಾರ್ಯಕ್ರಮ"ದಲ್ಲಿ ಭಾಗವಹಿಸಿ ಮಾತನಾಡಿದರು.

ಐಯುಎಸಿ ನಲ್ಲಿರುವ ಪೆಲ್ಲೆಟ್ರಾನ್ ವೇಗವರ್ಧಕ ಪ್ರಯೋಗಾಲಯವು 1991 ರಿಂದ ಕಾರ್ಯನಿರ್ವಹಿಸುತ್ತಿದೆ. ನಂತರದ ವರ್ಷಗಳಲ್ಲಿ ಇದು ಭಾರತ ಮತ್ತು ವಿದೇಶಗಳಿಂದ 400 ಕ್ಕೂ ಹೆಚ್ಚು ಬಳಕೆದಾರರಿಗೆ ಅಯಾನು ಕಿರಣಗಳನ್ನು ಒದಗಿಸುತ್ತಿದೆ.

ವೇಗವರ್ಧಕ ಭೌತಶಾಸ್ತ್ರವು ಕಣ ವೇಗವರ್ಧಕಗಳ ವಿನ್ಯಾಸ, ನಿರ್ಮಾಣ ಮತ್ತು ಕಾರ್ಯಾಚರಣೆಯ ಮೇಲೆ ಕೇಂದ್ರೀಕರಿಸಿದ ಭೌತಶಾಸ್ತ್ರದ ವಿಶೇಷ ಕ್ಷೇತ್ರವಾಗಿದ್ದು, ಇದರ ಜೊತೆಯಲ್ಲೆ ಪರಮಾಣು ಭೌತಶಾಸ್ತ್ರವು ಪರಮಾಣು ನ್ಯೂಕ್ಲಿಯಸ್ಗಳ ಒಟ್ಟಿಗೆ ಹಿಡಿದಿಟ್ಟುಕೊಳ್ಳುವ ಮೂಲಭೂತ ಶಕ್ತಿಗಳು ಮತ್ತು ಅವುಗಳಿಗೆ ಒಳಗಾಗುವ ಪ್ರತಿಕ್ರಿಯೆಗಳು, ವಿಕಿರಣಶೀಲ ಕೊಳೆತ, ವಿದಳನ ಮತ್ತು ಸಮ್ಮಿಳನಗಳನ್ನು ನೀಡುತ್ತವೆ. ಇವುಗಳ ಹೆಚ್ಚಿನ ಅಧ್ಯಯನಕ್ಕೆ ಹಾಗೂ ಸಂಶೋಧನೆಗೆ ಐಯುಎಸಿ ಕೇಂದ್ರವು ವೇದಿಕೆಯಾಗಿದೆ ಎಂದು ತಿಳಿಸಿದರು.

ವಿಜಯನಗರ ಶ್ರೀಕೃಷ್ಣದೇವರಾಯ ವಿವಿಯ ಕುಲಪತಿಗಳಾದ ಪ್ರೊ.ಎಂ.ಮುನಿರಾಜು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿಜ್ಞಾನದ ಎಲ್ಲ ಕ್ಷೇತ್ರವು ಭೌತಶಾಸ್ತ್ರದ ಮೇಲೆ ಅವಲಂಬನೆಯಾಗಿದೆ. ಕಲ್ಯಾಣ-ಕರ್ನಾಟಕ ಭಾಗದಲ್ಲಿ ಸುಮಾರು 15 ಕೋಟಿ ರೂ. ವೆಚ್ಚದಲ್ಲಿ ಸುಸಜ್ಜಿತ ಸಂಶೋಧನಾ ಕೇಂದ್ರವನ್ನು ವಿವಿಯಲ್ಲಿ ನಿರ್ಮಿಸಲಾಗುವುದಾಗಿ ಹೇಳಿದರು. ಯುವ ಸಂಶೋಧಕರು ಐಯುಎಸಿ ಕೇಂದ್ರದ ಪ್ರಯೋಜನ ಪಡೆಯಬೇಕೆಂದು ಹೇಳಿದರು.

ನವದೆಹಲಿಯ ಐಯುಎಸಿ ವಿಜ್ಞಾನಿ ಹಾಗೂ ಪ್ರೋಗ್ರಾಂ ಲೀಡರ್ ಡಾ. ಫೌರನ ಸಿಂಗ್ ಮಾತನಾಡಿ, ವೇಗವರ್ಧಕ ಮಾಸ್ ಸ್ಪೆಕ್ಟ್ರೋಮೆಟ್ರಿ ಮತ್ತು ಭೂಕಾಲಗಣನ ಅತ್ಯಾಧುನಿಕ ಸೌಲಭ್ಯ ಹೊಂದಿರುವ ಮೊದಲನೆ ಕೇಂದ್ರವಾಗಿ ಐಯುಎಸಿ ಕಾರ್ಯನಿರ್ವಹಿಸುತ್ತಿದೆ. ಈ ಕೇಂದ್ರದ ಪ್ರಯೋಜನಪಡೆಯಲುಯುವಸಂಶೋಧಕರು ಹೊಸ ಸಂಶೋಧನೆಗಳೊಂದಿಗೆ ಬರಬೇಕು ಎಂದು ಕರೆ ನೀಡಿದರು.

ಮತ್ತೋರ್ವ ಐಯುಎಸಿ ಕೇಂದ್ರದ ವಿಜ್ಞಾನಿ ಹಾಗೂ ಕೇಂದ್ರದ ಸಂಚಾಲಕರಾದ ರಾಜೀವ್ ಮೆಹ್ತಾ ಮಾತನಾಡಿ, ಅಂತರ್-ವಿಶ್ವವಿದ್ಯಾಲಯ ವೇಗವರ್ಧಕ ಕೇಂದ್ರವು ಅತ್ಯಾಧುನಿಕ ಸಂಶೋಧನೆ ನಡೆಸಲು ಅಗತ್ಯವಿರುವ ಆಧುನಿಕ ಉಪಕರಣಗಳೊಂದಿಗೆ ವಿಜ್ಞಾನ ಸಮುದಾಯಕ್ಕೆ ಅನುಕೂಲವಾಗುವಂತೆ ನಿರ್ಮಿತವಾಗಿದೆ. ಅಲ್ಲದೇ, ಕೇಂದ್ರವು 400 ಅಂಗ ಸಂಸ್ಥೆಗಳನ್ನು, 1200 ಸಂಶೋಧನಾ ವಿದ್ಯಾರ್ಥಿಗಳನ್ನು ಹೊಂದಿದೆ ಎಂದರು.

ಮೈಸೂರು ವಿಶ್ವವಿದ್ಯಾಲಯದ ಭೌತಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ. ಎ ಪಿ ಜ್ಞಾನಪ್ರಕಾಶ ಮಾತನಾಡಿ, ಉನ್ನತ ಮಟ್ಟದ ಸೌಲಭ್ಯಗಳನ್ನು ಒಂದೇ ಸೂರಿನಡಿ ಒದಗಿಸುವ ಗುರಿಯನ್ನು ಐಯುಎಸಿ ಹೊಂದಿದೆ. ವಿಶ್ರೀಕೃವಿವಿಯಲ್ಲಿನ ಭೌತಶಾಸ್ತ್ರ ವಿಭಾಗವು ಹಲವು ವೈವಿಧ್ಯತೆಗಳೊಂದಿಗೆ ಕೂಡಿದ್ದು, ರಾಜ್ಯದಲ್ಲಿನ ಉಳಿದ ವಿವಿಗಳಿಗಿಂತ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ವಿವಿಧ ರಾಜ್ಯಗಳ 100ಕ್ಕೂ ಹೆಚ್ಚು ಸಂಶೋಧನಾ ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರುಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಇದಕ್ಕೂ ಮುನ್ನ ಗಣ್ಯರು ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ವಿವಿಯ ಮೌಲ್ಯಮಾಪನ ಕುಲಸಚಿವರಾದ ಪ್ರೊ.ಎನ್.ಎಂ.ಸಾಲಿ, ವಿವಿಯ ಭೌತಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಪ್ರೊ.ತಿಪ್ಪೆರುದ್ರಪ್ಪ ಜೆ, ಡಾ.ಕೊಟ್ರೇಶ್ ಎಂ.ಜಿ ಸೇರಿದಂತೆ ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು ಹಾಗೂ ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಧರ್ತಿ ಆಬಾ ಜನಭಾಗಿಧಾರಿ ಅಭಿಯಾನ

# ಬುಡಕಟ್ಟು ಜನರು ಮುಖ್ಯವಾಹಿನಿಗೆ ಬರಲಿ : ಸಂಸದ ಈ.ತುಕಾರಾಂ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.15-ಕೇಂದ್ರಸರ್ಕಾರ ಜನಸಾಮಾನ್ಯರಶ್ರೇಯೋಭಿವೃದ್ಧಿಗಾಗಿ ಜಾರಿಗೊಳಿಸಿರುವಯೋಜನೆಗಳನ್ನು ಮನೆ ಮನೆಗೆ ತಲುಪಿಸುವ ಗುರಿ ನಮ್ಮದಾಗಿದ್ದು, ಪಿ.ಎಂ ಜನಜಾತಿ ಉನ್ನತ ಗ್ರಾಮ ಅಭಿಯಾನದಡಿ ಧರ್ತಿ ಆಬಾ ಜನಭಾಗಿ ಅಭಿಯಾನವನ್ನು ಜು.15 ರಿಂದ ಜು.30 ರವರೆಗೆ ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ಹಮ್ಮಿಕೊಳ್ಳಲಾಗಿದೆ. ಬುಡಕಟ್ಟು ಸಮುದಾಯಗಳು ಸರ್ಕಾರದ ಯೋಜನೆಗಳನ್ನು ಸದುಪಯೋಗ ಪಡೆದು ಮುಖ್ಯವಾಹಿನಿಗೆ ಬರಬೇಕು ಎಂದು ಸಂಸದರಾದ ಈ.ತುಕಾರಾಂ ಅವರು ಹೇಳಿದರು.

ಕೇಂದ್ರ ಸರ್ಕಾರ ಬುಡಕಟ್ಟು ಮಂತ್ರಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಬಳ್ಳಾರಿ ಇವರ ಸಹಯೋಗದಲ್ಲಿ ಕೇಂದ್ರ ಸರ್ಕಾರದ ಪಿ.ಎಂ ಜನಜಾತಿ ಉನ್ನತ ಗ್ರಾಮ ಅಭಿಯಾನದಡಿ "ಧರ್ತಿ ಆಬಾ ಜನಭಾಗಿಧಾರಿ ಅಭಿಯಾನದ ಸಂಪೂರ್ಣ ಸವಲತ್ತುಗಳ ಜಾಗೃತಿ ಅಭಿಯಾನ" ಕ್ಕೆ ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ದೇಶದಲ್ಲಿ ಪರಿಶಿಷ್ಟ ಪಂಗಡ ಜನಾಂಗದವರು ಹೆಚ್ಚಾಗಿರುವ 26 ರಾಜ್ಯಗಳು, 04 ಕೇಂದ್ರಾಡಳಿತ ಪ್ರದೇಶಗಳು, ರಾಜ್ಯದ 28 ಜಿಲ್ಲೆಗಳು, 1089 ಗ್ರಾಮಗಳನ್ನು ಆಯ್ಕೆ ಮಾಡಲಾಗಿದ್ದು, ಆ ಪೈಕಿ ಬಳ್ಳಾರಿ ಜಿಲ್ಲೆಯ 5 ವಲಯಗಳಿಂದ (ತಾಲೂಕುಗಳಿಂದ) ಒಟ್ಟು 59 ಗ್ರಾಮಗಳನ್ನು ಪ್ರಧಾನಮಂತ್ರಿ ಜನಜಾತಿ ಉನ್ನತ ಗ್ರಾಮ ಅಭಿಯಾನದಡಿ ಆಯ್ಕೆ ಮಾಡಲಾಗಿದೆ. ದೇಶದಲ್ಲಿ ಸುಮಾರು 5.5 ಕೋಟಿ ಬುಡಕಟ್ಟು ಜನಸಂಖ್ಯೆಯಿದ್ದು, ಬುಡಕಟ್ಟು ಜನ ಸಮಗ್ರ ಅಭಿವೃದ್ಧಿಗಾಗಿ ಮೂಲಭೂತ ಸೌಕರ್ಯಗಳು, ಆರೋಗ್ಯ, ಶಿಕ್ಷಣ, ಜೀವನೋಪಾಯಕ್ಕೆ ಬೇಕಾದ ಸೌಲಭ್ಯಗಳನ್ನು ಒದಗಿಸಿಕೊಡಲು ಒಟ್ಟಾರೆಯಾಗಿ ಬುಡಕಟ್ಟು ಜನರ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಅಭಿವೃದ್ಧಿಗೆ ಕ್ರಿಯಾಯೋಜನೆ ರೂಪಿಸಲು ಕ್ರಮಕೈಗೊಳ್ಳಬೇಕಾಗಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು, ಮೀಸಲಿರುವ 79,156 ಕೋಟಿ ರೂ. ಗಳಲ್ಲಿ ಬುಡಕಟ್ಟು ಸಮುದಾಯಗಳು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುವ ದೇಶದ 63,000 ಗ್ರಾಮಗಳಲ್ಲಿ ಅಭಿವೃದ್ಧಿಪಡಿಸಲು ಕ್ರಿಯಾಯೋಜನೆ ರೂಪಿಸಲಾಗಿದೆ ಎಂದು ಹೇಳಿದರು.

ಕೇಂದ್ರ ಬುಡಕಟ್ಟು ಮಂತ್ರಾಲಯ ಈ ಯೋಜನೆಗಳನ್ನು ಅನುಷ್ಠಾನಗೊಳಿಸುವ ಜವಾಬ್ದಾರಿ ಹೊತ್ತಿದೆ. ದೇಶದ ಸುಮಾರು 8 ಕೋಟಿ ಜನರಿಗೆ ಯೋಜನೆಯ ಲಾಭ ದೊರೆಯಲಿದೆ. 2024-25 ರಿಂದ 2028-29ನೇ ಸಾಲಿನವರೆಗೆ 5 ವರ್ಷಗಳಲ್ಲಿ ಯೋಜನೆಯನ್ನು ಪೂರ್ಣಗೊಳಿಸಲಾಗುವುದು. 2024-25 ರಿಂದ 2025-26ನೇ ಸಾಲಿಗೆ ಮೊದಲ ಹಂತದಲ್ಲಿ 4,000 ಕೋಟಿ ಅನುದಾನವನ್ನು ಪ್ರಧಾನಮಂತ್ರಿ ಜನಜಾತಿ ಉನ್ನತ ಗ್ರಾಮ ಅಭಿಯಾನದಡಿ 17 ಇಲಾಖೆಗಳ ಸಹಯೋಗದಲ್ಲಿ ಜಿಲ್ಲೆಯ 59 ಗ್ರಾಮಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕ್ರಿಯಾಯೋಜನೆಯನ್ನು ಸಿದ್ಧಪಡಿಸಬೇಕಾಗಿದೆ. ಈ ಯೋಜನೆಗೆ ಒಳಪಟ್ಟ 59 ಗ್ರಾಮದ ಜನರು ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಜಿಲ್ಲಾಧಿಕಾರಿ ಪ್ರಶಾಂತ್ ಮಿಶ್ರಾ, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೇರ್, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ, ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿ ರಾಘವೇಂದ್ರವರ್ಮಾ ಸೇರಿದಂತೆ ಇಲಾಖೆಯ ಸಿಬ್ಬಂದಿ ಹಾಗೂ ಇತರರು ಉಪಸ್ಥಿತರಿದ್ದರು.

# ಜು.28 ರಂದು ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.15-ಕಾರ್ಮಿಕರ ಭವಿಷ್ಯ ಸಂಸ್ಥೆ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಭವಿಷ್ಯ ನಿಧಿ ನಿಮ್ಮ ಹತ್ತಿರಕ್ಕೆ ಎಂಬ ಅಂಶದಡಿ 'ನಿಧಿ ಆಪ್ಕೆ ನಿಕಟ್' ಕಾರ್ಯಕ್ರಮವನ್ನು ಜು.28 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ಸಂಡೂರು ತಾಲ್ಲೂಕಿನ ಸುಲ್ತಾನ್‌ಪುರದ ಜೆ.ಎಸ್.ಡಬ್ಲ್ಯೂ ಲಿಮಿಟೆಡ್ ನಲ್ಲಿ ಆಯೋಜಿಸಲಾಗಿದೆ ಎಂದು ಪ್ರಾದೇಶಿಕ ಭವಿಷ್ಯ ನಿಧಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಆಯುಕ್ತ ಕೆ.ವಿ ಪ್ರವೀಣ್ ಅವರು ತಿಳಿಸಿದ್ದಾರೆ.

ಕಾರ್ಮಿಕರ, ಪಿಂಚಣಿದಾರರ ಮತ್ತು ಉದ್ಯೋಗದಾತರರಕುಂದು ಕೊರತೆ ಪರಿಹಾರ, ಮಾಹಿತಿ ವಿನಿಮಯ ಮಾಡಿಕೊಳ್ಳಬಹುದು. ಉದ್ಯೋಗದಾತರ ಕರ್ತವ್ಯ ಮತ್ತು ಜವಾಬ್ದಾರಿಗಳ ಕುರಿತು ಅರಿವು, ಕಾರ್ಮಿಕರಿಗೆ, ಉದ್ಯೋಗದಾತರಿಗೆ, ಪ್ರಧಾನ ಉದ್ಯೋಗದಾತರಿಗೆ ಮತ್ತು ಗುತ್ತಿಗೆದಾರರಿಗೆ ಲಭ್ಯವಿರು ಆನ್‌ಲೈನ್ ಸೇವೆಗಳ ಮಾಹಿತಿ, ಹೊಸ ಉಪಕ್ರಮಗಳು ಹಾಗೂ ಸುಧಾರಣೆ ಕ್ರಮಗಳ ಕುರಿತು ಮಾಹಿತಿ ಒದಗಿಸುವ ಕಾರ್ಯಕ್ರಮವಾಗಿದೆ.

ಕಾರ್ಮಿಕರು, ಪಿಂಚಣಿದಾರರು, ಉದ್ಯೋಗದಾತರು ಜು.28 ರಂದು ನಡೆಯುವ ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜು.17 ರಂದು ಸಮಗ್ರ ಮಕ್ಕಳ ರಕ್ಷಣಾ ಯೋಜನೆ ಕುರಿತು ಪ್ರಗತಿ ಪರಿಶೀಲನಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.15-ಜಿಲ್ಲಾ ಮಕ್ಕಳ ರಕ್ಷಣಾ ಘಟಕ ವತಿಯಿಂದ ಜು.16 ರಂದು ನಡೆಯಬೇಕಾಗಿದ್ದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯನ್ನು ಕಾರಣಂತರಗಳಿಂದ ಮುಂದೂಡಲಾಗಿದ್ದು, ಸಭೆಯನ್ನು ಜು.17 ರಂದು ಮದ್ಯಾಹ್ನ 03 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯ ಬಾಲ್ಯವಿವಾಹ ಕುರಿತು ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ತಿಳಿಸಿದ್ದಾರೆ.

# ಜು.22 ರಂದು ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆ

ಬಳ್ಳಾರಿ,ಜು.15-ಜಿಲ್ಲೆಯ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶ ಸೇರಿದಂತೆ) ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಜು.22 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಪಂಚಾಯತ್‌ನ ನಜೀರ್‌ಸಾಬ್ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಕರ್ನಾಟಕ (20 ಅಂಶ) ಅನುಷ್ಠಾನ ಸಮಿತಿಯ ಸದಸ್ಯ ಕಾರ್ಯದರ್ಶಿಯೂ ಆದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೈರ್ ಅವರು ತಿಳಿಸಿದ್ದಾರೆ.

## ರೇವಣಸಿದ್ದೇಶ್ವರ ಜಾತ್ರಾ ಮಹೋತ್ಸವದ

### ಅಂಗವಾಗಿ ಜುಲೈ 22 ರಂದು ಪೂರ್ವಭಾವಿ ಸಭೆ

ಕಲಬುರಗಿ: ಜು.15-ಕಾಳಗಿ ತಾಲೂಕಿನ ರೇವಗ್ಗಿ (ರಟಕಲ್) ಶ್ರೀರೇವಣಸಿದ್ದೇಶ್ವರದೇವಸ್ಥಾನದ ಜಾತ್ರಾಮಹೋತ್ಸವದ ಅಂಗವಾಗಿ ಶ್ರಾವಣ ಮಾಸ ಮೂರನೇ ಸೋಮವಾರ ದಿನಾಂಕ: 11-08-2025 ಜರುಗಲಿರುವ ಪ್ರಯುಕ್ತ ಈ ಸಂದರ್ಭದಲ್ಲಿ ಮುಂಜಾಗ್ರತಾ ಅವಶ್ಯಕ ಕ್ರಮ ಕೈಗೊಳ್ಳುವ ಕುರಿತು ಚರ್ಚಿಸಲು ಹಾಗೂ ನಿರ್ಣಯಗಳಿಗಾಗಿ ಇದೇ ಜುಲೈ 22 ರಂದು ಮಧ್ಯಾಹ್ನ 1 ಗಂಟೆಗೆ ದೇವಸ್ಥಾನದ ಆವರಣದಲ್ಲಿ ಪೂರ್ವಭಾವಿ ಸಭೆ ಜರುಗಲಿದೆ ಎಂದು ಸೇಡಂ ಸಹಾಯಕ ಆಯುಕ್ತರು ಹಾಗೂ ಕಾಳಗಿ ತಾಲೂಕಿನ ರೇವಗ್ಗಿ (ರಟಕಲ್) ಶ್ರೀ ರೇವಣಸಿದ್ದೇಶ್ವರದೇವಸ್ಥಾನದ ಆಡಳಿತಾಧಿಕಾರಿಗಳು ತಿಳಿಸಿದ್ದಾರೆ.

# ಅವಶ್ಯಕತೆಯುಳ್ಳವರು ಇಂದಿರಾ ಕ್ಯಾಂಟೀನ್ ಸದುಪಯೋಗ ಪಡೆಯಿರಿ : ದರ್ಶನಾಪುರ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ನಗರದಲ್ಲಿ ಬಹುದಿನಗಳ ನಂತರ ಇಂದಿರಾ ಕ್ಯಾಂಟೀನ್ ಆರಂಭವಾಗಿದೆ, ಆರ್ಥಿಕವಾಗಿ ಅನುಕೂಲವಿಲ್ಲದವರು, ಬಡವರ್ಗದವರು ಇದರ ಉಪಯೋಗ ಪಡೆದ-ರೆ ಯೋಜನೆಯ ಉದ್ದೇಶ ಸಾರ್ಥಕವಾಗುತ್ತದೆ ಎಂದು ಸಚಿವ ಶರಣಬಸಪ್ಪಗೌಡ ದರ್ಶನಾಪುರ ತಿಳಿಸಿದರು.

ನಗರದ ಹೊಸಬಸ್ ನಿಲ್ದಾಣದ ಆವರಣದಲ್ಲಿ ನೂತನವಾಗಿ ಇಂದಿರಾ ಕ್ಯಾಂಟೀನ್ ಉದ್ಘಾಟಿಸಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಸದಾಕಾಲ ಆರ್ಥಿಕವಾಗಿ ತೊಂದರೆಯಲ್ಲಿರುವ ಜನತೆಗೆ ಉತ್ತಮ ರೀತಿಯ ಬದುಕಿಗೆ ಸಹಕರಿಸಲು ಸಾಕಷ್ಟು ಯೋಜನೆ ತಂದಿದ್ದು, ಅದರಲ್ಲಿ ಇಂದಿರಾ ಕ್ಯಾಂಟೀನ್ ಮುಖ್ಯವಾಗಿದ್ದು, ಹಸಿದವರಿಗೆ ಕಡಿಮೆ ದರದಲ್ಲಿ ಶುದ್ಧ ಉಪಹಾರ ಮತ್ತು ಊಟದ ವ್ಯವಸ್ಥೆಯ ಅನುಕೂಲ ಕಲ್ಪಿಸಿದೆ. ನಗರದಲ್ಲಿ ಸುಮಾರು 87 ಲಕ್ಷ ವೆಚ್ಚದಲ್ಲಿ ಕ್ಯಾಂಟೀನ್ ನಿರ್ಮಾಣವಾಗಿದ್ದು, ಕಡಿಮೆ ದರದಲ್ಲಿ ನಿಗದಿತ ಸಮಯದಲ್ಲಿ, ಸೌಲಭ್ಯ ದೊರಕಲಿ ಇರುವ ಯೋಜನೆಯ ಸಾರ್ಥಕಪಡಿಸಿಕೊಳ್ಳುವ ಜವಾಬ್ದಾರಿ ಸಾರ್ವಜನಿಕರದ್ದಾಗಿದೆ ಮತ್ತು ಇಂದಿರಾ ಕ್ಯಾಂಟೀನ್ ಜವಾಬ್ದಾರಿ ಹೊತ್ತವರು ಶುಚಿತ್ವದ ಕಡೆ ಹೆಚ್ಚು ಗಮನ ನೀಡಬೇಕೆಂದು ತಿಳಿಸಿದ ಅವರು, ಬರುವ ದಿನಗಳಲ್ಲಿ ಕೆಂಭಾವಿ, ಹುಣಸಗಿ ಸೇರಿದಂತೆ ಇತರ ಕೇಂದ್ರಗಳಲ್ಲಿ ಇಂದಿರಾ ಕ್ಯಾಂಟೀನ್ ಆರಂಭವಾಗಲಿವೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಎಸ್‌ಬಿಎಂ 1.0 ಉಳಿತಾಯ ಯೋಜನೆ ಅಡಿಯಲ್ಲಿ ನಗರಸಭೆ ವತಿಯಿಂದ ಖರೀದಿಸಲಾದ ವಾಹನಗಳಿಗೆ ಸಚಿವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು. ಜಿಲ್ಲಾಧಿಕಾರಿ ಬೋಯರ್ ಹರ್ಷಲ್ ನಾರಾಯಣರಾವ್ ಉಪಸ್ಥಿತರಿದ್ದು ಸೂಕ್ತ ಸಲಹೆ ನೀಡಿದರು. ಉದ್ಘಾಟನಾ ಸಮಾರಂಭದಲ್ಲಿ ತಹಶೀಲ್ದಾರ ಉಮಾಕಾಂತ ಹಳ್ಳೆ, ಯೋಜನಾ ನಿರ್ದೇಶಕ ಲಕ್ಷ್ಮಿಕಾಂತರೆಡ್ಡಿ, ನಗರಸಭೆ ಅಧ್ಯಕ್ಷ ಮೆಹರುನ್ ಬೇಗಂ ಲಿಯಾಖತ್ ಪಾಷಾ, ನಗರ ಯೋಜನೆ ಪ್ರಾಧಿಕಾರ ಅಧ್ಯಕ್ಷ ಸಿದ್ದಣ್ಣ ಆರಬೋಳ, ಉಪಾಧ್ಯಕ್ಷ ಭೀಮಬಾಯಿ, ದೇವಿಂದ್ರಪ್ಪ, ಕೆ.ಜೀವನ ಪೌರಾಯುಕ್ತರು, ಆಶ್ರಯ ಸಮಿತಿಯ ಅಧ್ಯಕ್ಷ ವಸಂತ ಸುರಪುರಕರ, ವಾರ್ಡ್‌ಸದಸ್ಯೆ ಹೊನ್ನಮ್ಮ.ಬಿ.ಕದರಾಪುರ, ಪ್ರಮುಖರಾದ ಶರಣಪ್ಪಸಲಾದಪುರ, ವಿಶ್ವನಾಥರೆಡ್ಡಿ ದರ್ಶನಾಪುರ, ಸಲೀಂ ಸಂಗ್ರಾಮ, ರಾಯಪ್ಪಗೌಡ ಹುಡೇದ, ನೀಲಕಂಠ ಬಡಿಗೇರ, ಇಬ್ರಾಹಿಂ ಶಿರವಾಳ, ಬಸವರಾಜ ಹೇರುಂಡಿ, ಇಸಹಾಕ್ ಹುಸೇನ ಖಾಲೀದ, ನಾನಾಸಾಹೇಬ, ವಿಜಯಕುಮಾರ, ಸೇರಿದಂತೆ ನಗರಸಭೆ ಸದಸ್ಯರು, ನಾಮ ನಿರ್ದೇಶಕ ಸದಸ್ಯರು, ನಗರಸಭೆ ಸಿಬ್ಬಂಧಿ ವರ್ಗದವರು, ಮಹಿಳಾ ಸ್ವಸಹಾಯ ಸಂಘದವರು, ಸಾರ್ವಜನಿಕರು ಇದ್ದರು.

# 90 ದಿನಗಳು ದೇಶಕ್ಕಾಗಿ

## ಘೋಷವ್ಯಾಕದಡಿ ವಿಶೇಷ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರುಜುಲೈ15-ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ದೇಶದ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇರುವ ಮಧ್ಯಸ್ಥಿಕೆ ಮೂಲಕ ರಾಜಿ ಆಗಬಹುದಾದ ಪ್ರಕರಣಗಳ ಕುರಿತು 90 ದಿನಗಳು ದೇಶಕ್ಕಾಗಿ ಎಂಬ ಘೋಷವ್ಯಾಕದೊಂದಿಗೆ ವಿಶೇಷ ಮಧ್ಯಸ್ಥಿಕೆಯ ಅಭಿಯಾನ ಆಯೋಜಿಸಲಾಗಿದೆ.

ಈ ಮಧ್ಯಸ್ಥಿಕೆಯ ಅಭಿಯಾನವು ರಾಯಚೂರ ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿ ಸಹ ನಡೆಯಲಿದೆ.

ರಾಜಿ ಆಗಬಹುದಾದ ಪ್ರಕರಣಗಳನ್ನು ಮಧ್ಯಸ್ಥಿಕೆ ಕೇಂದ್ರಗಳಿಗೆ ಕಳುಹಿಸಿ ಅಲ್ಲಿ ವಿಶೇಷ ತರಬೇತಿ ಹೊಂದಿದ ಮಧ್ಯಸ್ಥಿಕೆಗಾರರಿಂದ ರಾಜಿಸಂಧಾನ ಮಾಡಿಸುವ ವ್ಯವಸ್ಥೆ ಇದಾಗಿದೆ. ಕಕ್ಷಿದಾರರು ಈ ಅಭಿಯಾನದ ಸದುಪಯೋಗಪಡೆದುಕೊಳ್ಳಬೇಕು ಎಂದರು.

ಮಾಹಿತಿಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ತಾಲ್ಲೂಕು ಕಾನೂನು ಸೇವಾ ಸಮಿತಿಗಳಾದ ಸಿಂಧನೂರು, ಲಿಂಗಸೂಗೂರು, ಮಾನವಿ, ದೇವದುರ್ಗ ಕಚೇರಿಗಳನ್ನು ಸಂಪರ್ಕಿಸಬಹುದು ಎಂದು ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಎಚ್.ಎ. ಸಾತ್ವಿಕ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೈ ಕರ್ನಾಟಕ ಸಂಘಟನೆ ವತಿಯಿಂದ ಜೆಸ್ಕಾಂ ಅಧಿಕಾರಿಗಳಿಗೆ ಸೋಪಣ್ಣ ಸಗರ್ ಮನವಿ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ ತಾಲೂಕಿನಲ್ಲಿ ಬರುವ ಗ್ರಾಮಗಳಲ್ಲಿ ವಿದ್ಯುತ್ ಕಂಬಗಳು ಹಾಗೂ ವೈರಗಳು ಬೀಳುವ ಸ್ಥಿತಿಯಲ್ಲಿದ್ದು ಅವುಗಳನ್ನು ದುರಸ್ತಿ ಮಾಡಲು ಮಾನ್ಯ ಸಹಾಯಕ ಕಾರ್ಯನಿರ್ವಾಹಕ

ಅಭಿಯಂತರರು ಜೆಸ್ಕಾಂ ಉಪವಿಭಾಗ ಶಹಾಪುರ ಇವರಿಗೆ ಮನವಿ ಸಲ್ಲಿಸಲಾಯಿತು ಕೂಡಲ ಸಂಬಂಧ ಪಟ್ಟ ಅಧಿಕಾರಿಗಳು ಇತ್ತ ಗಮನ ಹರಿಸಿ ಜನರಿಗೆ ಅನುಮಾಡಿಕೊಡುವಂತೆ ಶಹಾಪುರ ತಾಲೂಕು ಅಧ್ಯಕ್ಷ

ಸೋಪಣ್ಣ ಹಳಿಸಗರ ನೇತೃತ್ವದಲ್ಲಿ ಮನವಿ ಸಲ್ಲಿಸಲಾಯಿತು. ಈ

ಸಂದರ್ಭದಲ್ಲಿ ಯಾದಗಿರಿ ಜಿಲ್ಲಾ ಕಾರ್ಯಾಧ್ಯಕ್ಷ ರವಿಕುಮಾರನಾಯಕ ಬೈರಿಮರಡಿ, ಜಿಲ್ಲಾ ಉಪಾಧ್ಯಕ್ಷ ನಾಗರಾಜ ಪೂಜಾರಿ ಖಾನಾಪುರ. ತಾಲೂಕು ಗೌರವಾಧ್ಯಕ್ಷ ಭೀಮಣ್ಣ ನಾಯಕ ಬಿದರಾಣಿ, ತಾಲೂಕು ಕಾರ್ಯದರ್ಶಿ ಯಲ್ಲಾಲಿಂಗ ನಾಯಕ ಇಬ್ರಾಹಿಂಪೂರ, ತಾಲೂಕ ಸಹ ಕಾರ್ಯದರ್ಶಿ ಮಂಜು ದೊರೆ ದೋರನಹಳ್ಳಿ. ವೆಂಕಟೇಶ ಮಾಸ್ಟರ್ ದೇವಿಕೇರಾ. ಸಾಹೇಬಣ್ಣ ಬೈರಿಮರಡಿ ಇದ್ದರು.

# ಅನೀಮಿಯ ಮುಕ್ತ ಪೌಷ್ಟಿಕ ಕರ್ನಾಟಕ ಕಾರ್ಯಕ್ರಮದಡಿ ರಕ್ತ ಹೀನತೆ ಇರುವ ಶಾಲಾ ಮಕ್ಕಳ ವಿಶೇಷ ಆರೋಗ್ಯ ತಪಾಸಣಾ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು :ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಹಮ್ಮಿಕೊಳ್ಳಲಾಯಿತು. ಅನೀಮಿಯಾ ಮುಕ್ತ ಪೌಷ್ಟಿಕ ಕರ್ನಾಟಕ ಅಭಿಯಾನ ದಲ್ಲಿ ಎಲ್ಲಾ ಶಾಲಾ ಮಕ್ಕಳಿಗೆ ಹಿಮೋಗ್ಲೋಬಿನ್ ಪರೀಕ್ಷಿಸುವ ಕಾರ್ಯ ಪ್ರಗತಿಯಲ್ಲಿದೆ. ಪ್ರಸ್ತುತ ಗುರುತಿಸಲ್ಪಟ್ಟ ತೀವ್ರ ರಕ್ತ ಹೀನತೆ ಇರುವ ವಿದ್ಯಾರ್ಥಿಗಳಿಗೆ ಮಕ್ಕಳ ತಜ್ಞರಿಂದ ಆರೋಗ್ಯ ತಪಾಸಣೆ ಮತ್ತು ಮರು ಹೀಮೋಗ್ಲೋಬಿನ್ ಪರೀಕ್ಷಿಸುವ ಮೂಲಕ ಸೂಕ್ತ ಚಿಕಿತ್ಸೆ ನೀಡುವುದಾಗಿ ಮುಖ್ಯ ವೈದ್ಯಾಧಿಕಾರಿ ಡಾ: ರುದ್ರಗೌಡ ಪಾಟೀಲ ತಿಳಿಸಿದರು. ಇಂದಿನ ಶಿಬಿರ ದಲ್ಲಿ ಇಪ್ಪತ್ತಾರು ಮಕ್ಕಳಿಗೆ ಅಗತ್ಯ ಔಷಧ ಚಿಕಿತ್ಸೆ ಪೌಷ್ಟಿಕ ಆಹಾರ ಸಲಹೆ ನೀಡಲಾಗಿದೆ. ಒಬ್ಬ ವಿದ್ಯಾರ್ಥಿಗೆ ರಕ್ತ ಹೀನತೆ ಮತ್ತು ಸಕ್ಕರೆ ಕಾಯಿಲೆ ಇರುವುದರಿಂದ ಹೆಚ್ಚಿನ ಚಿಕಿತ್ಸೆಗೆ ಜಿಲ್ಲಾ ಆಸ್ಪತ್ರೆಗೆ ಶಿಫಾರಸ್ಸು ಮಾಡಲಾಯಿತು. 6 ಗ್ರಾಂ ಗಿಂತ ಕಡಿಮೆ ಹಿಮೋಗ್ಲೋಬಿನ್ ಇರುವ ಇಬ್ಬರಿಗೆ ರಕ್ತ ವರ್ಗಾವಣೆ ಕಲ್ಪಿಸುವುದಾಗಿ ಮಕ್ಕಳ ತಜ್ಞ ವೈದ್ಯ ಡಾ: ಸಂಜೀವರೆಡ್ಡಿ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಡಾ: ಸೂಗೂರೇಶ್.ಡಾ:ಶಂಕರಾಚಾರ್ಯ. ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ್ ಜೋಶಿ. ಆಪ್ತಸಮಾಲೋಚಕರಾದ ಹುಚ್ಚಪ್ಪ. ಗೌರಮ್ಮ. ಶುಶ್ರೂಷಕರಾದ ರೇಷ್ಮಾ. ಫಿಲೋಮಿನಾ. ಶಾಲಾ ಮಕ್ಕಳು ಪಾಲಕರು ಸೇರಿದಂತೆ ಉಪಸ್ಥಿತರಿದ್ದರು

# ಜುಲೈ 16 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಕಲಬುರಗಿ,ಜು.15-ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ-1ರ ಕಲಬುರಗಿ ಪಶ್ಚಿಮ ವಿದ್ಯುತ್ ವಿತರಣಾ ಕೇಂದ್ರದಲ್ಲಿ 10 ಎಮ್.ವಿ.ಎ. ಪರಿವರ್ತಕ 1ರ, 2ನೇ ತ್ರೈಮಾಸಿಕ ನಿರ್ವಹಣೆ ಕಾರ್ಯಕೈಗೊಂಡಿರುವ ಪ್ರಯುಕ್ತ ಸದರಿ ವಿತರಣಾ ಕೇಂದ್ರದಿಂದ ಹೊರಹೋಗುವ 11ಕೆವಿ ಫೀಡರ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮಗಳಲ್ಲಿ ಇದೇ ಜುಲೈ 16 ರಂದು ಬೆಳ್ಳಿಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಕಾರಣ ಎಲ್ಲಾ ಗ್ರಾಹಕರು ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ-1ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

# ಸಜ್ಜನ, ಪ್ರಾಮಾಣಿಕ ರಾಜಕಾರಣಿ ಪಿ.ಎಚ್.ಪೂಜಾರ

**(ಪಿ.ಎಚ್.ಪೂಜಾರ ರಾಜಕೀಯದಲ್ಲಿ ಅನೇಕ ಕಠಿಣ ಪ್ರಸಂಗಗಳನ್ನು ಎದುರಿಸಿದರೂ ಅವುಗಳ ಆಳದಲ್ಲೇ ಗಟ್ಟಿಗೊಂಡವರು. ಜುಲೈ 16 ಅವರ 71 ನೇ ಹುಟ್ಟು ಹಬ್ಬ.**



ಬಾಗಲಕೋಟೆ,ಜು.15-'ಜನರನ್ನು ಎದುರು ಹಾಕಿಕೊಳ್ಳಬೇಕಾದೀತೆಂದು ಸತ್ಯವನ್ನು ಅವಮಾನಗೊಳಿಸಬೇಡ' ಎಂಬ ರವೀಂದ್ರನಾಥ ಠ್ಯಾಗೋರ ಅವರ ಮಾತಿನಂತೆ ನಡೆಯುವವರು ಸಮಾಜದಲ್ಲಿ ಅತೀ ವಿರಳ. ಅಂತಹ ವಿರಳ ವ್ಯಕ್ತಿಗಳಲ್ಲಿ ವಿಧಾನ ಪರಿಷತ್ ಸದಸ್ಯ ಪ್ರಲ್ಹಾದ.ಎಚ್.ಪೂಜಾರ ಒಬ್ಬರು. ಜೀವನದುದ್ದಕ್ಕೂ ತಾವು ನಂಬಿದ ತತ್ವಗಳಲ್ಲಿ ಬದುಕುತ್ತಿರುವವರು.

ಪೂಜಾರ ಅವರು ಹೃದಯವಂತ ರಾಜಕಾರಣಿ. ಬಹುಮುಖ ಪ್ರತಿಭೆಯ ಸ್ನೇಹ ಜೀವಿ. ತಮ್ಮ ಬಳಿ ಬಂದವರೆಲ್ಲರ ಯೋಗಕ್ಷೇಮ ವಿಚಾರಿಸುವ ಮಾನವೀಯ ಗುಣಗಳನ್ನು ಬೆಳೆಸಿಕೊಂಡವರು. ಪೂಜಾರ ಎನ್ನುವುದು ಆತ್ಮೀಯತೆಯಿಂದ ಕೂಡಿದ ಪದ. ಇದರಲ್ಲಿ ಪೂಜೆ ಇದೆ, ಆಧ್ಯಾತ್ಮ ಇದೆ. ನಡೆ, ನುಡಿ, ಸ್ನೇಹಗಳಲ್ಲಿ ಪೂಜಾರ ಅವರದು ಸಂತಸಗೊಳಿಸುವ ವ್ಯಕ್ತಿತ್ವ. ಅವರಲ್ಲಿ ಮಗುವಿನ ಮುಗ್ಧತೆ ಇದೆ.

ಇನ್ನೇನು ಪೂಜಾರವರ ರಾಜಕೀಯ ಭವಿಷ್ಯವೇ ಮುಗಿಯಿತು ಎಂದು ಅಣಕವಾಡಿದವರಿಗೆ ಅವರ 17 ವರ್ಷಗಳ ರಾಜಕೀಯ ವನವಾಸ ಕೊನೆಗೊಂಡು ವಿಧಾನ ಪರಿಷತ್ ಸದಸ್ಯರಾಗುವುದರ ಮೂಲಕ ಉತ್ತರ ನೀಡಿದ್ದಾರೆ. ಸದಾ ಅಭಿವೃದ್ಧಿಯ ಚಿಂತನೆ ಅವರಲ್ಲಿದೆ. ಚೈತನ್ಯಶೀಲ, ಸೃಜನಶೀಲ, ಕ್ರೀಯಾಶೀಲ ಜನನಾಯಕರಾಗಿರುವ ಪಿ.ಎಚ್.ಪೂಜಾರ ಅವರದು ಸರಳ ಜೀವನ, ಉದಾತ್ತ ವಿಚಾರ. ಜನರೊಂದಿಗೆ ಅವರು ನಡೆದುಕೊಂಡಿರುವ ವಿಶೇಷಗುಣವೇ ಅವರನ್ನು ರಾಜಕೀಯದಲ್ಲಿ ಉಳಿಸಿ ಮತ್ತೇ ಬೆಳೆಸಿತು.

ತತ್ವ, ಆದರ್ಶ, ಉತ್ತಮ ಮೌಲ್ಯಗಳಿಗೆ ಬೆಲೆ ಕೊಡುವ ಪೂಜಾರ, ಅವುಗಳನ್ನು ಬದುಕಿನಲ್ಲಿ ಮೈಗೂಡಿಸಿಕೊಂಡು ಬೆಳೆದವರು. ಜೀವನದಲ್ಲಿ ಸಾಕಷ್ಟು ಅನಿರೀಕ್ಷಿತ ಘಟನೆಗಳನ್ನು ಕಂಡರೂ ಧೃತಿಗೆಡದೇ ತಾಳ್ಮೆಯಿಂದ ಸಮಸ್ಯೆಗಳನ್ನು ಎದುರಿಸಿ ಜಯಶಾಲಿಯಾದವರು.

ರಾಜಕೀಯದಲ್ಲಿ ಸಾಕಷ್ಟು ಏಳು-ಬೀಳುಗಳನ್ನು ಕಂಡರೂ ಪೂಜಾರ ಆತ್ಮವಿಶ್ವಾಸ ಕಳೆದುಕೊಳ್ಳಲಿಲ್ಲ. 17 ವರ್ಷ ರಾಜಕೀಯ ವನವಾಸ ಅನುಭವಿಸಿ ವಿಜಯಪುರ-ಬಾಗಲಕೋಟೆ ಅವಳಿ ಜಿಲ್ಲೆಗಳ ಪ್ರತಿನಿಧಿಯಾಗಿ ವಿಧಾನ ಪರಿಷತ್ತಿಗೆ ಆಯ್ಕೆಯಾದರು. ಇದು ಅವರ ರಾಜಕೀಯ ಜೀವನದ ಹೊಸ ತಿರುವು ಎಂದರೂ ತಪ್ಪಾಗದು. ಕೃಷ್ಣಾ ಮೇಲ್ದಂಡೆ ಯೋಜನೆಯ ಸಂತ್ರಸ್ಥರ ಬಗ್ಗೆ ಅಪಾರ ಕಳಕಳಿ ಹೊಂದಿರುವ ಪೂಜಾರ, ಈ ಹಿಂದೆ ಬಾಗಲಕೋಟೆ ಶಾಸಕರಾಗಿದ್ದಾಗ ಸಂತ್ರಸ್ಥರ ಪರವಾಗಿ ಮಾಡಿರುವ ಹೋರಾಟ ಸದಾ ಸ್ಮರಣೀಯ.

ರಾಜಕೀಯದ ಹೊರತಾಗಿಯೂ ಸಾಮಾಜಿಕ ಕಳಕಳಿಯುಳ್ಳ ವ್ಯಕ್ತಿಯಾಗಿರುವ ಪಿ.ಎಚ್.ಪೂಜಾರ, ಯಾರು ಇಲ್ಲದ ನಿರ್ಗತಿಕರ ತುತ್ತಿನ ಚೀಲ ತುಂಬಿಸಿ ಕರುಣಾಮಯಿ ಎನಿಸಿಕೊಂಡಿದ್ದಾರೆ. ತಮ್ಮ ಹೆಸರಿನ ಚಾರಿಟೇಬಲ್ ಟ್ರಸ್ಟ್ ಮೂಲಕ 'ಕರುಣೆಯ ತುತ್ತು' ಎನ್ನುವ ಯೋಜನೆಯ ಮೂಲಕ ನಿರ್ಗತಿಕರ ಮನೆ ಬಾಗಿಲಿಗೆ ಊಟ ಕಳಿಸಿ ತಮ್ಮ ಹೃದಯ ವೈಶಾಲ್ಯತೆ ತೋರುತ್ತಿರುವ ಅವರು, ಅಪರೂಪದ ರಾಜಕಾರಣಿ ಎಂದೆನಿಸಿಕೊಂಡಿದ್ದಾರೆ. ಕಲಾದಗಿಯಲ್ಲಿ ಉರ್ದು ಪ್ರೌಢಶಾಲೆ, ಬಿಟಿಡಿಎ, ತುಳಸಿಗೇರಿ, ಸೀಮಿಕೇರಿ, ಇಲಾಳ, ತಳಗಿಹಾಳ ಮನರವಸತಿ ಕೇಂದ್ರಗಳಲ್ಲಿ ಸರಕಾರದಿಂದ ಪ್ರೌಢಶಾಲೆಗಳನ್ನು ಮಂಜೂರು ಮಾಡಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ.

1954 ರಲ್ಲಿ ಜನಿಸಿದ ಪಿ.ಎಚ್.ಪೂಜಾರ, ಬಿ.ಎಸ್.ಸಿ.ಎಲ್.ಎಲ್.ಬಿ ಪದವೀಧರರು. 1972 ರಲ್ಲಿ ಜನಸಂಘದ ಯುವ ಮೋರ್ಚಾದ ಕಾರ್ಯದರ್ಶಿಯಾಗುವುದರ ಮೂಲಕ ರಾಜಕೀಯ ಪ್ರವೇಶಿಸಿ ಕಳೆದ 53 ವರ್ಷಗಳಿಂದ ಅನ್ಯಾಯದ ವಿರುದ್ಧ ಹೋರಾಟ ಮಾಡುತ್ತಾ ಬಂದಿದ್ದಾರೆ. ಹಲವಾರು ಏಳು ಬೀಳುಗಳನ್ನು ಕಂಡಿದ್ದಾರೆ, ಕಷ್ಟಗಳನ್ನು ಅನುಭವಿಸಿದ್ದಾರೆ. ಆದರೂ ತಮ್ಮ ಸಾತ್ವಿಕತೆಯನ್ನು ಬಿಟ್ಟುಕೊಟ್ಟಿಲ್ಲ. ಒಳ್ಳೆಯದರ ಬಗ್ಗೆ ವಿಶ್ವಾಸವಿಟ್ಟು ಜನಸಾಮಾನ್ಯರ ಕೆಲಸಗಳನ್ನು ಮಾಡುವ ಅಪರೂಪದ ವ್ಯಕ್ತಿಯಾಗಿದ್ದಾರೆ.

ಬಾಗಲಕೋಟೆ ನಗರ ಹಾಗೂ ಹಳ್ಳಿಗಳ ಸಂತ್ರಸ್ಥರ ಪುನರ್ ವಸತಿ ಹಾಗೂ ಪುನರ್ ನಿರ್ಮಾಣಕ್ಕೆ ಅಂದಿನ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರನ್ನು 638 ಕೋಟಿ ರೂ.ಗಳ ಪ್ಯಾಕೇಜಿಗೆ ಒತ್ತಾಯಿಸಿ ಗಮನ ಸೆಳೆದು ಸರಕಾರದಿಂದ ಪ್ಯಾಕೇಜ್ ಘೋಷಣೆ ಮಾಡಿಸಿದ ಶ್ರೇಯಸ್ಸು ಪೂಜಾರ ಅವರಿಗೆ ಸಲ್ಲುತ್ತದೆ. ಅಪ್ಪಟ ಹಿಂದುತ್ವವಾದಿಯಾಗಿದ್ದರೂ ಎಲ್ಲ ಪಕ್ಷಗಳ ನಾಯಕರ ಜೊತೆ ಉತ್ತಮ ಬಾಂಧವ್ಯ ಇಟ್ಟುಕೊಂಡಿರುವ ಅವರು, ಜನರ ಸಮಸ್ಯೆ ಪರಿಹಾರದ ವಿಷಯದಲ್ಲಿ ಎಂದಿಗೂ ರಾಜೀ ಮಾಡಿಕೊಂಡವರಲ್ಲ.

ಸದಾ ಜನಸಾಮಾನ್ಯರ ಏಳಿಗೆ, ಸಮಾಜದ ಅಭಿವೃದ್ಧಿಯ ಕನಸನ್ನು ಹೊತ್ತು ಸಾಗುತ್ತಿರುವ ಪಿ.ಎಚ್.ಪೂಜಾರ ಅವರಿಗೆ ಈಗ (16-07-2025) 71 ವಯಸ್ಸು. ಇನ್ನೂ ಚಟುವಟಿಕೆಯ ಚಿಲುಮೆಯಾಗಿ ಪಾದರಸದಂತೆ ಓಡಾಡಿ ಜನಪರ ಕಾಳಜಿ ತೋರುತ್ತಿರುವ ಅವರಿಗೆ ದೇವರು ಒಳ್ಳೆಯದನ್ನು ಮಾಡಲಿ, ಜನರ ಕಷ್ಟ, ಕಾರ್ಪಣ್ಯಗಳನ್ನು ಪರಿಹರಿಸುವ ಶಕ್ತಿ ನೀಡಲಿ, ಅವರು ನೂರ್ಕಾಲ ಬಾಳಿ ಬದುಕಲಿ, ಸಮಾಜಕ್ಕೆ ಅವರ ಸೇವೆ ನಿರಂತರವಾಗಿ ದೊರೆಯುಂತಾಗಲಿ ಎಂಬುದು ಅವರ ಅಭಿಮಾನಿಗಳ ಆಶಯ.



**ಜಗದೀಶ ಹದ್ಲಿ**
**ತಿಮ್ಮಾಪೂರ,**
**ತಾ.ಹುನಗುಂದ**

# ನಾಳೆ ಬಾದಾಮಿಗೆ ನಿಖಿಲ್ ಕುಮಾರಸ್ವಾಮಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.15-ಜಿಲ್ಲೆಯ ಬಾದಾಮಿ ಪಟ್ಟಣದಲ್ಲಿ ಜು.17 ರಂದು ಜೆಡಿಎಸ್ ಬಾದಾಮಿ ಘಟಕದ ವತಿಯಿಂದ ನಡೆಯಲಿರುವ ಬಾದಾಮಿ ವಿಧಾನಸಭಾ ಮತಕ್ಷೇತ್ರದ ಕಾರ್ಯಕರ್ತರ ಸಭೆ ಹಾಗೂ ಪಕ್ಷದ ನೋಂದಣಿ ಅಭಿಯಾನ ಉದ್ಘಾಟನಾ ಕಾರ್ಯಕ್ರಮಕ್ಕೆ ಜೆಡಿಎಸ್ ಯುವ ಘಟಕದ ರಾಜ್ಯ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆಗಮಿಸಲಿದ್ದಾರೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಹನಮಂತ ಮಾವಿನಮರದ ತಿಳಿಸಿದರು.

ಮಂಗಳವಾರ ಬಾದಾಮಿ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜು.17 ಗುರುವಾರ ಬೆಳಿಗ್ಗೆ 10.30 ಗಂಟೆಗೆ ಎಸ್.ವ್ಹಿ.ಪಿ.ಸಂಸ್ಥೆಯ ಬಸವಭವನದಲ್ಲಿ ನಡೆಯುವ ಕಾರ್ಯಕ್ರಮವನ್ನು ನಿಖಿಲ ಕುಮಾರಸ್ವಾಮಿ ಉದ್ಘಾಟಿಸುವರು ಎಂದು ಹೇಳಿದರು.

ಪಕ್ಷದ ಸಂಘಟನೆಗೆ ಒತ್ತು ನೀಡಿದ್ದು, ಡಿಜಿಟಲ್ ತಂತ್ರಜ್ಞಾನದ ಮೂಲಕ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿದೆ. 58 ದಿನಗಳ ಕಾಲ 100 ಮತಕ್ಷೇತ್ರದಲ್ಲಿ 50 ಲಕ್ಷ ಜನರ ನೋಂದಣಿ ಮಾಡಲಾಗುವುದು. ಈಗಾಗಲೇ 35 ಕ್ಷೇತ್ರದಲ್ಲಿ ಪ್ರವಾಸ ಮಾಡಲಾಗಿದೆ. ಜೆಡಿಎಸ್ ಪಕ್ಷಕ್ಕೆ ಈಗಿರುವ ಜನರ ಬೆಂಬಲ, ಕಾರ್ಯಕರ್ತರ ಹುಮ್ಮಸ್ಸು ನೋಡಿದರೆ ಮುಂಬರುವ ದಿನಗಳಲ್ಲಿ ಕುಮಾರಸ್ವಾಮಿ ಮತ್ತೆ ರಾಜ್ಯದ ಮುಖ್ಯಮಂತ್ರಿಯಾಗುವುದು ನಿಶ್ಚಿತ ಎಂದು ಮಾವಿನಮರದ ಹೇಳಿದರು.

ಜು.17 ರ ಸಭೆಯಲ್ಲಿ 10 ಸಾವಿರ ಜನರು ಭಾಗವಹಿಸಲಿದ್ದಾರೆ. ಬಾದಾಮಿ ನಗರದ ಪ್ರಮುಖ ರಸ್ತೆಯಲ್ಲಿ ನಿಖಿಲ್ ಕುಮಾರಸ್ವಾಮಿ ಮೆರವಣಿಗೆ ನಡೆಯಲಿದೆ. ಮತಕ್ಷೇತ್ರದ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಅವರು ಮನವಿ ಮಾಡಿದರು.

ಬಾದಾಮಿ ತಾಲೂಕಿನಲ್ಲಿ ಎಲ್ಲ ಇಲಾಖೆಗಳಲ್ಲೂ ಭ್ರಷ್ಟಾಚಾರ ನಡೆಯುತ್ತಿದೆ. ಅಕ್ರಮ ಸರಾಯಿ, ಜೂಜಾಟದ ಅಕ್ರಮಗಳನ್ನು ನಿಲ್ಲಿಸದಿದ್ದರೆ ಬರುವ ದಿನಗಳಲ್ಲಿ ಜೆಡಿಎಸ್ ನಿಂದ ಉಗ್ರ ಹೋರಾಟ ಮಾಡಲಾಗುವುದು ಎಂದು ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಎಂ.ಎಸ್.ಹಿರೇಹಾಳ, ಚಂದ್ರಶೇಖರ ಸೂಡಿ, ರಾಘು ಗೋವನಕೊಪ್ಪ, ಹುಚ್ಚೇಶ ಹದ್ದನ್ನವರ, ಶಿವು ಫಕೀರಪ್ಪ ಗೊರವರ, ಬಸವರಾಜ ಕುಂಬಾರ, ಶರಣಪ್ಪ ಮಾವಿನಮರದ, ಪ್ರಕಾಶ ಕೋಟಿ, ನಿಂಗಪ್ಪ ಮಾದರ ಮತ್ತಿತರ ಮುಖಂಡರು ಇದ್ದರು.

# ಸುಭಾಸ ತಿಪ್ಪಣ್ಣವರಗೆ ಡಾಕ್ಟರೇಟ್



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.15-ನಗರದ ಬಸವೇಶ್ವರ ವಿದ್ಯಾವರ್ಧಕ ಸಂಘದ ಬಸವೇಶ್ವರ ಪದವಿ ಪೂರ್ವ ವಿಜ್ಞಾನ ಮಹಾವಿದ್ಯಾಲಯದ ಇಂಗ್ಲಿಷ್ ಉಪನ್ಯಾಸಕ ಸುಭಾಸ ಎಮ್. ತಿಪ್ಪಣ್ಣವರ ಅವರಿಗೆ ಮಧ್ಯಪ್ರದೇಶದ ಭೂಪಾಲಿನ ಮಾನಸ ಸರೋವರ ಗ್ಲೋಬಲ್ ವಿಶ್ವವಿದ್ಯಾಲಯ ಡಾ-ಕ್ಟರೇಟ್ ಪದವಿ ನೀಡಿದೆ.

ಶ್ರೀಮತಿ ಡಾ.ಪ್ರೀತಿ ಕೊಳ್ವಾಲ ಮಾರ್ಗದರ್ಶನದಲ್ಲಿ "ಎ ಸ್ಟಡಿ ಆಫ್ ಇಂಡಿಯನ್ ಮೈಥಾಲಜಿ ಇನ್ ದಿ ನಾವೆಲ್ಸ ಆಫ್ ಅಮಿಶ್ ತ್ರಿಪಾಟಿ" ಎಂಬ ವಿಷಯದ ಕುರಿತು ಸಂಶೋಧನಾ ಅಧ್ಯಯನ ಕೈಗೊಂಡಿದ್ದರು.

ಡಾಕ್ಟರೇಟ್ ಪದವಿ ಪಡೆದ ತಿಪ್ಪಣ್ಣವರಗೆ ಬವಿವ ಸಂಘದ ಕಾರ್ಯಾಧ್ಯಕ್ಷ, ಮಾಜಿ ಶಾಸಕ ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ ಅಥಣಿ ಹಾಗೂ ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ, ಪದನಿಮಿತ್ತ ಕಾರ್ಯದರ್ಶಿ ಡಾ.ಎಸ್.ಎಮ್.ಗಾಂವಕರ, ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಎನ್.ಎಚ್. ಬೇವಿನಹಳ್ಳಿ ಅಭಿನಂದಿಸಿದ್ದಾರೆ.

# ಹೆಚ್ಚಿನ ಬೆಲೆಗೆ ರಸಗೊಬ್ಬರ ಮಾರಾಟ ಕಂಡುಬಂದಲ್ಲಿ ದೂರು ಸಲ್ಲಿಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.15-ಜಿಲ್ಲೆಯಲ್ಲಿ ಬೇಡಿಕೆಯನ್ವಯ ರಸಗೊಬ್ಬರಗಳು ಸರಬರಾಜು ಆಗುತ್ತಿದ್ದು, ಕೃಷಿ ಪರಿಕರ ಮಾರಾಟ ಮಳಿಗೆಗಳು ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ ರೈತರಿಗೆ ರಸಗೊಬ್ಬರಗಳನ್ನು ವಿತರಿಸಲಾಗುತ್ತಿದೆ. ರಸಗೊಬ್ಬರಗಳ ವಿತರಣೆಯನ್ನು ಕೃಷಿ ಇಲಾಖೆಯಿಂದ ಉಸ್ತುವಾರಿ ಮಾಡಲಾಗುತ್ತಿದ್ದು, ಕೃಷಿ ಪರಿಕರಗಳನ್ನು ಹೆಚ್ಚಿನ ದರದಲ್ಲಿ ಮಾರಾಟ ಮಾಡುವುದು ಕಂಡುಬಂದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಂಟಿ ಕೃಷಿ ನಿರ್ದೇಶಕ ಸೋಮಸುಂದರ ಕೆ.ಎಂ. ಅವರು ತಿಳಿಸಿದ್ದಾರೆ.

ರೈತರು ರಸಗೊಬ್ಬರ ಖರೀದಿಸುವ ಸಮಯದಲ್ಲಿ ಮಾರಾಟಗಾರರು ಖರೀದಿ ಬಿಲ್‌ನ್ನು ನೀಡದೇ ಇದ್ದಲ್ಲಿ ಅಥವಾ ಕಳಪೆ ಗುಣಮಟ್ಟದ ರಸಗೊಬ್ಬರ ಕಂಡುಬಂದಲ್ಲಿ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ ಮಾಹಿತಿ ನೀಡಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಗಲಕೋಟೆಯಿಂದ ಲೋಕಾಪೂರವರೆಗೆ ರೈಲು ಓಡಿಸಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.15-ಬಾಗಲಕೋಟೆಯಿಂದ ಲೋಕಾಪೂರವರೆಗೆ ಪೂರ್ಣಗೊಂಡಿರುವ ಕುಡಚಿ ರೈಲು ಮಾರ್ಗದಲ್ಲಿ ರೈಲು ಓಡಿಸಿ ಸಾರ್ವಜನಿಕರಿಗೆ ಅನುಕೂಲತೆ ಮಾಡಿಕೊಡಲು ಪ್ರಯತ್ನಿಸಬೇಕು ಎಂದು ನಗರದ ಚರಂತಿಮಠದ ಪೂಜ್ಯ ಪ್ರಭುಸ್ವಾಮೀಜಿ ಸಂಸದ ಪಿ.ಸಿ.ಗದ್ದಿಗೌಡರ ಅವರಿಗೆ ತಿಳಿಸಿದರು.

ಬರೀ ಹೋರಾಟ ಮಾಡಿದರೆ ಸಾಲದು. ತಾವು ಅಧಿಕಾರದಲ್ಲಿದ್ದೀರಿ. ರೇಲ್ವೆ ಇಲಾಖೆಯ ಸಚಿವರ ಜೊತೆ ಮಾತನಾಡಿ ಪ್ಯಾಸೆಂಜರ್ ರೈಲು ಪ್ರಾರಂಭಿಸಲು ಪ್ರಯತ್ನಿಸುವಂತೆ ಸಲಹೆ ಮಾಡಿದರು.

ಇದೇ ಸಂದರ್ಭದಲ್ಲಿದ್ದ ರೇಲ್ವೆ ಹೋರಾಟಗಾರ ಕುತುಬುದ್ದೀನ ಖಾಜಿ, ಬಾಗಲಕೋಟದಿಂದ ಲೋಕಾಪೂರವರೆಗೆ ಆರು ನಿಲ್ದಾಣಗಳು ಬರುತ್ತಿದ್ದು, ಕುಡಚಿ ಮಾರ್ಗ ರಚನೆಗೆ ಸರಕಾರ ಕೋಟ್ಯಾಂತರ ರೂಪಾಯಿ ಖರ್ಚು ಮಾಡಿದೆ. ನಿಲ್ದಾಣಗಳಲ್ಲಿ ಕಟ್ಟಡಗಳನ್ನು ಕಟ್ಟಿದ್ದು ಬಳಕೆಯಿಲ್ಲದೇ ಹಾಳಾಗಿ ಹೋಗುತ್ತಿವೆ. ಪೂರ್ಣಗೊಂಡಿರುವ ಮಾರ್ಗದಲ್ಲಿ ರೈಲು ಓಡಿಸಿದರೆ ಆದಾಯವೂ ಬರುತ್ತದೆ. ಹಾಗಾಗಿ ಕೂಡಲೇ ರೈಲು ಸೇವೆ ಪ್ರಾರಂಭಿಸುವಂತೆ ಸಂಸದರನ್ನು ಒತ್ತಾಯಿಸಿದರು.

ಲೋಕಾಪೂರ, ಯಾದವಾಡ, ಮುಧೋಳ, ಜಮಖಂಡಿ ಭಾಗದಲ್ಲಿ ರೇಲ್ವೆ ಕಾಮಗಾರಿಯನ್ನು ತ್ವರಿತಗೊಳಿಸಬೇಕು. ರಬಕವಿ-ಬನಹಟ್ಟಿ, ತೇರದಾಳ ಕುಡಚಿವರೆಗೆ ಯೋಜನೆಗೆ ಒಳಪಡುವ ಭೂಮಿ ಸ್ವಚ್ಛಮಾಡಲು 6 ಕೋಟಿ ವೆಚ್ಚದಲ್ಲಿ ರೇಲ್ವೇ ಇಲಾಖೆ ಟೆ-ಂಡರ್ ಕರೆದಿದೆ. ಅದರ ಮಾಹಿತಿ ಪಡೆದು ಶೀಘ್ರದಲ್ಲಿ ಕುಡಚಿವರೆಗೂ ಪೂರ್ಣ ಪ್ರಮಾಣದ ಕಾಮಗಾರಿ ಪ್ರಾರಂಭಿಸಲು ರೇಲ್ವೇ ಇಲಾಖೆಗೆ ಸೂಚಿಸಬೇಕು ಎಂದು ಖಾಜಿ ಸಂಸದರಿಗೆ ಮನವಿ ಮಾಡಿದರು.

# ಸಿರುಗುಪ್ಪ: ಜು.17 ರಂದು ಸಾಮಾನ್ಯ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.15-ಸಿರುಗುಪ್ಪ ನಗರಸಭೆಯ ಸಾಮಾನ್ಯ ಸಭೆಯನ್ನು ಜು.17 ರಂದು ಬೆಳಿಗ್ಗೆ 11 ಗಂ-ಟೆಗೆ ನಗರಸಭೆ ಅಧ್ಯಕ್ಷರಾದ ಬಿ.ರೇಣುಕಮ್ಮ ಅವರ ಅಧ್ಯಕ್ಷತೆಯಲ್ಲಿ ಸಿರುಗುಪ್ಪ ನಗರಸಭೆಯ ಸಭಾಭವನದಲ್ಲಿ ಆಯೋಜಿಸಲಾಗಿದೆ ಎಂದು ಸಿರುಗುಪ್ಪ ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

# ಹಡಪದ ಅಪ್ಪಣ್ಣ ಜಯಂತಿ-ಭಾವಚಿತ್ರದ ಮೆರವಣಿಗೆ ಶರಣರ ತತ್ವಾದರ್ಶಗಳ ಪಾಲನೆ ಅವಶ್ಯ : ಸಚಿವ ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.15-ಶೋಷಣೆಗೆ ಒಳಗಾದ ಸಣ್ಣ ಸಣ್ಣ ಸಮುದಾಯಗಳನ್ನು ಒಗ್ಗೂಡಿಸಿ ಜಾತಿ, ಮತಗಳ ಬೇಧ ತೊಡೆದು ಹಾಕಲು ಕ್ರಾಂತಿ ಮಾಡಿದ ಬಸವಾದಿ ಶರಣರ ತತ್ವಾದರ್ಶಗಳನ್ನು ಪಾಲಿಸಿ ಜೀವನದಲ್ಲಿ ಅಳವಡಿಸಿಕೊಳ್ಳುವುದು ಅವಶ್ಯವಾಗಿವೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ನವನಗರದ ಡಾ.ಬಿ.ಆರ್.ಅಂಬೇಡ್ಕರ ಭವನದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಶಿವಶರಣ ಹಡಪದ ಅಪ್ಪಣ್ಣನವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಧರ್ಮ ಧರ್ಮಗಳಲ್ಲಿ ಕದನ, ಮೇಲು, ಕೀಳು, ಅಸ್ಪೃಶ್ಯತೆ ಹೋಗದೇ ಇದ್ದರೆ ಮುಂದಿನ ಪೀಳಿಗೆ ಬೇರೆ ಬೇರ ಧರ್ಮವನ್ನು ಒಪ್ಪಿಕೊಳ್ಳುವಂತಹ ಸ್ಥಿತಿ ನಿರ್ಮಾಣವಾಗುತ್ತದೆ. ಇದನ್ನು ತಪ್ಪಿಸಲು ಮಠಾಧಿಪತಿಗಳು, ಬುದ್ಧಿ ಜೀವಿಗಳು, ಸಾಮಾಜಿಕ ಚಿಂತಕರು ಹಾಗೂ ರಾಜಕಾರಣಿಗಳು ಇದನ್ನು ಗಂಭೀರವಾಗಿ ಪರಿಗಣಿಸಬೇಕಾಗಿದೆ ಎಂದರು.

ಶರಣರ ತತ್ವ ಆಚರಣೆಗೆ ಎಲ್ಲರೂ ಬದ್ದರಾಗಬೇಕಿದೆ ಎಂದು ಸಚಿವ ತಿಮ್ಮಾಪೂರ, ಈ ನಿಟ್ಟಿನಲ್ಲಿ ಯುವ ಜನಾಂಗ ತಮ್ಮ ಮೂಲ ಕಸಬನ್ನು ಗೌರವಿಸಿ ಕಾಲಕ್ಕೆ ತಕ್ಕಂತೆ ಆಧುನಿಕ ಸ್ಪರ್ಶ ನೀಡಿ ಮುಂದುವರೆಯಬೇಕು. ಸಮಾಜದ ಪ್ರತಿ ಕುಟುಂಬದ ಮಕ್ಕಳಿಗೆ ಶಿಕ್ಷಣ ಕೊಡಬೇಕು. ಇಲ್ಲವೇ ರಾಜಕೀಯ ಶಕ್ತಿ ಪಡೆದುಕೊಂಡಾಗ ಮಾತ್ರ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಬೀಳಗಿ ಶಾಸಕ ಜೆ.ಟಿ.ಪಾಟೀಲ ಮಾತನಾಡಿ, ಸಮಸಮಾಜ ನಿರ್ಮಾಣ ಮಾಡುವ ನಿಟ್ಟಿನಲ್ಲಿ 12ನೇ ಶತಮಾನದ ಶರಣರು ಶ್ರಮಿಸಿದ್ದಾರೆ. ಅವರ ಸಿದ್ಧಾಂತಗಳಿಗೆ ತಿಲಾಂಜಲಿಯನ್ನಿಟ್ಟಿದ್ದೇವೆ. ಇದ-ರಿಂದ ಅವರ ತತ್ವಗಳಿಗೆ ಅವಮಾನ ಮಾಡಿದಂತಾಗುತ್ತಿದೆ. ಸಮಾಜ ಅಭಿವೃದ್ಧಿ ಹೊಂದಬೇಕಾದರೆ ಪರಿವರ್ತನೆ ಕಾಲ ಬರಬೇಕಿದೆ. ಹಡಪದ ಅಪ್ಪಣನವರು ಬಸವಣ್ಣನವರ ಹಾದಿಯಲ್ಲಿ ನಡೆದಿದ್ದು, ನೀಲಾಂಬಿಕೆ ಕರೆತರುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು ಎಂದರು.

ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ ಮಾತನಾಡಿ, ಹಡಪದ ಸಮುದಾಯದ ವ್ಯಕ್ತಿ ಬಿಹಾರ ರಾಜ್ಯದ ಮುಖ್ಯಮಂತ್ರಿಗಳಾಗಿ ಕಾರ್ಯನಿರ್ವಹಿಸಿದ್ದಾರೆ. ಸಮುದಾಯದವರು ಅಭಿವೃದ್ಧಿ ಹೊಂದಬೇಕಾದರೆ ಮುಂದಿನ ಪೀಳಿಗೆ ಉನ್ನತ ಶಿಕ್ಷಣ ಪಡೆದುಕೊಂಡಾಗ ಮಾತ್ರ ಸಾಧ್ಯವಾಗುತ್ತದೆ. ಸಮಾಜದಲ್ಲಿ ಸಮತೋಲನ ಇಲ್ಲ. ಮಕ್ಕಳಿಗೆ ಶಿಕ್ಷಣ ನೀಡಿ ಅವರಲ್ಲಿ ಶರಣರ ಆದರ್ಶಗಳನ್ನು ತುಂಬುವ ಕೆಲಸವಾಗಬೇಕು ಎಂದರು.

ಉಪನ್ಯಾಸಕರಾಗಿ ಆಗಮಿಸಿದ್ದ ಡಾ.ಬಸವಲಿಂಗ ಮಹಾಸ್ವಾಮಿಗಳು ಮಾತನಾಡಿ, ಶರಣರು ಹಾಕಿಕೊಟ್ಟ ಹಾದಿಯಲ್ಲಿ ನಾವೆಲ್ಲರೂ ನಡೆಯಬೇಕಿದೆ. ಲಿಂಗ ಪೂಜೆಯಿಂದ ಏಕಾಗ್ರತೆ ಹಾಗೂ ಉಸಿರಾಟ ಹತೋಟಿಯಲ್ಲಿರುವದರಿಂದ ಲಿಂಗ ಪೂಜೆಯಿಂದ ಆರೋಗ್ಯ ವೃದ್ಧಿಯಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಎಚ್.ವಾಯ್.ಮೇಟಿ ಮಾತನಾಡಿ, ಸಮುದಾಯದವರು ತಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಬೇಕು. ನಿತ್ಯ, ಸತ್ಯ ಕಾಯಕ ಅನುಸರಿಸಬೇಕು ಎಂದರು.

ಈ ಸಂದರ್ಭದಲ್ಲಿ ಹಡಪದ ಅಪ್ಪಣ್ಣ ಸ್ಮರಣಾರ್ಥವಾಗಿ 'ನಿಜ ಸುಖಿ' ಎಂಬ ಪ್ರಶಸ್ತಿಯನ್ನು ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದವರಿಗೆ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದ ಸಾನಿಧ್ಯವನ್ನು ಅನುಭವ ಭಾರತಿ ಶ್ರೀಗಳು ವಹಿಸಿದ್ದರು.

ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಸಿಇಓ ಶಶಿಧರ ಕುರೇರ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ ಸೇರಿದಂತೆ ಸಮುದಾಯ ಮುಖಂಡರಾದ ಮಲ್ಲಣ್ಣ ಹಡಪದ, ಅಶೋಕ ನಾವಿ, ಲಕ್ಷ್ಮಣ ಹಡಪದ, ಎಚ್.ಪಿ.ವೈದ್ಯ ಇತರರು ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೂ ಮುನ್ನ ಜಿಲ್ಲಾಡಳಿತ ಭವನದ ಆವರಣದಲ್ಲಿ ಹಡಪದ ಅಪ್ಪಣ್ಣ ಅವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಸಂಗಪ್ಪ ಅವರು ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು. ಮೆರವಣಿಗೆ ವಿವಿಧ ಜಾನಪದ ಕಲಾತಂಡಗೊಂದಿಗೆ ನಗರದ ನಾನಾ ಕಡೆ ಸಂಚರಿಸಿ ಡಾ.ಅಂಬೇಡ್ಕರ ಭವನಕ್ಕೆ ಮುಕ್ತಾಯಗೊಂಡಿತು.

# ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಹೊಸದಾಗಿ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.15-ಪ್ರಸಕ್ತ 2025-26ನೇ ಸಾಲಿಗೆ ಕಲಬುರಗಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ (ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಅರ್ಹ ವಿದ್ಯಾರ್ಥಿಗಳು https://shp.karnataka.gov.in/bcwd ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2025ರ ಆಗಸ್ಟ್ 14 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಇಲಾಖೆಯ https://bcwd.karnataka.gov.in ವೆಬ್‌ಸೈಟ್‌ನ್ನು, ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ಛಛಿತಿಜ-ಀಜಟಔಟುಟಿಜ@ರಟಚುಟ.ಛಿಂಟ ಇ-ಮೆಲ್ ವಿಳಾಸಕ್ಕೆ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಲು ಹಾಗೂ ಸಹಾಯವಾಣಿ 8050770004 ಮತ್ತು 8050770005 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ತಾತ್ಕಾಲಿಕ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

ಕಲಬುರಗಿ,ಜು.15-ಕಲಬುರಗಿ ಮಹಾನಗರಪಾಲಿಕೆಯ 2009-10 ಮತ್ತು 2015-16ನೇ ಸಾಲಿನ ಪಾಲಿಕೆನಿಧಿ ಪರಿಷ್ಕೃತ ಎಸ್.ಎಫ್.ಸಿ. ಕ್ರಿಯಾ ಯೋಜನೆಯಡಿ 2025-26ನೇ ಸಾಲಿಗೆ ಶೇ. 24.10ರ ಯೋಜನೆಯಡಿ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಸಮುದಾಯ ಭವನಗಳಿಗೆ ಶವ ಪೆಟ್ಟಿಗೆ (ಫ್ರಿಜರ) ವಿತರಿಸುವ ಸಂಬಂಧ ಈಗಾಗಲೇ ಅರ್ಜಿ ಆಹ್ವಾನಿಸಿ, ಅರ್ಹ ಅರ್ಜಿದಾರರ ತಾತ್ಕಾಲಿಕ ಪಟ್ಟಿಯನ್ನು ಕಲಬುರಗಿ ಮಹಾನಗರ ಪಾಲಿಕೆಯ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸಲಾಗಿದೆ.

ಈ ತಾತ್ಕಾಲಿಕ ಅರ್ಹ ಅರ್ಜಿದಾರರ ಪಟ್ಟಿಗೆ ಆಕ್ಷೇಪಣೆಗಳು ಇದ್ದಲ್ಲಿ 2025ರ ಜುಲೈ 28 ರೊಳಗಾಗಿ ಪೂರಕ ದಾಖಲೆಗಳೊಂದಿಗೆ ಕಲಬುರಗಿ ಮಹಾನಗರ ಪಾಲಿಕೆಯ ಕಚೇರಿಯಲ್ಲಿ ಆಕ್ಷೇಪಣೆ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕಲಬುರಗಿ ಮಹಾನಗರಪಾಲಿಕೆ (ಆಡಳಿತ) ಉಪ ಆಯುಕ್ತರು ತಿಳಿಸಿದ್ದಾರೆ.

# ಜುಲೈ 22 ರಂದು ಸೇಡಂದಲ್ಲಿ ಹರಾಜು ಪ್ರಕ್ರಿಯೆ ಮೂಲಕ ವಾಹನಗಳ ವಿಲೇವಾರಿ

ಕಲಬುರಗಿ,ಜು.15. -ಸೇಡಂ ವಲಯಕ್ಕೆ ಸಂಬಂಧಟಪ್ಪಂತೆ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡ ವಾಹನಗಳನ್ನು ಇದೇ ಜುಲೈ 22 ರಂದು ಬೆಳಿಗ್ಗೆ 10 ಗಂಟೆಗೆ ಸೇಡಂ ವಲಯದ ಅಬಕಾರಿ ನಿರೀಕ್ಷಕರ ಕಚೇರಿಯಲ್ಲಿ ಟೆಂಡರ್-ಕಮ್-ಹರಾಜು ಪ್ರಕ್ರಿಯೆಯ ಮೂಲಕ ವಿಲೇವಾರಿ ಮಾಡಲಾಗುತ್ತದೆ ಎಂದು ಕಲಬುರಗಿ ಅಬಕಾರಿ ಉಪ ಆಯುಕ್ತರು ಹಾಗೂ ಪ್ರಾಧೀಕೃತ ಅಧಿಕಾರಿಗಳು ತಿಳಿಸಿದ್ದಾರೆ. ಈ ವಾಹನಗಳನ್ನು ವಿಲೇವಾರಿ ಮಾಡಲು ಚಿತ್ತಾಪುರ ಉಪವಿಭಾಗದ ಅಬಕಾರಿ ಉಪ ಅಧೀಕ್ಷಕರನ್ನು ಹರಾಜು ನಿರ್ವಹಣಾಧಿಕಾರಿಯನ್ನಾಗಿ ನೇಮಿಸಲಾಗಿದ್ದು, ಈ ಟೆ-ಂಡರ್ ಪ್ರಕಟಣೆಯಲ್ಲಿನ ನಮೂದಿಸಿರುವ ವಾಹನಗಳ ಷರತ್ತುಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಈ ಹಿಂದೆ ಸೇಡಂ ವಲಯ ಕಚೇರಿಯಲ್ಲಿ ದಿನಾಂಕ: 16-06-2025 ರಂದು ನಿಗದಿಪಡಿಸಲಾಗಿದ್ದ ಬಹಿರಂಗ ಹರಾಜು ಪ್ರಕ್ರಿಯೆಯನ್ನು ಕಾರಣಾಂತರದಿಂದ ಮುಂದೂಡಲಾಗಿತ್ತು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನರ ಗಂಭೀರ ಸಮಸ್ಯೆಗಳಿಗೆ ಅಧಿಕಾರಿಗಳು ಸ್ಪಂದಿಸಲಿ: ಸಂಸದ ಜಿ.ಕುಮಾರ್ ನಾಯಕ್

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜು:15:ಜಿಲ್ಲೆಯಲ್ಲಿನಜನರ ಗಂಭೀರ ಸ್ವರೂಪದ ಸಮಸ್ಯೆಗಳಾದ ಕುಡಿಯುವ ನೀರು,ಅನಕ್ಷರತೆ, ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಮರು ಸೇರ್ಪಡೆ ,ಜನರ ವಲಸೆ,ತಾಯಿ–ಶಿಶುಮರಣ ಪ್ರಮಾಣ ತಡೆ ಸೇರಿದಂತೆ ಆರೋಗ್ಯ ಸಮಸ್ಯೆಗಳನ್ನು ಪರಿಹರಿಸಲು ಪ್ರಥಮ ಆದ್ಯತೆ ನೀಡುವಂತೆ ರಾಯಚೂರು ಲೋಕಸಭಾ ಸದಸ್ಯರು ಹಾಗೂ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಮೇಲ್ವಿಚಾರಣಾ ಸಮಿತಿ ಅಧ್ಯಕ್ಷರಾದ ಜಿ.ಕುಮಾರ್ ನಾಯಕ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಮೇಲ್ವಿಚಾರಣಾ ಸಮಿತಿ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿನ ಗಂಭೀರ ಸ್ವರೂಪದ ಸಮಸ್ಯೆಗಳಿಗೆ ಆದ್ಯತೆ ಮೇಲೆ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಬೇಕು.ವಿವಿಧ ಯೋಜನೆಗಳ ಅನುಷ್ಠಾನದಲ್ಲಿ ಅಧಿಕಾರಿಗಳ ಮಧ್ಯೆ ಸಮನ್ವಯತೆ ಸಾಧಿಸಿ,ಸಮಾಲೋಚಿಸಿ ಪರಿಹಾರ ಕಂಡುಕೊಳ್ಳುವಂತೆ ಅವರು ಸೂಚನೆ ನೀಡಿದರು.

ಜಿಲ್ಲೆಯ ರೈತರಲ್ಲಿ ಯೂರಿಯಾ ಹಾಗೂ ಡಿಎಪಿ ಗೆ ಪರ್ಯಾಯವಾಗಿ ನೀಡಲಾಗುವ ನ್ಯಾನೋ ರಸಗೊಬ್ಬರ ಬಳಕೆ ಬಗ್ಗೆ ಸೂಕ್ತ ಜಾಗೃತಿ ಮೂಡಿಸಬೇಕು.ಸ್ಪ್ರಿಂಕ್ಲರ್, ಮಣ್ಣು ಪರೀಕ್ಷೆ,ಮಣ್ಣು ಪರೀಕ್ಷೆ ಕಾರ್ಡ್ ವಿತರಣೆ ಕುರಿತಂತೆ ಅವಶ್ಯಕ ಅರಿವು ಮೂಡಿಸಲು ಅವರು ಸೂಚಿಸಿದರು.

ಜಿಲ್ಲೆಯಲ್ಲಿ ಸುಮಾರು 662 ಮಕ್ಕಳು ಶಾಲೆಯಿಂದ ಹೊರಗುಳಿದ ಬಗ್ಗೆ ಆರ್ಡಿಪಿಆರ್ ಇಲಾಖೆಯಿಂದ ಸಮೀಕ್ಷೆ ಅನ್ವಯ ಗುರಿ ನೀಡಿದ್ದು,ಆಯಾ ಗ್ರಾಮ ಪಂಚಾಯತ್ ಅಧಿಕಾರಿಗಳು, ಶಿಕ್ಷಣ ಇಲಾಖೆ ಅಧಿಕಾರಿಗಳು ಎಸ್ ಡಿ ಎಮ್ ಸಿ ಹಾಗೂ




ಗ್ರಾಮಸ್ಥರೊಂದಿಗೆ ಸಮನ್ವಯ ಸಾಧಿಸಿ ಸ್ಯಾಟ್ಸ ಆಧಾರಿತದಲ್ಲಿ ಪತ್ತೆ ಹಚ್ಚಿ ಶಾಲೆಗೆ ಸೇರಿಸಬೇಕು ಎಂದು ಸೂಚಿಸಿದರು.

ಜಿಲ್ಲೆಯಲ್ಲಿ ಗರ್ಭಿಣಿ ತಾಯಿ –ಶಿಶುಮರಣ ಪ್ರಮಾಣ ತಡೆಯಲು ಪರಿಣಾಮಕಾರಿ ಆರೋಗ್ಯ ತಪಾಸಣೆ, ನಿವಾರಣಾ ಕ್ರಮ ಕೈಗೊಳ್ಳಬೇಕು.ಬಾಲ್ಯ ವಿವಾಹ ತಡೆ ಸವಾಲಾಗಿ ಸ್ವೀಕರಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು.ಸಾಮಾಜಿಕ ಕಳಕಳಿ, ಮಾನವೀಯ ನೆಲೆಯಲ್ಲಿ ಕ್ರಮಗಳನ್ನು ಕೈಗೊಂಡಾಗ ಮಾತ್ರ ಈ ಸಮಸ್ಯೆ ಮತ್ತು ತಾಯಿ–ಶಿಶು ಮರಣ ಪ್ರಮಾಣ ತಡೆಯಲು ಸಾಧ್ಯ ಎಂದು ಹೇಳಿದರು.

ಜಿಲ್ಲೆಯ ಯಾದಗಿರಿ ಬೈಪಾಸ್ ರಸ್ತೆ, ಶಹಾಪುರ ಬೈಪಾಸ್ ರಸ್ತೆ, ರಾಮಸಮುದ್ರ ಹತ್ತಿರದಿಂದ ಗುರುಮಠಕಲ್ – ಹೈದರಾಬಾದ್ ರಸ್ತೆ, ಸೂರತ್– ಚೆನ್ನೈ ರಸ್ತೆಗಳ ವ್ಯಾಪ್ತಿಯ ಸಮಸ್ಯೆಗಳ ನಿವಾರಣೆಗೆ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಸಮಸ್ಯೆ ಪರಿಹರಿಸಬೇಕು. ಕೈಗೊಂಡ ಕ್ರಮದ ಬಗ್ಗೆ ವರದಿ ಸಹ ಸಲ್ಲಿಸುವಂತೆ ಅವರು ಸೂಚಿಸಿದರು.

ಕಡೆಚೂರ–ಬಾಡಿಯಾಳ ಸಮೀಪದ ರೈಲ್ವೆ ಬೋಗಿ ಕಾರ್ಖಾನೆಗೆ ನೀರು ಪೂರೈಕೆಗೆ ಸಂಬಂಧಿಸಿದಂತೆ ಹಲವು ವರ್ಷಗಳಿಂದ ಸಮಸ್ಯೆಯಾಗಿ ಉಳಿದಿರುವ ರಾಷ್ಟ್ರೀಯ ಹೆದ್ದಾರಿನಡಿ ನೀರಿನ ಪೈಪ್ಲೈನ್ ಅಳವಡಿಕೆ ಸಮಸ್ಯೆಯನ್ನು ಕೆಐಎಡಿಬಿ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳ ಸಮನ್ವಯತೆಯಿಂದ ಪರಿಹರಿಸಬೇಕು.ಯಾದಗಿರಿ ರೈಲ್ವೆ ನಿಲ್ದಾಣ ಕಾಮಗಾರಿಗಳು ಚುರುಕುಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಅದರಂತೆ ಜಲಜೀವನ್ ಮಿಷನ್,ಜಲಧಾರೆ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಹೆಚ್ಚಿನ ಗಮನ ನೀಡಬೇಕು.ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಮೇಲುಸ್ತುವಾರಿಯಲ್ಲಿ ಸಂಬಂಧಿಸಿದ ಅಧಿಕಾರಿಗಳ ಮೂಲಕ ಗುರಿಗೆ ತಕ್ಕಂತೆ ಕ್ರಮ ಕೈಗೊಳ್ಳಲು ತಿಳಿಸಿದರು.

ಪಶುಪಾಲನೆ ಇಲಾಖೆಯಿಂದ ಸರ್ಕಾರದ ನಿಯಮಾವಳಿಗಳ ಅನ್ವಯ ಅವಶ್ಯಕ ಕ್ರಮಗಳನ್ನು ಕೈಗೊಳ್ಳಬೇಕು. ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಸಂವಿಧಾನಬದ್ಧವಾಗಿ ಅವಶ್ಯಕ ಕ್ರಮಗಳನ್ನು ಕೈಗೊಳ್ಳಲು ವಿಪುಲ ಅವಕಾಶಗಳಿರುವದರಿಂದ ಅವಶ್ಯಕ ಪೂರ್ವಭಾವಿ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಅವರು, ಜಿಲ್ಲೆಯಲ್ಲಿ ತಾಯಿ–ಶಿಶುಮರಣ ಪ್ರಮಾಣ ಹೆಚ್ಚಲು ಕಾರಣ, ರೈಲ್ವೆ ಬೋಗಿ ಕಾರ್ಖಾನೆಗೆ ನೀರು,ವಿದ್ಯುತ್ ಪೂರೈಕೆ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಸಮರ್ಪಕ ಅನುಷ್ಠಾನ,ಅಕ್ಕ ಕೆಫೆ ಹಾಗೂ ಇಂದಿರಾ ಕಾಂಟಿನೆಗಳಿಗೆ ಸ್ಥಳ ಗುರುತಿಸುವ ಮುನ್ನ ಆಯಾ ಶಾಸಕರ ಗಮನಕ್ಕೆ ತರಲು ಹಾಗೂ ಇನ್ನಿತರ ಸಮಸ್ಯೆಗಳ ಬಗ್ಗೆ ಸಂಸದರ ಗಮನಕ್ಕೆ ತಂದರು.ಸುರಪುರ ಶಾಸಕ ರಾಜಾ ವೇಣುಗೋಪಾಲ್ ನಾಯಕ ಅವರು ಜಲಜೀವನ್ ಮಿಷನ್, ಜಲಧಾರೆ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಕೋರಿದರು.ಜಿಲ್ಲಾಧಿಕಾರಿ ಹರ್ಷಲ್ ಬೋಯರ್ ಅವರು ರಾಷ್ಟ್ರೀಯ ಹೆದ್ದಾರಿ, ರೈಲ್ವೆ ಬೋಗಿ ಕಾರ್ಖಾನೆಗೆ ನೀರು , ವಿದ್ಯುತ್ ಸಮಸ್ಯೆ,ಜಲಜೀವನ್ ಮಿಷನ್ ಯೋಜನೆಯಡಿಯ ಸಮಸ್ಯೆ ಪರಿಹರಿಸುವ ಕುರಿತು ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿದರು.ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ,ಎಸ್,ಪಿ ಪೃಥ್ವಿಕ್ ಶಂಕರ್,ನಾಮನಿರ್ದೇಶಿತ ಸದಸ್ಯರು ಉಪಸ್ಥಿತರಿದ್ದರು.

# ರಾಷ್ಟ್ರೀಯ ಲೋಕ ಆದಾಲತ್: ಜಿಲ್ಲೆಯಲ್ಲಿ 81,508 ಪ್ರಕರಣಗಳು ಇತ್ಯರ್ಥ:ನ್ಯಾ.ಪ್ರಕಾಶ ಬನಸೋಡೆ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.15:ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ, ನವದೆಹಲಿ ಇವರು ರಾಷ್ಟ್ರೀಯ ಅದಾಲತನ್ನು ಹಮ್ಮಿಕೊಳ್ಳಲು ನಿರ್ದೇಶನ ನೀಡಿದ ಮೇರೆಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೀದರ ಜಿಲ್ಲೆಯ ಎಲ್ಲಾ ನ್ಯಾಯಲಯಗಳಲ್ಲಿ ಜುಲೈ.12 ರಂದು ನಡೆದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಜಿಲ್ಲೆಯಾದ್ಯಾಂತ ಒಟ್ಟು 81,508 ಪ್ರಕರಣಗಳನ್ನು ಇತ್ಯರ್ಥಗೊಳಿಸಿ ಒಟ್ಟು ಮೊತ್ತ 26,15,36,335 ರೂಪಾಯಿಗಳ ಪರಿಹಾರವನ್ನು ಕಕ್ಷಿದಾರರಿಗೆ ಒದಗಿಸಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಬನಸೋಡೆ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಭಾಂಗಣದಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ



ಮಾತನಾಡಿದರು.

ಈ ಬಾರಿಯ ಲೋಕ ಅದಾಲತನಲ್ಲಿ ಒಟ್ಟು 10,697 (ಪೆಂಡಿಂಗನಲ್ಲಿನ) ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದ್ದು 11,05,50,484 ರೂ. ಹಣವನ್ನು ಕಕ್ಷಿದಾರರಿಗೆ ವಸೂಲಾತಿ ಮತ್ತು ಪರಿಹಾರ

ಒದಗಿಸಲಾಗಿದೆ.ಜಿಲ್ಲೆಯಾದ್ಯಾಂತ ಒಟ್ಟು 70,811 ವ್ಯಾಜ್ಯಪೂರ್ವ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದ್ದು ಹಾಗೂ ಕಕ್ಷಿದಾರರಿಗೆ 15,09,85,851 ರೂ. ಹಣವನ್ನು ವಸೂಲಾತಿ ಮತ್ತು ಪರಿಹಾರ ಒದಗಿಸಲಾಗಿದೆ ಎಂದರು.

ಜಿಲ್ಲೆಯಾದ್ಯಾಂತ ಈ ಲೋಕ ಆದಾಲತನಲ್ಲಿ ವೈವಾಹಿಕ ವ್ಯಾಜ್ಯವನ್ನು ಇತ್ಯರ್ಥಪಡಿಸಿ ಸಂದಾನದ ಮೂಲಕ 03 ಜೋಡಿ

ದಂಪತಿಯನ್ನು ರಾಜಿ ಸಂಧಾನದ ಮೂಲಕ ಒಂದು ಮಾಡಲಾಗಿದೆ ಹಾಗೂ ನ್ಯಾಯಲಯಗಳಲ್ಲಿ ಬಾಕಿ ಇರುವ ಒಟ್ಟು 7 ಹಳೆಯ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ ಎಂದು ಹೇಳಿದರು.

# ಮಹಿಳೆ ಜೊತೆ ಭಿಕ್ಷೆ ಬೇಡುತ್ತಿದ್ದ ಮಗುವಿನ ರಕ್ಷಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 15 : ಮಗುವನ್ನು ಬಳಸಿಕೊಂಡು ಭಿಕ್ಷಾಟನೆ ಮಾಡುತ್ತಿದ್ದ ಮಹಿಳೆಯನ್ನು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಗಮನಿಸಿ,ಮಗುವನ್ನು ರಕ್ಷಣೆ ಮಾಡಿದ್ದಾರೆ.

ಶನಿವಾರ ರಾತ್ರಿ ನಗರದ ಅಂಬೇಡ್ಕರ ವೃತ್ತದ ಬಳಿ ಕಾರಿನಲ್ಲಿ ತೆರಳುವಾಗ, ಮಗು ಭಿಕ್ಷೆ ಬೇಡುತ್ತಿರುವುದನ್ನು ಗಮನಿಸಿದ್ದಾರೆ.

ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಪೊಲೀಸರು ಮತ್ತು ಅಧಿಕಾರಿಗಳು ತೀವ್ರ ಪರಿಶೀಲನೆ ನಡೆಸಿ ಮಹಿಳೆ ಸ್ಥಳವನ್ನು ಪತ್ತೆ ಹಚ್ಚಿದ್ದಾರೆ.

ಬಳಿಕ ಜಿಲ್ಲಾಧಿಕಾರಿಗಳು ಮತ್ತು ಅಧಿಕಾರಿಗಳು, ಮಹಿಳೆಯನ್ನು ವಿಚಾರಣೆಗೆ ಒಳಪಡಿಸಿದಾಗ ಭಿಕ್ಷಾಟನೆ ಬಗ್ಗೆ ಬಾಯಿ ಬಿಟ್ಟಿದ್ದಾಳೆ. ಮಗುವನ್ನು ಬ್ರಿಮ್ಸ್ ಮಕ್ಕಳ ಘಟಕಕ್ಕೆ ದಾಖಲು ಮಾಡಲಾಗಿದೆ.

# ಮಾಶಾಳದಲ್ಲಿ ಆ.15 ರಂದು ಸಂಗೊಳ್ಳಿ ರಾಯಣ್ಣ ಪ್ರತಿಮೆಗೆ ಪೂಜೆ: ಮುರುಳಾರಾಧ್ಯ ಶ್ರೀ

ಅಫಜಲಪುರ:ಕಳೆದ ವರ್ಷ ಆಗಸ್ಟ್15 ರಂದು ಮಾಶಾಳ ಗ್ರಾಮದಲ್ಲಿ ಸ್ವಾತಂತ್ರ್ಯ ಹೋರಾಟಗಾರ ಸಂಗೊಳ್ಳಿ ರಾಯಣ್ಣನವರ ಮೂರ್ತಿ ನಿರ್ಮಾಣ ಮಾಡಲಾಗಿದ್ದು,ಗ್ರಾಮದ ಕೆಲವರಿಂದ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಇಲ್ಲಿಯವರೆಗೂ ಸಂಗೊಳ್ಳಿ ರಾಯಣ್ಣನವರ ಮೂರ್ತಿಗೆ ಪೂಜೆಯೂ ಮಾಡಲು ಬಿಡದೆ ಪೊಲೀಸ್ ಬಂದೋಬಸ್ತನಲ್ಲಿ ಮೂರ್ತಿಯ ಕಾವಲು ನಡೆಯುತ್ತಿದೆ. ಕೆಲವು ಪಟ್ಟಬದ್ಧ ಹಿತಾಸಕ್ತಿಗಳಿಂದ ಕೊಮುಗಲಭೆಗಳಾಗುವ ನಿರೀಕ್ಷೆಯಲ್ಲಿ ಸುಖಾಸುಮ್ಮನೆ ಗೊಂದಲ ಸೃಷ್ಟಿಯಾಗುವ ಸಂಭವದಿಂದ ಒಂದು ವರ್ಷಗಳಿಂದ ರಾಯಣ್ಣರ ಮೂರ್ತಿಗೆ ಪೊಲೀಸ್ ಬಂದೋಬಸ್ತ ಒದಗಿಸಲಾಗಿದೆ.

ಮಾಶಾಳ ಗ್ರಾಮದ ಮರುಳಾರಾಧ್ಯ ಶಿವಾಚಾರ್ಯರು ದಿಢೀರ ಸುದ್ದಿಗೋಷ್ಠಿ ಕರೆದು ಈ ಬಾರಿ ಅಂದರೆ ಆಗಸ್ಟ್15 ರಂದು ಮಾಶಾಳ ಗ್ರಾಮದಲ್ಲಿ ವರ್ಷದ ಹಿಂದೆ ಅವರ ಹುಟ್ಟಿದ ದಿನದಂದು ನಿರ್ಮಾಣವಾದ ಸ್ವತಂತ್ರ ಸೇನಾನಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣರ ಮೂರ್ತಿಗೆ ಪೂಜೆ ಮಾಡಲು ನಾನು ಹೋಗುತ್ತಿದ್ದೆನೆ.ತಾಲೂಕು ಅಷ್ಟೇ ಅಲ್ಲದೇ ರಾಜ್ಯದಾದ್ಯಂತ ಇರುವ ಸ್ವಾತಂತ್ರ್ಯ ಸೇನಾನಿ ಅಭಿಮಾನಿಗಳು ಹಾಗೂ ಅಪ್ಪಟ ದೇಶಪ್ರೇಮಿಗಳು ಪೂಜೆಯಲ್ಲಿ ಭಾಗಿಯಾಗಲು ಮನವಿ ಮಾಡಿದರು.ಕಳೆದ ವರ್ಷ ಸಂಗೊಳ್ಳಿ ರಾಯಣ್ಣನವರ ಮೂರ್ತಿಗೆ ಪೂಜೆ ಸಲ್ಲಿಸಬೇಕೆನ್ನುವ ಮನದಾಸೆ ನನ್ನದಾಗಿತ್ತು ಆದರೆ ನಾನು ಅನುಷ್ಠಾನಕ್ಕೆ ಕುಳಿತಿರುವುದರಿಂದ ಪೂಜೆ ಮಾಡಲು ಆಗಿಲ್ಲ.ಆದರೆ ಈ ಬಾರಿ ನಾನು ಶ್ರಾವಣ ಮಾಸದಲ್ಲಿ ಅನುಷ್ಠಾನಕ್ಕೆ ಕೂರುವುದಿಲ್ಲ.ಏಕೆ–






ಂದರೆ ಸ್ವಾತಂತ್ರ್ಯ ಹೊರಾಟಗಾರರಿಗೆ ನನ್ನ ಗ್ರಾಮದಲ್ಲಿಯೇ ಈ ರೀತಿಯ ಅಪಮಾನವಾಗುತ್ತಿರುವುದು ಸಹಿಸಿಕೊಳ್ಳಲು ಆಗುತ್ತಿಲ್ಲ. ನನ್ನ ವಿರುದ್ಧ ಯಾ–ರೇ ಏನೆ ಪಿತೂರಿ ಮಾಡಿದರೂ ನಾನು ಗಮನ ಹರಿಸುವುದಿಲ್ಲ. ಒಂದು ಜಾತಿ ಸಮುದಾಯದ ಜನರು ನನ್ನನ್ನು ದೊಷಿಸಿದರೂ ಚಿಂತೆಯಿಲ್ಲ.ನನ್ನ ದೇಶದ ಸ್ವಾತಂತ್ರ್ಯಕ್ಕಾಗಿ ಪ್ರಾಣ ತ್ಯಾಗ ಮಾಡಿದ ಸಂಗೊಳ್ಳಿ ರಾಯಣ್ಣರ ಸಲುವಾಗಿ ನಾನೊಬ್ಬನೆ ಅಲ್ಲ ದೇಶದ ಪ್ರತಿಮನೆಯಲ್ಲಿರುವ ಅಪ್ಪಟ ದೇಶ ಪ್ರೇಮಿಗಳು ಪೂಜೆ ಸಲ್ಲಿಸಲು ಮುಂದೆಬರಬೇಕು.ಸರಕಾರಿ ಜಾಗದಲ್ಲಿ ಕೂರಿಸಿರುವ ರಾಯಣ್ಣನವರ ಮೂರ್ತಿ ವಿವಾದ ಒಂದು ವರ್ಷ ಕಳೆದರೂ ಇಲ್ಲಿನ ಜನಪ್ರತಿನಿಧಿಗಳು ಮುಂದಾಗುತ್ತಿಲ್ಲ.ಮಾತ್ತೆತ್ತಿದರೆ ಕಲಬುರಗಿ ಜಿಲ್ಲೆಯ ಉಸ್ತುವಾರಿ ಸಚಿವರಾದ ಪ್ರಿಯಾಂಕ ಖರ್ಗೆರವರು ಆರ್. ಎಸ್.ಎಸ್ ಬ್ಯಾನ್ ಮಾಡುವುದಾಗಿ ಹೇಳುತ್ತಾರೆ. ಆದರೆ ತಮ್ಮ ವ್ಯಾಪ್ತಿಯ ಕ್ಷೇತ್ರದಲ್ಲಿಯೇ ಸ್ವಾತಂತ್ರ್ಯ ಹೋರಾಟಗಾರಿಗೆ ಅಪಮಾನವಾಗುತ್ತಿದ್ದರೂ ಒಂದು ಮಾತು ಚಕಾರ ಎತ್ತುವುದಿಲ್ಲ. ಇಲ್ಲಿಯವರೆಗೂ ಸೌಜನ್ಯಕ್ಕೂ ಬಗೆಹರಿಸುವ ಗೋಜಿಗೆ ಹೋಗಿಲ್ಲ. ಇವರಿಗೆ ತ್ವರಿತ ಸಮಸ್ಯೆಗಳನ್ನು ಬಗೆಹರಿಸುವ ಇಚ್ಛಾಶಕ್ತಿ ಇಲ್ಲದಿರುವುದು ಮೇಲ್ನೋಟಕ್ಕೆ ಗೊತ್ತಾಗುತ್ತದೆ.ಆಗದೆ ಇರುವುದನ್ನು ಬಹಳ ಚೆನ್ನಾಗಿ ಮಾತನಾಡುವ ಪ್ರಿಯಾಂಕ ಖರ್ಗೆರವರು ಮಾಶಾಳ ಗ್ರಾಮದಲ್ಲಿರುವ ಸಂಗೊಳ್ಳಿ ರಾಯಣ್ಣನವರ ಮೂರ್ತಿಗೆ ಗೌರವ ಸಲ್ಲಿಸಲು ಮುಂದಾಗದೆ ಇರುವುದು ಹಿಂದೂಗಳು ಆವಲೋಕಿಸುತ್ತಿದ್ದಾರೆ. ಚುನಾವಣೆ ಬಂದಾಗ ಎಲ್ಲರನ್ನೂ ಅಪ್ಪಿಕೊಳ್ಳುವ ಇವರು ಸ್ವಾತಂತ್ರ್ಯ ಹೋರಾಟಗಾರರಿಗೆ ಅಪಮಾನವಾಗುತ್ತಿದ್ದರೂ ಕಂಡುಕೇಳರಿಯದಂತೆ ಇರುವುದು ಜನಸಾಮಾನ್ಯರು ತಕ್ಕ ಪ್ರತ್ಯುತ್ತರಕ್ಕಾಗಿ ಕಾಯುತ್ತಿರುತ್ತಾರೆ ನೆನಪಿರಲಿ ಎಂದರು.

ಅಫಜಲಪುರ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಮ್.ವೈ.ಪಾಟೀಲರು ವರ್ಷದಲ್ಲಿ ಅದೆಷ್ಟೋ ಬಾರಿ ಮಾಶಾಳ ಗ್ರಾಮಕ್ಕೆ ತಮ್ಮ ರಾಜಕೀಯ ಹಾಗೂ ಇನ್ನಿತರ ಕಾರ್ಯಕ್ರಮಗಳಿಗೆ ಬಂದು ಹೋಗಿದ್ದಾರೆ. ಆದರೆ ಸಂಗೊಳ್ಳಿ ರಾಯಣ್ಣನವರ ಮೂರ್ತಿಗೆ ಪೂಜೆ ಮಾಡುವ ಇರಾದೆಗೆ ಮುಂದಾಗಿಲ್ಲ.ಅಲ್ಲಿಯೂ ತಮ್ಮ ರಾಜಕೀಯ ಮಾಡುವುದನ್ನು ನಿಲ್ಲಿಸಿಲ್ಲ.ಇಂತಹ ಸಮಸ್ಯೆಗಳನ್ನು ಖುದ್ದಾಗಿ ಜನಪ್ರತಿನಿಧಿಗಳಾದವರು ಮುಂದೆ ಬಂದು ಬಗೆಹರಿಸಬೇಕು. ಆದರೆ ಇಲ್ಲಿನ ಶಾಸಕರು ಅಂತಹ ಸಾಹಸಕ್ಕೆ ಮುಂದಾಗಲಿಲ್ಲ.ಏಕೆ–ಂದರೆ ಅವರ ರಾಜಕಾರಣಕ್ಕೆ ಧಕ್ಕೆ ಬರಬಹುದು ಎಂಬ ಮುಂದಾಲೋಚನೆ ಇರುವುದು ಕಂಡು ಬರುತ್ತದೆ. ಸರಕಾರಿ ಜಾಗದಲ್ಲಿ ನಿರ್ಮಾಣವಾದ ಸಂಗೊಳ್ಳಿ ರಾಯಣ್ಣನವರ ಮೂರ್ತಿಗೆ ಬೇರೆಯವರ ವಿರೋಧವಾದರೂ ಏಕೆ ಎನ್ನುವುದನ್ನು ಇಲ್ಲಿನ ಜನಪ್ರತಿನಿಧಿಗಳು ವಿಚಾರಿಸುವುದಿಲ್ಲ. ಚುನಾವಣೆ ಬಂದಾಗ ಹಾಲುಮತಸ್ಥರು ತಮ್ಮ ಮನೆದೇವರು ಎಂದು ಪ್ರಚಾರ ಗಿಟ್ಟಿಸಿಕೊಳ್ಳುವ ಶಾಸಕರೇ ಸ್ವಾತಂತ್ರ್ಯಕ್ಕಾಗಿ ಪ್ರಾಣ ನೀಡಿದ ಸಂಗೊಳ್ಳಿ ರಾಯಣ್ಣ ಹಾಲುಮತಸ್ಥರೇ ಎನ್ನುವುದು ನಿಮಗೆ ಅರಿವಿಲ್ಲವೇ.ಮುಗ್ದರನ್ನು ತಮ್ಮ ಅಧಿಕಾರಕ್ಕಾಗಿ ಮತದಾನದ ಮಶಿನಗಳಾಗಿ ನೋಡುತ್ತಿರುವ ನಿಮಗೆ ಅವರಿಂದಲೇ ತಕ್ಕ ಪಾಠ ಕಲಿಸುವ ಕಾಲ ಹತ್ತಿರದಲ್ಲಿದೆ ಎನ್ನುವುದು ಮರೆಯಬೇಡಿ.ನಿಮಗೆ ಅಷ್ಟೊಂದು ಸ್ವಾತಂತ್ರ್ಯ ಹೋರಾಟಗಾರರ ಮೇಲೆ ಪ್ರೀತಿ ಇದ್ದರೆ ಜನರಿಗೆ ಕೊಟ್ಟ ಮಾತು ಉಳಿಸಿಕೊಳ್ಳಬೇಕು ಎನ್ನುವ ಮನಸಿದ್ದರೇ ಆಗಸ್ಟ್ 15 ರಂದು ನಮಕ್ಕಿಂತ ಮೊದಲೂ ರಾಯಣ್ಣನವರ ಮೂರ್ತಿಗೆ ಪೂಜೆ ಮಾಡಿ.ಒಂದು ವೇಳೆ ನೀವು ಪೂಜೆ ಸಲ್ಲಿಸದೆ ನಮಗೂ ಪೂಜೆ ಮಾಡಲು ಬಿಡದ ರೀತಿಯಲ್ಲಿ ಏನಾದರೂ ಹುನ್ನಾರ ಮಾಡಿದರೇ ಉಗ್ರವಾದ ಹೋರಾಟ ಮಾಡಲು ತಾವೇ ಪ್ರೇರಣೆಯಾಗುತ್ತಿರಿ ಎಂದರು. ತಾಲೂಕಿನ ಬಿಜೆಪಿ ಮುಖಂಡರು ಸಹ ಮಾತೆತ್ತಿದರೆ ಹಿಂದುತ್ವ ದೇಶ ನಾಡು ನುಡಿ ಎನ್ನುವವರು ಮಾಶಾಳ ಗ್ರಾಮಕ್ಕೆ ಬಂದು ಸಂಗೊಳ್ಳಿ ರಾಯಣ್ಣನವರ ಮೂರ್ತಿಗೆ ಪೂಜೆ ಯಾಕೆ ಸಲ್ಲಿಸಲಿಲ್ಲ.ಬಿಜೆಪಿ ಮುಖಂಡರಾದ ನಿತೀನ್ ಗುತ್ತೇದಾರ ಅವರು ಮಾಶಾಳ ಗ್ರಾಮಕ್ಕೆ ಅದೆಷ್ಟೋ ಬಾರಿ ಬಂದು ಹೋಗಿದ್ದಾರೆ. ಆದರೆ ಸಂಗೊಳ್ಳಿ ರಾಯಣ್ಣನವರ ಮೂರ್ತಿ ವಿಚಾರವಾಗಿ ಒಂದು ಮಾತು ಆಡಿಲ್ಲ. ಅಫ್ಜಲಪುರ ಪಟ್ಟಣದಲ್ಲಿ ಹಿಂದುತ್ವದ ಬಗ್ಗೆ ಪ್ರತಿಭಟನೆಗಳು,ಹಿಂದೂಗಳೇ ಒಂದಾಗಿ ಎಂದು ಪ್ರಚಾರ ಗಿಟ್ಟಿಸಿಕೊಳ್ಳುವ ಇವರು ಇವರ ಕ್ಷೇತ್ರದಲ್ಲಿಯೇ ಅಪ್ಪಟ ಹಿಂದೂ ಹುಲಿ ರಾಯಣ್ಣರಿಗೆ ಅಪಮಾನವಾಗುತ್ತಿದ್ದರೂ ತಮಗೂ ಅದಕ್ಕೂ ಸಂಬಂಧವಿಲ್ಲ ಎಂಬಂತೆ ವರ್ತಿಸುತ್ತಿರುವುದು ಸಂಗೊಳ್ಳಿ ರಾಯಣ್ಣನವರ ಅಭಿಮಾನಿಗಳು ಸೂಕ್ಷ್ಮವಾಗಿ ಅವಲೋಕಿಸುತ್ತಿದ್ದಾರೆ. ಇದಕ್ಕೆಲ್ಲ ತಮ್ಮ ಹಿತಾಸಕ್ತಿಗಳಿಗಾಗಿ ಜನರಲ್ಲಿಗೆ ಹೋದಾಗ ತಕ್ಕ ಉತ್ತರ ನೀಡುತ್ತಾರೆ ಎಂದರು.ಪ್ರಜ್ಞಾವಂತ ನಾಗರಿಕರು ವಿಚಾರ ಮಾಡಬೇಕು.ಸ್ವಾತಂತ್ರ್ಯ ಹೋರಾಟಗಾರರಿಗೆ

ಗೌರವ ನೀಡುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಆಗಸ್ಟ್15 ರಂದು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಪೂಜೆಯಲ್ಲಿ ಪಾಲ್ಗೊಳ್ಳಬೇಕು ಎಂದರು.ರಾಯಣ್ಣನವರ ಮೂರ್ತಿ ಪೂಜೆಗೆ ಎಷ್ಟೆ ತಡೆಯೊಡ್ಡಿದರೂ ನನ್ನ ಮೇಲೆ ಪ್ರಕರಣ ದಾಖಲಿಸಿದರೂ ಚಿಂತೆಯಿಲ್ಲ.ನಾನು ಪೂಜೆ ಮಾಡೆ ಮಾಡುತ್ತೆನೆ ಎಂದರು.ಸಂಗೊಳ್ಳಿ ರಾಯಣ್ಣ ಜೀವಂತವಿದ್ದು ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡುವಾಗ ಬ್ರಿಟಿಷರು ಅವರನ್ನು ಬಂದಿ ಮಾಡಿ ನೇಣಿಗೆರಿಸಿದರು. ಆದರೆ ಈಗ ಅವರ ಮೂರ್ತಿಗೆ ಕಾನೂನಿನ ಕಟ್ಟಪ್ಪಣೆಯಲ್ಲಿ ಬಂದಿ ಮಾಡಲಾಗಿದೆ.ಇದನ್ನು ಇಂದಿನ ಪ್ರಜ್ಞಾವಂತ ನಾಗರಿಕರು ವಿಚಾರಿಸುವಂತವರಾಗಬೇಕು. ರಾಯಣ್ಣ ಈ ದೇಶದ ಸ್ವತ್ತು ನಮ್ಮ ಸ್ವಾತಂತ್ರ್ಯಕ್ಕಾಗಿ ಜೀವ ತ್ಯಾಗ ಮಾಡಿದವರು.ಅವರ ಸಲುವಾಗಿ ನಾವೆಲ್ಲರೂ ಒಟ್ಟಾಗಿ ಎಲ್ಲದಕ್ಕೂ ಸನ್ನದರಾಗಿ ಪೂಜೆ ಸಲ್ಲಿಸಲು ಮುಂದಾಗಬೇಕು ಎಂದರು.

# ಮೇಲ್ಛಾವಣಿ ಕುಸಿದು ಬಿದ್ದು ಬಾಲಕಿ ದುರ್ಮರಣ

ಜೇವರ್ಗಿ, ಜು.15: ಬಿರುಗಾಳಿ, ಮಳೆಗೆ ಮನೆಯ ಮೇಲ್ಛಾವಣಿ ಒಂದು ಭಾಗ ಕುಸಿದು ಬಿದ್ದ ಪರಿಣಾಮ ಬಾಲಕಿಯೊಬ್ಬಳು ಮೃತಪಟ್ಟ ಘಟನೆ ತಾಲ್ಲೂಕಿನ ಮುತ್ತಕೋಡ್ ಗ್ರಾಮದಲ್ಲಿ ಸೋಮವಾರ ರಾತ್ರಿ ಸಂಭವಿಸಿದೆ. ಮೃತಳನ್ನು ಆರಾಧ್ಯ ಮಲ್ಲಪ್ಪ ಪಸಪೂರ್ (05) ಎಂದು ಗುರುತಿಸಲಾಗಿದೆ.

ಮನೆಯೊಳಗೆ ಆಟವಾಡುತ್ತಿದ್ದ ಬಾಲಕಿಯ ಮೇಲೆ ಏಕಾಏಕಿ



ಮೇಲ್ಛಾವಣಿ ಕುಸಿದುಬಿದ್ದಿದ್ದು, ಆಕೆ ಸ್ಥಳದಲ್ಲೇ ಕೊನೆಯುಸಿರೆಳೆದಿದ್ದಾಳೆ. ಘಟನೆಯ ವೇಳೆ ಬಾಲಕಿ

ಮೂವರು ಸಹೋದರಿಯರು ಇನ್ನೊಂದು ಕೋಣೆಯಲ್ಲಿದ್ದರೆ, ಅಡುಗೆ ಮನೆಯಲ್ಲಿದ್ದ ತಾಯಿ ಯಾವುದೇ ಅಪಾಯಗಳಿಲ್ಲದೇ ಪಾರಾಗಿದ್ದಾರೆ. ಈ ಕುರಿತು ನೆಲೋಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

# ಸಿದ್ದಾರ್ಥ ಗೋಯಲ್ ಬಾಗಲಕೋಟೆ ನೂತನ ಎಸ್ಪಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.15–ಬಾಗಲಕೋಟೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿ ಮಂಗಳೂರು ನಗರ ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಉಪ ಪೋಲಿಸ್ ಆಯುಕ್ತರಾಗಿದ್ದ ಸಿದ್ದಾರ್ಥ ಗೋಯಲ್ ಅವರನ್ನು ಸರಕಾರ ನೇಮಕ ಮಾಡಿದೆ.

ಈತನಕ ಜಿಲ್ಲಾಧಿಕಾರಿಯಾಗಿದ್ದ ಅಮರನಾಥ ರೆಡ್ಡಿ ಅವರನ್ನು ಬೆಂಗಳೂರಿನ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಯ 1ನೇ ಬೆಟಾಲಿಯನ್ ಕಮಾಂಡೆಂಟ್ ಹುದ್ದೆಗೆ ವರ್ಗಾಯಿಸಲಾಗಿದೆ.

# ಹೆಚ್ಚಿನ ದರಕ್ಕೆ ರಸಗೊಬ್ಬರ ಮಾರಾಟ: ಮಳಿಗೆಗಳ ಪರವಾನಿಗೆ ರದ್ದು

ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :ಜು.15: ಕೊಪ್ಪಳ ಜಿಲ್ಲೆಗೆ ಬೇಡಿ–ಕೆಯ ಅನ್ವಯ ರಸಗೊಬ್ಬರಗಳು ಸರಬರಾಜಾಗುತ್ತಿದ್ದು ಕೃಷಿ ಪರಿಕರ ಮಾರಾಟ ಮಳಿಗೆಗಳು ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ ರೈತರಿಗೆ ವಿತರಿಸಲಾಗುತ್ತಿದೆ. ರಸಗೊಬ್ಬರಗಳ ವಿತರಣೆಯನ್ನು ಕೃಷಿ ಇಲಾಖೆಯಿಂದ ಉಸ್ತುವಾರಿ ಮಾಡಲಾಗುತ್ತಿದ್ದು, ಉಲ್ಲಂಘನೆಗಳು ಕಂಡುಬಂದಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ.ಅದರಂತೆ ಯೂರಿಯಾ ರಸಗೊಬ್ಬರವನ್ನು ಹೆಚ್ಚಿನ ದರಕ್ಕೆ ಮಾರಾಟ ಮಾಡಿರುವ ಕುರಿತು ಸಹಾಯಕ ಕೃಷಿ ನಿರ್ದೇಶಕರು (ಜಾರಿದಳ) ಇವರ ಪರಿಶೀಲನೆಯಲ್ಲಿ ಕಂಡುಬಂದಿದ್ದು,ಮಾರಾಟಗಾರರಾದ ಕನಕಗಿರಿ ತಾಲ್ಲೂಕಿನ ಮುಸಲಾಪುರದ ಮೆ॥ ಸಜ್ಜಲಶ್ರೀ ಆಗ್ರೋ ಕೇಂದ್ರ ಮತ್ತು ಕೊಪ್ಪಳ ತಾಲ್ಲೂಕಿನ ಇರಕಲ್‌ಗಡಾದ ಮೆ॥ ಸ್ಪಂದನ ಆಗ್ರೋ ಟ್ರೇಡರ್ಸ್ ಇವರ ರಸಗೊಬ್ಬರ ಮಾರಾಟ ಪರವಾನಿಗೆಯನ್ನು ರಸಗೊಬ್ಬರ ನಿಯಂತ್ರಣ ಆದೇಶ 1985 ರ ಕ್ಲಾಸ್ 3, 4, 5, 8 ಮತ್ತು 35 ರ ಉಲ್ಲಂಘನೆಗಳಿಗಾಗಿ ಅಮಾನತುಗೊಳಿಸಲಾಗಿದೆ ಮತ್ತು ರಸಗೊಬ್ಬರ ನಿಯಂತ್ರಣ ಆದೇಶ 1985 ರ ಉಲ್ಲಂಘನೆಗಾಗಿ

ಇವರ ರಸಗೊಬ್ಬರ

ಮಾರಾಟ ಪರವಾನಿಗೆಗಳನ್ನು ರದ್ದುಗೊಳಿಸಲಾಗಿರುತ್ತದೆ. ರೈತರು ರಸಗೊಬ್ಬರ ಖರೀದಿಸುವ ಸಮಯದಲ್ಲಿ ಮಾರಾಟಗಾರರು ಖರೀದಿ ಬಿಲ್ ಅನ್ನು ನೀಡದೇ ಇದ್ದಲ್ಲಿ ಅಥವಾ ಕೃಷಿ ಪರಿಕರಗಳನ್ನು ಹೆಚ್ಚಿನ ದರದಲ್ಲಿ ಮಾರಾಟ ಮಾಡುವುದು

ಕಂಡುಬಂದಲ್ಲಿ ಅಥವಾ ಕಳಪೆ ಗುಣಮಟ್ಟದ ರಸಗೊಬ್ಬರ ಕಂಡುಬಂದಲ್ಲಿ ಕೃಷಿ ಅಧಿಕಾರಿ ಅಥವಾ ಸಹಾಯಕ ಕೃಷಿ ನಿರ್ದೇಶಕರು ಅಥವಾ ಸಹಾಯಕ ಕೃಷಿ ನಿರ್ದೇಶಕರು (ಜಾರಿದಳ), ಜಂಟಿ ಕೃಷಿ ನಿರ್ದೇಶಕರ ಕಛೇರಿ, ಕೊಪ್ಪಳ ಮೊಬೈಲ್ ಸಂಖ್ಯೆ: 8277932117 ಇವರನ್ನು ಸಂಪರ್ಕಿಸಿ ಮಾಹಿತಿ ನೀಡಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ಕಲ್ಯಾಣ ಕರ್ನಾಟಕ ಪತ್ರಕರ್ತ ಪ್ರಶಸ್ತಿಗೆ ಇಬ್ಬರ ಆಯ್ಕೆ







ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜು.15:ಸೇಡಂ ನ ಬೊಮ್ಮನಳ್ಳಿ ಸುದ್ದಿ ಪ್ರತಿಷ್ಠಾನ ವತಿಯಿಂದ ಕೊಡಮಾಡುವ ಕಲ್ಯಾಣ ಕರ್ನಾಟಕ ಪತ್ರಕರ್ತ ಪ್ರಶಸ್ತಿಗೆ ಇಬ್ಬರು ಪತ್ರಕರ್ತರನ್ನು ಹಾಗೂ ಲಿಂ.ಶಿವಯ್ಯ ಮಠಪತಿ ಅವರ ಸ್ಮರಣಾರ್ಥ ಕೊಡುವ ಪ್ರಶಸ್ತಿಗೆ ಶೈಕ್ಷಣಿಕ ಸಾಧಕರನ್ನು ಆಯ್ಕೆ ಮಾಡಲಾಗಿದೆ ಎಂದು ಪ್ರತಿಷ್ಠಾನದ ಕಾರ್ಯದರ್ಶಿ ಮಹಿಪಾಲರೆಡ್ಡಿ ಮುನ್ನೂರ್ ಅವರು ತಿಳಿಸಿದ್ದಾರೆ.

ಬೊಮ್ನಳ್ಳಿ ಸುದ್ದಿ ಸಂಪಾದಕ ಸ್ಥಾಪಿಸಿರುವ ಯುವ ಪತ್ರಕರ್ತ ವೀರಭದ್ರ ಮಾಮನಿ ಸ್ಮರಣಾರ್ಥ 16ನೇ ವರ್ಷದ ಕಲ್ಯಾಣ ಕರ್ನಾಟಕ ಪತ್ರಕರ್ತ ಪ್ರಶಸ್ತಿಗೆ ಕಲಬುರ್ಗಿ ದೃಶ್ಯಮಾಧ್ಯಮ ವರದಿಗಾರ ಅರುಣ್ ಕದಂ ಹಾಗೂ ಬೀದರಿನ ಪತ್ರಕರ್ತ ಅಪ್ಪಾರಾವ್ ಸೌದಿ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಅವರು ಹೇಳಿಕೆಯಲ್ಲಿ ವಿವರಿಸಿದ್ದಾರೆ.

ಶಿಕ್ಷಣ ತಜ್ಞ ಲಿಂ.ಶಿವಯ್ಯ ಮಠಪತಿ ಅವರ ಸ್ಮರಣಾರ್ಥ ಮೂರನೇ ವರ್ಷದ ಪ್ರಶಸ್ತಿಗೆ ಶಿಕ್ಷಣ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿರುವ ಗುರುಕುಲ ವಿದ್ಯಾಪೀಠದ

ಬಸವರಾಜ್ ಡಿಗ್ಗಾವಿ ಅವರನ್ನು ಆಯ್ಕೆ ಮಾಡಲಾಗಿದ್ದು, ಪ್ರತಿಷ್ಠಾನದ ಅಧ್ಯಕ್ಷ ಶಿವಯ್ಯ ಸ್ವಾಮಿ ಬಿಬ್ಬಳ್ಳಿ, ಖಜಾಂಚಿ ಸಿದ್ದಪ್ಪ ತಳ್ಳಳ್ಳಿ, ಸ್ಥಾಪಕ ಸಂಚಾಲಕ ನಾಗಯ್ಯ ಸ್ವಾಮಿ ಬೊಮ್ನಳ್ಳಿ ಹಾಗೂ ಹಿರಿಯ ಪತ್ರಕರ್ತ ಪ್ರಭಾಕರ ಜೋಶಿ ಅವರು ಆಯ್ಕೆ ಸಮಿತಿಯಲ್ಲಿದ್ದರು. ಇದೇ ಜುಲೈ 23ರಂದು ಬೆಳಿಗ್ಗೆ 10.45 ಕ್ಕೆ ಸೇಡಂ ನಗರದ ಶ್ರೀ ಕೊತ್ತಲ ಬಸವೇಶ್ವರ ದೇವಾಲಯದ ಸಭಾಂಗಣದಲ್ಲಿ ನಡೆಯುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ.

# ಸಾಲ ಬಾಧೆಗೆ ರೈತ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಶಹಪುರ:ಜು.15: ತಾಲೂಕಿನ ದೊರನಹಳ್ಳಿ ಗ್ರಾಮದ ಬನ್ನಪ್ಪ ತಂದೆ ಮಹಾಂತಪ್ಪ ಸಜ್ಜನ್ ವಯಸ್ಸು –(45) ಸಾಲ ಬಾಧೆಯಿಂದ ನೇಣು ಬಿಗಿದುಕೊಂಡು ರೈತ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ದೋರನಹಳ್ಳಿ ಗ್ರಾಮದ ಸರ್ವೆ ನಂಬರ 34/5 ಇರುತ್ತದೆ. ಸದರಿ ಜಮೀನು ತಾಯಿ ಹೆಸರಲ್ಲಿರುತ್ತದೆ. ಕರ್ನಾಟಕ ಗ್ರಾಮೀಣ ಬ್ಯಾಂಕ ದೋರನಹಳ್ಳಿ



ಯಲ್ಲಿ ಒಂದು ಲಕ್ಷ , ಕೈ ಸಾಲ ಐದರಿಂದ ಎಂಟು ಲಕ್ಷ ಇದೆ ಎಂದು ಸ್ಥಾನಿಕ ವಿಚಾರಣೆಯಿಂದ ತಿಳಿದು ಬಂದಿರುತ್ತದೆ.

ಮೃತನಿಗೆ ಒಬ್ಬಳು ಹೆಂಡತಿ, ತಾಯಿ ಮತ್ತು ಒಂದು ಗಂಡು , ಒಂದು ಹೆಣ್ಣು ಮಕ್ಕಳಿದ್ದು ಕುಟುಂಬದವರ ಆಕ್ರಂದನ ಮುಗಿಲು ಮುಟ್ಟಿದ್ದು, ಶಹಾಪುರ ಸರ್ಕಾರಿ ಆಸ್ಪತ್ರೆಯಲ್ಲಿ ಶವಪರೀಕ್ಷೆ ನಡೆಸಿದ್ದು ಶಹಾಪುರ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.